ದೆಹಲಿ ವಾರ್ತೆ

ಸೆಪ್ಟಂಬರ್ 5, 2026, ಶನಿವಾರ




ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು



ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು

## ಪ್ರಜಾಸೇವಾ ಇಲಾಖೆ

# ಪ್ರಜಾಸೇವೆ ಉದ್ಘಾಟನೆ

## ಅಹವಾಲು ನಿಮ್ಮದು, ಪರಿಹಾರ ನಮ್ಮದು

ಸನ್ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಡಿ.ಕೆ. ಶಿವಕುಮಾರ್** ಅವರಿಂದ
ವಿಜಯನಗರ ಜಿಲ್ಲೆ, ಕೂಡ್ಲಿಗಿಯಲ್ಲಿ ರಾಜ್ಯ ಮಟ್ಟದಲ್ಲಿ ಚಾಲನೆ ಹಾಗೂ

**ರಾಜ್ಯಾದ್ಯಂತ ಆಯಾ ಜಿಲ್ಲೆಗಳ ಉಸ್ತುವಾರಿ ಸಚಿವರಿಂದ ಪ್ರಜಾಸೇವೆ ಸಭೆಗಳು ನಡೆಯಲಿವೆ**
**ದಿನಾಂಕ: 05.09.2026 ಸಮಯ: ಬೆಳಿಗ್ಗೆ 10.30ಕ್ಕೆ**



**ಡಾ॥ ಜಿ. ಪರಮೇಶ್ವರ**
ಮಾನ್ಯ ಉಪ ಮುಖ್ಯಮಂತ್ರಿಗಳು
ಕಂದಾಯ ಹಾಗೂ ಯುವಜನ ಸೇವಾ ಮತ್ತು ಕ್ರೀಡಾ ಸಚಿವರು
ಸ್ಥಳ: ಡಾ. ಗುಬ್ಬಿ ವೀರಣ್ಣ ರಂಗಮಂದಿರ ಗುಬ್ಬಿ, ತುಮಕೂರು ಜಿಲ್ಲೆ



**ಶ್ರೀ ಕೆ.ಜೆ. ಜಾರ್ಜ್**
ಮಾನ್ಯ ಇಂಧನ ಹಾಗೂ ಪ್ರವಾಸೋದ್ಯಮ ಸಚಿವರು
ಸ್ಥಳ: ನಾರಾಯಣಗುರು ಸಮುದಾಯ ಭವನ,
ನರಸಿಂಹರಾಜಪುರ, ಚಿಕ್ಕಮಗಳೂರು ಜಿಲ್ಲೆ



**ಶ್ರೀ ಪ್ರಿಯಾಂಕ್ ಖರ್ಗೆ**
ಮಾನ್ಯ ಗೃಹ ಹಾಗೂ ಐಟಿ-ಬಿಟಿ ಸಚಿವರು
ಸ್ಥಳ: ಸರ್ಕಾರಿ ಪ್ರಥಮ ದರ್ಜೆ ಕಾಲೇಜು
ಕಮಲಾಪುರ, ಕಲಬುರಗಿ



**ಶ್ರೀ ಕೃಷ್ಣ ಬೈರೇಗೌಡ**
ಮಾನ್ಯ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ
ಸಂಸದೀಯ ವ್ಯವಹಾರಗಳ ಸಚಿವರು
ಸ್ಥಳ: ಸರ್ಕಾರಿ ಪ್ರೌಢಶಾಲಾ ಆವರಣ, ಬಿದರಹಳ್ಳಿ ಗ್ರಾಮ,
ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ



**ಶ್ರೀ ಶಿವರಾಜ ಎಸ್ ತಂಗಡಗಿ**
ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು
ಇವರ ಪರವಾಗಿ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ
ಜಿಲ್ಲಾಧಿಕಾರಿಗಳು ಪ್ರಜಾಸಭೆ ನಡೆಸುವರು
ಸ್ಥಳ: ಚಿಕ್ಕವಂಕಲಕುಂಟ, ಯಲಬುರ್ಗಾ ತಾಲ್ಲೂಕು, ಕೊಪ್ಪಳ ಜಿಲ್ಲೆ



**ಶ್ರೀ ಪಿ.ಎಂ. ನರೇಂದ್ರ ಸ್ವಾಮಿ**
ಮಾನ್ಯ ಕೃಷಿ ಸಚಿವರು
ಸ್ಥಳ: ಡಾ.ಬಿ.ಆರ್. ಅಂಬೇಡ್ಕರ್ ಭವನ,
ಮಡಿಕೇರಿ, ಕೊಡಗು ಜಿಲ್ಲೆ



**ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್**
ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು
ಸ್ಥಳ: ತರಳಬಾಳು ಸಮುದಾಯ ಭವನ ಗೊಲ್ಲರಹಳ್ಳಿ
ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ



**ಶ್ರೀ ಕೆ.ಎಸ್. ಬಸವಂತಪ್ಪ**
ಮಾನ್ಯ ಮುಜರಾಯಿ, ಮೀನುಗಾರಿಕೆ,
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು
ಸ್ಥಳ: ಶಾಸಕರ ಕಛೇರಿ ಮುಂಭಾಗ, ಗುಡೇಕೋಟೆ ರಸ್ತೆ,
ಕೂಡ್ಲಿಗಿ, ವಿಜಯನಗರ ಜಿಲ್ಲೆ



**ಶ್ರೀ ಟಿ. ರಘುಮೂರ್ತಿ**
ಮಾನ್ಯ ಪರಿಶಿಷ್ಟ ಪಂಗಡ ಕಲ್ಯಾಣ ಸಚಿವರು
ಸ್ಥಳ: ನೆಹರು ಮೈದಾನ, ಹಿರಿಯೂರು, ಚಿತ್ರದುರ್ಗ ಜಿಲ್ಲೆ



**ಶ್ರೀ ರಾಮಲಿಂಗಾರೆಡ್ಡಿ**
ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು
ಸ್ಥಳ: ಜ್ಯೂನಿಯರ್ ಕಾಲೇಜು ಆವರಣ, ಕೋಲಾರ



**ಶ್ರೀ ಎಂ.ಬಿ. ಪಾಟೀಲ**
ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು
ಸ್ಥಳ: ಗುರುಕೃಪ ಮಂಗಲ ಕಾರ್ಯಾಲಯ, ಗೋಡಿಹಾಳ ರಸ್ತೆ,
ಚಡಚಣ ಪಟ್ಟಣ, ವಿಜಯಪುರ ಜಿಲ್ಲೆ



**ಶ್ರೀ ಲಕ್ಷ್ಮಣ ಸವದಿ**
ಮಾನ್ಯ ಸಹಕಾರ ಸಚಿವರು
ಸ್ಥಳ: ಸ್ವಾತಂತ್ರ್ಯ ಸಂಗ್ರಾಮ ಭವನ
ಅಂಕೋಲಾ, ಉತ್ತರ ಕನ್ನಡ ಜಿಲ್ಲೆ



**ಶ್ರೀ ಬಸವರಾಜ ರಾಯರಡ್ಡಿ**
ಮಾನ್ಯ ಉನ್ನತ ಶಿಕ್ಷಣ ಸಚಿವರು
ಇವರ ಪರವಾಗಿ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ
ಜಿಲ್ಲಾಧಿಕಾರಿಗಳು ಪ್ರಜಾಸಭೆ ನಡೆಸುವರು
ಸ್ಥಳ: ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್, ಗದಗ



**ಡಾ. ಶರಣಪ್ರಕಾಶ್ ಪಾಟೀಲ್**
ಮಾನ್ಯ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ
ಜೀವನೋಪಾಯ ಖಾತೆ ಸಚಿವರು
ಸ್ಥಳ: ವೀರಶೈವ ಕಲ್ಯಾಣ ಮಂಟಪ
ಸುರಪುರ, ಯಾದಗಿರಿ ಜಿಲ್ಲೆ



**ಶ್ರೀ ಬೈರತಿ ಸುರೇಶ್**
ಮಾನ್ಯ ಸಾರಿಗೆ ಸಚಿವರು
ಇವರ ಪರವಾಗಿ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ
ಜಿಲ್ಲಾಧಿಕಾರಿಗಳು ಪ್ರಜಾಸಭೆ ನಡೆಸುವರು
ಸ್ಥಳ: ಸರ್ಕಾರಿ ಬಾಲಕಿಯರ ಶಾಲೆ, ಕಸಬಾ ಹೋಬಳಿ,
ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ



**ಶ್ರೀ ಸಿ. ಪುಟ್ಟರಂಗಶೆಟ್ಟಿ**
ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು
ಸ್ಥಳ: ತಾಲ್ಲೂಕು ಪಂಚಾಯತ್ ಸಭಾಂಗಣ
ಚಾಮರಾಜನಗರ



**ಶ್ರೀ ವಿಜಯಾನಂದ ಕಾಶಪ್ಪನವರ**
ಮಾನ್ಯ ಸಣ್ಣ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು
ಸ್ಥಳ: ಕರಿನಂದಿ ಕಲ್ಯಾಣ ಮಂಟಪ, ಗುಳೇದ ಗುಡ್ಡ,
ಬಾಗಲಕೋಟೆ ಜಿಲ್ಲೆ



**ಡಾ॥ ಯತೀಂದ್ರ ಸಿದ್ದರಾಮಯ್ಯ**
ಮಾನ್ಯ ನಗರಾಭಿವೃದ್ಧಿ ಸಚಿವರು
ಸ್ಥಳ: ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ
ಹುಣಸೂರು, ಮೈಸೂರು ಜಿಲ್ಲೆ



**ಶ್ರೀ ಕೆ.ಹೆಚ್. ಮುನಿಯಪ್ಪ**
ಮಾನ್ಯ ಸಮಾಜ ಕಲ್ಯಾಣ ಇಲಾಖೆ ಸಚಿವರು
ಸ್ಥಳ: ಅನ್ನಪೂರ್ಣ ಕನ್ವೆನ್ಷನ್ ಹಾಲ್, ವಿಜಯಪುರ,
ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ



**ಶ್ರೀ ಎನ್. ಚಲುವರಾಯಸ್ವಾಮಿ**
ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು
ಸ್ಥಳ: ತಾಲ್ಲೂಕು ಕ್ರೀಡಾಂಗಣ, ಮದ್ದೂರು, ಮಂಡ್ಯ ಜಿಲ್ಲೆ



**ಶ್ರೀ ಯು.ಟಿ. ಖಾದರ್**
ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಅಲ್ಪಸಂಖ್ಯಾತರ ಕಲ್ಯಾಣ, ವಕ್ಫ್, ಹಜ್ ಸಚಿವರು
ಸ್ಥಳ: ಪುರಭವನ, ಪುತ್ತೂರು, ದಕ್ಷಿಣ ಕನ್ನಡ ಜಿಲ್ಲೆ



**ಶ್ರೀ ರುದ್ರಪ್ಪ ಮಾನಪ್ಪ ಲಮಾಣಿ**
ಮಾನ್ಯ ಸಕ್ಕರೆ ಮತ್ತು ಜವಳಿ ಸಚಿವರು
ಸ್ಥಳ: ಶ್ರೀ ಕುಮಾರೇಶ್ವರ ಮಠ
ಹಾನಗಲ್, ಹಾವೇರಿ ಜಿಲ್ಲೆ



**ಶ್ರೀ ಸಂತೋಷ್ ಲಾಡ್**
ಮಾನ್ಯ ಕಾರ್ಮಿಕ ಸಚಿವರು
ಸ್ಥಳ: ಜನತಾ ಇಂಗ್ಲಿಷ್ ಸ್ಕೂಲ್, ವಿದ್ಯಾನಗರ,
ಕಲಘಟಗಿ, ಧಾರವಾಡ ಜಿಲ್ಲೆ



**ಶ್ರೀ ಎಚ್.ಸಿ. ಬಾಲಕೃಷ್ಣ**
ಮಾನ್ಯ ಪೌರಾಡಳಿತ ಸಚಿವರು
ಸ್ಥಳ: ಡಾ. ಬಿ.ಆರ್. ಅಂಬೇಡ್ಕರ್ ಭವನ ಚನ್ನಪಟ್ಟಣ
ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆ



**ಶ್ರೀ ಕೆ.ಎಂ. ಶಿವಲಿಂಗೇಗೌಡ**
ಮಾನ್ಯ ಅಬಕಾರಿ ಸಚಿವರು
ಸ್ಥಳ: ಜಿಲ್ಲಾಧಿಕಾರಿಗಳ ಕಛೇರಿ ಆವರಣ, ಹಾಸನ



**ಡಾ. ಅಜಯ್ ಧರ್ಮಸಿಂಗ್**
ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು
ಸ್ಥಳ: ಬಾಪುಮಿಯಾ ಸಾಹುಕಾರ ಸರಕಾರಿ ಪ್ರಥಮ ದರ್ಜೆ
ಕಾಲೇಜು, ಮಾನ್ವಿ ಪಟ್ಟಣ, ರಾಯಚೂರು ಜಿಲ್ಲೆ



ಬಳ್ಳಾರಿ
ಜಿಲ್ಲೆಯ ಶಾಸಕರುಗಳು ತಮ್ಮ ವಿಧಾನಸಭಾ ಕ್ಷೇತ್ರಗಳಲ್ಲಿ
ಪ್ರಜಾಸೇವಾ ಸಭೆಗಳನ್ನು ನಡೆಸಲಿದ್ದಾರೆ.

[ **ಕಾರಣಾಂತರಗಳಿಂದ ಬೆಳಗಾವಿ, ಬೀದರ್, ಶಿವಮೊಗ್ಗ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರಜಾಸೇವಾ ಅಭಿಯಾನ ಸಭೆಗಳನ್ನು ಮುಂದೂಡಲಾಗಿದೆ.** ]


**ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರ ರಾಜ್ಯದ ಎಲ್ಲಾ ಜಿಲ್ಲೆ, ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಆಯಾ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರ ಅಧ್ಯಕ್ಷತೆಯಲ್ಲಿ ಪ್ರಜಾಸೇವಾ ಅಭಿಯಾನ ಸಭೆಗಳು ನಡೆಯಲಿದ್ದು, ಜನರಿಂದ ಅಹವಾಲು ಸ್ವೀಕರಿಸಿ ಅರ್ಹ ಅರ್ಜಿಗಳಿಗೆ ಪರಿಹಾರ ಒದಗಿಸಲಾಗುವುದು**

ಬಾಗಿಲಿಗೆ ಬಂತು ಸರಕಾರ, ಸೇವೆಗೆ ಇರಲಿ ಸಹಕಾರ

ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಸರ್ವರಿಗೂ ಆದರದ ಸ್ವಾಗತ

## ನಿತ್ಯ ಪಂಚಾಂಗ 5.09.2026 ಶನಿವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ–ಬಾದ್ರಪದ ಮಾಸ

ಶ್ರಾವಣ ಬಹುಳ, ನವಮಿ, ಮೃಗಶಿರ ನಕ್ಷತ್ರ, ಶ್ರಾವಣ ಶನಿವಾರ, ಸುರಪುರ ಸಂಭಾರೋಪಣ, ಶಿಕ್ಷಕರ ದಿನ, ತೋಳಪ್ಪರ್ ಕೃಷ್ಣ ಜಯಂತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಬಿಜೆಪಿ ಸರ್ಕಾರದಲ್ಲೇ ಶೇ.7 ಉದ್ಯೋಗ ಕಡಿತ ಆದೇಶ: ಸಚಿವ ಖಂಡ್ರೆ ತಿರುಗೇಟು



**ಬೆಂಗಳೂರು, ಸೆ.4:** ಕೆ.ಆರ್.ಐ.ಡಿ.ಎಲ್.ನಲ್ಲಿ ಶೇ.7ರಷ್ಟು ಉದ್ಯೋಗ ಕಡಿತಕ್ಕೆ ಬಿಜೆಪಿ ಸರ್ಕಾರದ ಅವಧಿಯಲ್ಲೇ ಸುತ್ತೋಲೆ ಹೊರಡಿಸಲಾಗಿದ್ದರೂ, ಪ್ರತಿಪಕ್ಷ ನಾಯಕರು ಕಾಂಗ್ರೆಸ್ ಸರ್ಕಾರವನ್ನು ದೂಷಿಸುತ್ತಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಈಶ್ವರ ಖಂಡ್ರೆ ತಿರುಗೇಟು ನೀಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಗಳೂರು ಕೆ.ಆರ್.ಐ.ಡಿ.ಎಲ್.ನ ಇಬ್ಬರು ಎಂಜಿನಿಯರುಗಳ ಮೇಲೆ ಪುತ್ತೂರಿನ ಶಾಸಕ ಅಶೋಕ್ ಕುಮಾರ್ ರೈ ಆರೋಪ ಮಾಡಿ ಮುಖ್ಯಮಂತ್ರಿಗಳಿಗೆ ಪತ್ರ ಬರೆದ ವಿಷಯ ತಿಳಿದ ಕೂಡಲೇ ತಾವು ಸೂಪರಿಂಟೆಂಡೆಂಟ್ ಎಂಜಿನಿಯರ್ ದರ್ಜೆಯ ಅಧಿಕಾರಿ ನೇತೃತ್ವದ ತಂಡದಿಂದ ತನಿಖೆಗೆ ಆದೇಶ ನೀಡಿ, 7 ದಿನಗಳಲ್ಲಿ ವರದಿ ನೀಡಲು ಸೂಚಿಸಿರುವುದಾಗಿ ತಿಳಿಸಿದರು.

ವರದಿಯಲ್ಲಿ ಶಾಸಕರು ಹೆಸರಿಸಿರುವ ಎಂಜಿನಿಯರುಗಳು ಭ್ರಷ್ಟಾಚಾರ ಮಾಡಿರುವುದು ಸಾಬೀತಾದರೆ, ಅಮಾನತು ಮಾಡಿ, ನಿಯಮಾನುಸಾರ ಕ್ರಮ ವಹಿಸಲಾಗುವುದು. ತನಿಖಾ ವರದಿ ಬರುವ ಮೊದಲೇ ಪ್ರತಿಪಕ್ಷದ ನಾಯಕರು ಆತುರ ತೋರುತ್ತಿರುವುದು ಹಾಸ್ಯಾಸ್ಪದ ಎಂದರು.

ಗ್ರಾಮೀಣಾಭಿವೃದ್ಧಿ ಇಲಾಖೆ ಪಾರದರ್ಶಕ, ಜನಸ್ನೇಹಿ ಮತ್ತು ಭ್ರಷ್ಟಾಚಾರ ಮುಕ್ತವಾಗಿರಬೇಕು ಎಂಬುದು ತಮ್ಮ ಆಶಯವಾಗಿದೆ. ಯಾವುದೇ ಅಧಿಕಾರಿ, ಸಿಬ್ಬಂದಿ ಸಚಿವರ ಹೆಸರು ಹೇಳಿ ಭ್ರಷ್ಟಾಚಾರ ಮಾಡಿರುವ ಬಗ್ಗೆ ಸಾಕ್ಷ್ಯ, ಪುರಾವೆ ಸಹಿತ ದೂರು ಬಂದರೆ ಯಾವ ಮುಲಾಜಿಗೂ ಒಳಗಾಗದೆ ಕಠಿಣ ಕ್ರಮ ಜರುಗಿಸುವುದಾಗಿ ಹೇಳಿದರು.

ಅಶೋಕ್ ಕುಮಾರ್ ರೈ ಆರೋಪಕ್ಕೆ ಸಂಬಂಧಿಸಿದಂತೆ ಕೆ.ಆರ್.ಐ.ಡಿ.ಎಲ್. ಎಂ.ಡಿ. ಸ್ಪಷ್ಟೀಕರಣ ನೀಡಿದ್ದಾರೆ. ಕೆಆರ್.ಐ.ಡಿ.ಎಲ್.ನ 203ನೇ ಆಡಳಿತ ಮಂಡಳಿ ಸಭೆಯಲ್ಲೇ ನಿರ್ಣಯ ಕೈಗೊಂಡು 2021ರ ಆಗಸ್ಟ್ 21ರಂದು ಶೇ.7ರಷ್ಟು ಜಾಬ್ ಉಳಿತಾಯ ಕಡಿತಕ್ಕೆ ಸುತ್ತೋಲೆ ಹೊರಡಿಸಲಾಗಿದೆ. ಆಗ ಯಾರ ಸರ್ಕಾರ ಇತ್ತು, ಯಾರು ಕೆ.ಆರ್.ಐ.ಡಿ.ಎಲ್. ಅಧ್ಯಕ್ಷರಾಗಿದ್ದರು ಎಂದು ಈಶ್ವರ ಖಂಡ್ರೆ ಪ್ರಶ್ನಿಸಿದರು. ಆದರೂ ಸಚಿವ ಹೆಸರು ಹೇಳಿ ಹಣ ಕೇಳುತ್ತಿದ್ದಾರೆ ಎಂಬ ಗುರುತರ ಆರೋಪ ಬಂದಿರುವ ಹಿನ್ನೆಲೆಯಲ್ಲಿ ತನಿಖೆಗೆ ಆದೇಶ ಕೊಟ್ಟಿದ್ದೇನೆ. ತನಿಖಾ ವರದಿ ಬಂದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು.

**ಅಶೋಕ್ ರಾಜೀನಾಮೆ ಕೊಟ್ಟಿದ್ದರೇ?**

1998ರಿಂದ 2006ರವರೆಗೆ ಅಶೋಕ್ ಬಗರ್‌ಹುಕುಂ ಸಮಿತಿ ಅಧ್ಯಕ್ಷರಾಗಿದ್ದರು. ಆಗ ಕಾನೂನುಬಾಹಿರವಾಗಿ ಅನರ್ಹ ಫಲಾನುಭವಿಗಳಿಗೆ 2500 ಎಕರೆ ಗೋಮಾಳದ ಜಮೀನು ಹಂಚಿಕೆ ಮಾಡಿದ್ದಾರೆ ಎಂಬ ಆರೋಪ ಬಂದಿತ್ತು. ಅಶೋಕ್ ಸೇರಿ 10 ಜನರ ವಿರುದ್ಧ ಎಫ್.ಐ.ಆರ್. ಕೂಡ ದಾಖಲಾಗಿತ್ತು. ಅದಾದ ಬಳಿಕ 2019ರಿಂದ 2023ರವರೆಗೆ ಅವರು ಕಂದಾಯ ಸಚಿವರಾಗಿದ್ದರು. ಆಗ ಅವರು ರಾಜೀನಾಮೆ ಕೊಟ್ಟರೇನು ಎಂದು ಈಶ್ವರ ಖಂಡ್ರೆ ಪ್ರಶ್ನಿಸಿದರು. ಲೊಟ್ಟೆ ಗೊಲ್ಲಹಳ್ಳಿಯ ಜಮೀನು ಡಿನೋಟಿಫಿಕೇಷನ್ ಗೆ ಸಂಬಂಧಿಸಿದ ಮತ್ತೊಂದು ಆರೋಪವೂ ಅವರ ಮೇಲಿತ್ತು. ರಾಜಕೀಯದಲ್ಲಿ ಆಧಾರರಹಿತ ಆರೋಪಗಳೂ ಬರುತ್ತವೆ. ಪ್ರತಿಪಕ್ಷಗಳು ತಾಳ್ಮೆಯಿಂದ ಇರಬೇಕು ಎಂದು ಆರ್. ಅಶೋಕ್ ಅವರಿಗೆ ಕಿವಿಮಾತು ಹೇಳಿದರು.

# ಕೆಐಎಡಿಬಿ ಸಾರ್ವಜನಿಕ ಸಂಸ್ಥೆಯೋ ರಿಯಲ್ ಎಸ್ಟೇಟ್ ಕಂಪನಿಯೋ? ಛಲವಾದಿ ನಾರಾಯಣಸ್ವಾಮಿ ಪ್ರಶ್ನೆ



**ಬೆಂಗಳೂರು, ಸೆ.4:** ಕೆಐಎಡಿಬಿಯಲ್ಲಿ ಭ್ರಷ್ಟಾಚಾರ ಮತ್ತು ನಿಯಮಬಾಹಿರ ಭೂ ಹಂಚಿಕೆ ನಡೆಯುತ್ತಿದೆ ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಕೈಗಾರಿಕೆ ಆರಂಭಿಸಲು ಅರ್ಜಿ ಸಲ್ಲಿಸಿರುವ ಅನೇಕ ದಲಿತ ಉದ್ಯಮಿಗಳಿಗೆ ವರ್ಷಗಳಾದರೂ ಜಮೀನು ಸಿಗದಿರುವಾಗ ಪ್ರಭಾವಿಗಳ ಕುಟುಂಬಸ್ಥರು ಹಾಗೂ ವಿವಿಧ ಸಂಸ್ಥೆಗಳ ಹೆಸರಿನಲ್ಲಿ ಕೋಟ್ಯಂತರ ಮೌಲ್ಯದ ಭೂಮಿ ಪಡೆದುಕೊಳ್ಳಲಾಗಿದೆ ಎಂದು ದೂರಿದರು. ದೇವನಹಳ್ಳಿ ಏರೋಸ್ಪೇಸ್ ಪಾರ್ಕ್‌ನಲ್ಲಿ 71 ಅರ್ಹ ಎಸ್‌ಸಿ, ಎಸ್‌ಟಿ ಅರ್ಜಿದಾರರಿಗೆ ಐದು ವರ್ಷಗಳಿಂದ ನಿವೇಶನ ಹಂಚಿಕೆಯಾಗಿಲ್ಲ. ರಿಯಾಯಿತಿ ದರದ ಸೌಲಭ್ಯವಿದ್ದರೂ ನಿಯಮಗಳನ್ನು ಕಡೆಗಣಿಸಿ ಭೂಮಿ ವಿತರಿಸಲಾಗುತ್ತಿದೆ ಎಂದು ಹೇಳಿದರು.

ಪದ್ಮಾವತಿ ಇನ್ಫ್ರಾಗೆ 15 ಎಕರೆ ಮಂಜೂರು ಮಾಡಿದ ವಿಚಾರದಲ್ಲೂ ಸರ್ಕಾರ ಉತ್ತರಿಸಿಲ್ಲ ಎಂದು ಆರೋಪಿಸಿದರು.

ಮಂಜುನಾಥ್ ಎಂಬ ವ್ಯಕ್ತಿಯ ಕುಟುಂಬಸ್ಥರು ಮತ್ತು ವಿವಿಧ ಕಂಪನಿಗಳ ಹೆಸರಿನಲ್ಲಿ ಹಂತ ಹಂತವಾಗಿ ಸುಮಾರು 17 ಎಕರೆ ಪಡೆದಿದ್ದಾರೆ ಎಂದು ಅವರು ದಾಖಲೆಗಳನ್ನು ಉಲ್ಲೇಖಿಸಿದರು. ಈ ಭೂಮಿಯ ಸರ್ಕಾರಿ ಮೌಲ್ಯ 50 ಕೋಟಿ ರೂ. ಇದ್ದರೂ, ಪ್ರಸ್ತುತ ಮಾರುಕಟ್ಟೆ ಮೌಲ್ಯ 200 ಕೋಟಿ ರೂ.ಗೂ ಅಧಿಕವಾಗಿದೆ ಎಂದು ನಾರಾಯಣಸ್ವಾಮಿ ತಿಳಿಸಿದರು.


# ಅಪೆಕ್ಸ್ ಬ್ಯಾಂಕ್ ಚುನಾವಣೆ: ಸೆ.9ರಂದು ನಿರ್ದೇಶಕರೊಂದಿಗೆ ಮುಖ್ಯಮಂತ್ರಿ ಮಹತ್ವದ ಸಭೆ

ಬೆಂಗಳೂರು, ಸೆ.4: ರಾಜ್ಯದ ಅಪೆಕ್ಸ್ ಬ್ಯಾಂಕ್‌ನ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಸೆ. 10 ರಂದು ಚುನಾವಣೆ ನಿಗದಿಯಾಗುತ್ತಿದ್ದಂತೆ ಕಾಂಗ್ರೆಸ್‌ನಲ್ಲಿ ಅಧ್ಯಕ್ಷ ಸ್ಥಾನಕ್ಕೆ ಪೈಪೋಟಿಯೇ ನಡೆದಿದ್ದು, ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇದೇ ತಿಂಗಳ 9 ರಂದು ಸಭೆ ಕರೆದಿದ್ದಾರೆ. ಅಪೆಕ್ಸ್ ಬ್ಯಾಂಕ್‌ನ ಅಧ್ಯಕ್ಷ ಸ್ಥಾನಕ್ಕೆ ಮಾಜಿ ಸಚಿವರಾದ ಕೆ.ಎನ್. ರಾಜಣ್ಣ, ಶಿವಾನಂದ ಪಾಟೀಲ್, ವಿಧಾನ ಪರಿಷತ್ ಸದಸ್ಯ ರವಿ ಸೇರಿದಂತೆ ಹಲವರ ನಡುವೆ ಪೈಪೋಟಿ ಏರ್ಪಡಿಸಿದ್ದು, ಒಮ್ಮತದ ಅಭ್ಯರ್ಥಿ ಆಯ್ಕೆ ಸಂಬಂಧ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೆ. 9ರಂದು ಅಪೆಕ್ಸ್ ಬ್ಯಾಂಕ್ ನಿರ್ದೇಶಕರುಗಳ ಸಭೆ ನಡೆಸಲಿದ್ದಾರೆ. ಬೆಂಗಳೂರಿನಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಸಹಕಾರ ಸಚಿವ ಲಕ್ಷ್ಮಣ ಸವದಿ, ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನಕ್ಕೆ ಅವಿರೋಧ ಆಯ್ಕೆ ಆಗಬೇಕು.

ಈ ಹಿಂದೆ ನಾನು ಸಹಕಾರ ಸಚಿವನಾಗಿದ್ದಾಗ ಅವಿರೋಧವಾಗಿ ಆಯ್ಕೆ ಮಾಡಿದ್ದೆ. ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿದ್ದೇನೆ. ಒಮ್ಮತದ ಅಭ್ಯರ್ಥಿ ಆಯ್ಕೆ ಸಂಬಂಧ ಸೆ. 9 ರಂದು ಮುಖ್ಯಮಂತ್ರಿಗಳು ಸಭೆ ಕರೆದಿದ್ದಾರೆ ಎಂದರು.

ಕೆಎಂಎಫ್‌ಗೂ ಚುನಾವಣೆ ಘೋಷಣೆ ಮಾಡುತ್ತೇವೆ. ಅಲ್ಲಿಯೂ ಕೂಡಾ ಅವಿರೋಧವಾಗಿ ಆಯ್ಕೆಯಾಗಲಿದೆ ಎಂದು ಅವರು ತಿಳಿಸಿದರು.

# ಸಹಕಾರ ಮಹಾಮಂಡಲದ ಅಧ್ಯಕ್ಷರಾಗಿ ಜಿ.ಟಿ. ದೇವೇಗೌಡ 7ನೇ ಬಾರಿಗೆ ಆಯ್ಕೆ



**ಬೆಂಗಳೂರು, ಸೆ.4:** ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳದ ಅಧ್ಯಕ್ಷರಾಗಿ ಶಾಸಕ, ಹಿರಿಯ ಸಹಕಾರಿ ಧುರೀಣ ಜಿ.ಟಿ. ದೇವೇಗೌಡ ಮರು ಆಯ್ಕೆಯಾಗಿದ್ದಾರೆ. ಇಂದು ನಡೆದ ಚುನಾವಣೆಯಲ್ಲಿ ಜಿ.ಟಿ. ದೇವೇಗೌಡ ಅಧ್ಯಕ್ಷರಾಗಿ ಹಾಗೂ ಬಿ.ಕೆ.ಶಿವಕುಮಾರ್ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು. ಜಿ.ಟಿ. ದೇವೇಗೌಡ ಅವರು ರಾಜ್ಯ ಸಹಕಾರ ಮಹಾ ಮಂಡಳದ ಅಧ್ಯಕ್ಷರಾಗಿ ಸತತ 7ನೇ ಬಾರಿಗೆ ಆಯ್ಕೆಯಾಗಿದ್ದಾರೆ. ಮುಂದಿನ ಐದು ವರ್ಷಗಳ ಅವಧಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಮಹಾ ಮಂಡಳದ ವ್ಯವಸ್ಥಾಪಕ ನಿರ್ದೇಶಕ ಕೆ.ಎಸ್. ನವೀನ್ ತಿಳಿಸಿದ್ದಾರೆ.

ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಗೆ ನಾಮಪತ್ರ ಸಲ್ಲಿಸುವ ಮುನ್ನ ಜಿ.ಟಿ. ದೇವೇಗೌಡ ಸೇರಿದಂತೆ ಮಹಾಮಂಡಳದ ಎಲ್ಲ ನಿರ್ದೇಶಕರು ಸದಾಶಿವನಗರದಲ್ಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿವಾಸಕ್ಕೆ ತೆರಳಿ ಅವರನ್ನು ಭೇಟಿಯಾಗಿ ಧನ್ಯಾವಾದ ಸಲ್ಲಿಸಿದರು.

# ಇಬ್ಬರು ಐಎಎಸ್, ಓರ್ವ ಐಎಫ್‌ಎಸ್ ಅಧಿಕಾರಿಗೆ ಹೆಚ್ಚುವರಿ ಹೊಣೆಗಾರಿಕೆ

**ಬೆಂಗಳೂರು, ಸೆ.4:** ಇಬ್ಬರು ಐಎಎಸ್ ಹಾಗೂ ಒಬ್ಬರು ಐಎಫ್‌ಎಸ್ ಅಧಿಕಾರಿಗೆ ಹೆಚ್ಚುವರಿ ಹೊಣೆಗಾರಿಕೆ ನೀಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಆಹಾರ ಗುಣಮಟ್ಟ ಮತ್ತು ಆಹಾರ ಸುರಕ್ಷತಾ ಪ್ರಾಧಿಕಾರದ ಆಯುಕ್ತ ಶ್ರೀನಿವಾಸ್ ಕೆ. (ಐಎಎಸ್) ಅವರಿಗೆ ಕರ್ನಾಟಕ ರಾಜ್ಯ ಔಷಧ ಸರಬರಾಜು ನಿಗಮದ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯ ಹೆಚ್ಚುವರಿ ಹೊಣೆಗಾರಿಕೆ ವಹಿಸಲಾಗಿದೆ. ಬೆಂಗಳೂರು ವಿದ್ಯುತ್ ಸರಬರಾಜು ನಿಗಮದ ವ್ಯವಸ್ಥಾಪಕ ನಿರ್ದೇಶಕ ಡಾ. ಶಿವಶಂಕರ ಎನ್. (ಐಎಎಸ್) ಅವರಿಗೆ ಕರ್ನಾಟಕ ವಿದ್ಯುತ್ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯ ಹೆಚ್ಚುವರಿ ಹೊಣೆಗಾರಿಕೆ ನೀಡಲಾಗಿದೆ. ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಹೊರಡಿಸಿದೆ. ಪಶುಸಂಗೋಪನೆ ಇಲಾಖೆಯ ಆಯುಕ್ತ ಲಿಂಗರಾಜು ಎಸ್.ಎಸ್. (ಐಎಫ್‌ಎಸ್) ಅವರಿಗೆ ರೇಷ್ಮೆ ಇಲಾಖೆಯ ಆಯುಕ್ತರ ಹುದ್ದೆ ಹಾಗೂ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯ ನಿರ್ದೇಶಕರ ಹುದ್ದೆಯ ಹೆಚ್ಚುವರಿ ಹೊಣೆಗಾರಿಕೆ ವಹಿಸಲಾಗಿದೆ.

# ಬಿಜೆಪಿ ಪಾದಯಾತ್ರೆ ಬಳ್ಳಾರಿ ತಲುಪುವ ಮುನ್ನವೇ ವಾಲ್ಮೀಕಿ ಪುತ್ತಳಿ ಅನಾವರಣಕ್ಕೆ ಸಂಪುಟ ಹಸಿರು ನಿಶಾನೆ

**;ಗಣಿ ನಾಡಿನಲ್ಲಿ ಗರಿಗೆದರಿದ ರಾಜಕೀಯ ಚಟುವಟಿಕೆ, ಬೃಹತ್ ಸಮಾರಂಭ ಆಯೋಜಿಸಲು ಕಾಂಗ್ರೆಸ್ ಸಿದ್ಧತೆ**



**ಬಳ್ಳಾರಿ, ಸೆ.4:** ಬಿಜೆಪಿ ಪಾದಯಾತ್ರೆ ಬಳ್ಳಾರಿ ತಲುಪುವ ಮುನ್ನವೇ ಗಣಿನಾಡಿನಲ್ಲಿ ರಾಜಕೀಯ ಚಟುವಟಿಕೆಗಳು ಮತ್ತಷ್ಟು ಚುರುಕುಗೊಂಡಿವೆ. ನಗರದ ಎಸ್ಪಿ ವೃತ್ತದಲ್ಲಿರುವ ಮಹರ್ಷಿ ವಾಲ್ಮೀಕಿ ಪುತ್ತಳಿ ಅನಾವರಣಕ್ಕೆ ರಾಜ್ಯ ಸಚಿವ ಸಂಪುಟ ಹಸಿರು ನಿಶಾನೆ ತೋರಿಸಿದ್ದು, ಇದನ್ನು ಬೃಹತ್ ಸಮಾರಂಭವನ್ನಾಗಿ ರೂಪಿಸಲು ಕಾಂಗ್ರೆಸ್ ಸಿದ್ಧತೆ ನಡೆಸುತ್ತಿದೆ.

ಪುತ್ತಳಿ ಅನಾವರಣ ಕಾರ್ಯಕ್ರಮಕ್ಕೆ 50 ಸಾವಿರಕ್ಕೂ ಹೆಚ್ಚು ಜನರನ್ನು ಸೇರಿಸುವ ಗುರಿಯನ್ನು ಕಾಂಗ್ರೆಸ್ ಹೊಂದಿದೆ ಎನ್ನಲಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿ ರಾಜ್ಯ ಸಚಿವ ಸಂಪುಟದ ಸದಸ್ಯರು ಸಮಾರಂಭದಲ್ಲಿ ಪಾಲ್ಗೊಳ್ಳುವ ಸಾಧ್ಯತೆಯಿದ್ದು, ದಿನಾಂಕ ನಿಗದಿ ಕುರಿತ ಚರ್ಚೆಗಳು ನಡೆಯುತ್ತಿವೆ.

ಈ ಬೆಳವಣಿಗೆಗೆ ಮತ್ತಷ್ಟು ರಾಜಕೀಯ ಮಹತ್ವ ಸಿಕ್ಕಿರುವುದು ಬಿಜೆಪಿ ಕೈಗೊಂಡಿರುವ ಪಾದಯಾತ್ರೆಯಿಂದ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣ ಹಾಗೂ ರಾಜ್ಯ ಸರ್ಕಾರದ ವಿವಿಧ ನೀತಿಗಳನ್ನು ವಿರೋಧಿಸಿ ಬಿಜೆಪಿ ರಾಯಚೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸುತ್ತಿದೆ.

ಸೆಪ್ಟೆಂಬರ್ 10ರಂದು ಪಾದಯಾತ್ರೆ ಬಳ್ಳಾರಿ ಪ್ರವೇಶಿಸುವ ನಿರೀಕ್ಷೆಯಿದೆ.ಈ ಹಿನ್ನೆಲೆಯಲ್ಲಿ ಅದೇ ಅವಧಿಯಲ್ಲಿ ವಾಲ್ಮೀಕಿ ಪುತ್ತಳಿ ಅನಾವರಣದ ಮೂಲಕ ದೊಡ್ಡ ಮಟ್ಟದ ಜನಸಮೂಹ ಸೇರಿಸಲು ಕಾಂಗ್ರೆಸ್ ಮುಂದಾಗಿರುವುದು ಎರಡು ಪಕ್ಷಗಳ ನಡುವಿನ ರಾಜಕೀಯ ಪೈಪೋಟಿಗೆ ಮತ್ತಷ್ಟು ಬಣ್ಣ ನೀಡಿದೆ.

**ಹಿಂದೆಯೂ ವಾಲ್ಮೀಕಿ ಪುತ್ತಳಿ ವಿಚಾರಕ್ಕೆ ಗಲಾಟೆ**

ಬಳ್ಳಾರಿಯಲ್ಲಿ ವಾಲ್ಮೀಕಿ ಪುತ್ತಳಿ ಅನಾವರಣವಿಚಾರ ಈ ಹಿಂದೆಯೂ ರಾಜಕೀಯ ಸಂಘರ್ಷಕ್ಕೆ ಕಾರಣವಾಗಿತ್ತು. 2026ರ ಜನವರಿಯಲ್ಲಿ ಪುತ್ತಳಿ ಸುತ್ತ ಬ್ಯಾನರ್ ಅಳವಡಿಸುವ ವಿಚಾರವಾಗಿ ಕಾಂಗ್ರೆಸ್ ಮತ್ತು ಬಿಜೆಪಿ ಕಾರ್ಯಕರ್ತರ ನಡುವೆ ಗಲಾಟೆ ನಡೆದಿತ್ತು. ಈ ಸಂದರ್ಭದಲ್ಲಿ ಖಾಸಗಿ ಭದ್ರತಾ ಸಿಬ್ಬಂದಿಯ ಗುಂಡಿನ ದಾಳಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ ಮೃತಪಟ್ಟಿದ್ದರು. ಘಟನೆ ಬಳಿಕ ಎರಡೂ ಪಕ್ಷಗಳಿಂದ ಆರೋಪ–ಪ್ರತ್ಯಾರೋಪಗಳು ಕೇಳಿಬಂದಿದ್ದವು.

ಇದೀಗ ಅದೇ ವಾಲ್ಮೀಕಿ ಪುತ್ತಳಿ ಅನಾವರಣಕ್ಕೆ ಸಂಪುಟ ಅನುಮೋದನೆ ದೊರೆತಿದ್ದು, ಕಾರ್ಯಕ್ರಮವನ್ನು ಜನಸಾಗರದ ನಡುವೆ ನಡೆಸಲು ಕಾಂಗ್ರೆಸ್ ಯೋಜಿಸುತ್ತಿದೆ. 50 ಸಾವಿರಕ್ಕೂ ಅಧಿಕ ಜನರನ್ನು ಸೇರಿಸಿ ಅರ್ಥಪೂರ್ಣ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ತಿಳಿಸಿದ್ದಾರೆ. ಹೀಗಾಗಿ ಬಿಜೆಪಿ ಪಾದಯಾತ್ರೆ ಬಳ್ಳಾರಿಗೆ ಕಾಲಿಡುವ ಸಮಯದಲ್ಲೇ ಕಾಂಗ್ರೆಸ್ ಆಯೋಜಿಸಲು ಮುಂದಾಗಿರುವ ವಾಲ್ಮೀಕಿ ಪುತ್ತಳಿ ಅನಾವರಣ ಕಾರ್ಯಕ್ರಮವು ಕೇವಲ ಸರ್ಕಾರಿ ಕಾರ್ಯಕ್ರಮ ವಾಗಿರದೆ, ಗಣಿನಾಡಿನಲ್ಲಿ ಉಭಯ ಪಕ್ಷಗಳ ಬಲಾಬಲ ಪ್ರದರ್ಶನಕ್ಕೂ ವೇದಿಕೆಯಾಗುವ ಸಾಧ್ಯತೆ ಇದೆ.

# ಕೆಪಿಎಸ್‌ಸಿ ನೇಮಕಾತಿ ಹಗರಣ: ಮಾಜಿ ಅಧ್ಯಕ್ಷರಿಂದ 100 ಎಕರೆ ಜಮೀನು ಖರೀದಿ?

ಕಲಬುರಗಿ, ಸೆ.4: ಕೆಪಿಎಸ್‌ಸಿ ನೇಮಕಾತಿ ಅಕ್ರಮ ಪ್ರಕರಣದ ತನಿಖೆ ಚುರುಕು ಪಡೆದುಕೊಂಡಿರುವ ಹೊತ್ತಿನಲ್ಲೇ ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರಿಗೆ ಸಂಬಂಧಿಸಿದ ಆಸ್ತಿ ಖರೀದಿ ವಿಚಾರ ಮತ್ತಷ್ಟು ಚರ್ಚೆಗೆ ಗ್ರಾಸವಾಗಿದೆ. ಕೆಪಿಎಸ್‌ಸಿಗೆ ಸೇರಿದ ಬಳಿಕ 2019 ರಿಂದ 2026ರ ಅವಧಿಯಲ್ಲಿ ಸುಮಾರು 100 ಎಕರೆ ಜಮೀನು ಖರಿದಿ ಮಾಡಿರೋದು ಬಯಲಾಗಿದೆ. ಶಿವಶಂಕರಪ್ಪ ಸಾಹುಕಾರ್ ಅವರ ಹೆಸರಿನ ಜೊತೆಗೆ ಪತ್ನಿ ವಿಜಯಲಕ್ಷ್ಮಿ ಸಾಹುಕಾರ್ ಹಾಗೂ ಪುತ್ರನ ಹೆಸರಿನಲ್ಲೂ ಜಮೀನು ಖರೀದಿ ಮಾಡಿದ್ದಾರೆ. ಈ ಜಮೀನು ಖರೀದಿಗೆ ಕೆಪಿಎಸ್‌ಸಿ ನಲ್ಲಿ ನಡೆಸಿದ ಅಕ್ರಮ ಹಣ ಬಳಕೆಯಾಗಿದೆ ಎಂದು ಹೇಳಲಾಗಿದ್ದು, ರಹಸ್ಯ ಬಯಲಾಗಿರುವ ಬೆನ್ನಲ್ಲೇ ಶಿವಶಂಕರಪ್ಪ ಸಾಹುಕಾರ್ ಅವರ ಆಸ್ತಿ ಖರೀದಿ ಹಾಗೂ ಅಕ್ರಮ ಆಸ್ತಿಗಳಿಗೆ ಸಂಬಂಧಿಸಿದ ದಾಖಲೆಗಳನ್ನ ಸಿಐಡಿ ಅಧಿಕಾರಿಗಳಿಗೆ ಸಲ್ಲಿಸಲು ಸಾಮಾಜಿಕ ಕಾರ್ಯಕರ್ತ ಶರಣ್ ಐಟಿ ಮುಂದಾಗಿದ್ದಾರೆ.

# ದೆಹಲಿ ಪೊಲೀಸ್ ಕನ್ನಡಿಗರ ಕಲ್ಯಾಣ ಸಮಿತಿಯ ವತಿಯಿಂದ ಪೀರಪ್ಪಗೆ ಅದ್ದೂರಿ ಬೀಳ್ಕೊಡುಗೆ



**ನವದೆಹಲಿ, ಸೆ.4:** ದೆಹಲಿ ಪೊಲೀಸ್ ಕನ್ನಡಿಗ ಸಹಾಯಕ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಪೀರಪ್ಪ ಕಡಕೋಳ ಅವರು ಸುಮಾರು 33 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿ ಸ್ವಯಂ ಸೇವಾನಿವೃತ್ತಿ ಪಡೆದು ತಾಯ್ನಾಡಿಗೆ ಹಿಂತಿರುಗುತ್ತಿದ್ದಾರೆ.

ಕರ್ನಾಟಕದ ಬಾಗಲಕೋಟೆ ಜಿಲ್ಲೆಯ ತೆರೆದಾಳ ಗ್ರಾಮದ ಗಿರಿಮಲ್ಲಪ್ಪ ಕಡಕೋಳ ಹಾಗೂ ಚಂದ್ರಮ್ಮ ಕಡಕೋಳ ದಂಪತಿ ಮಗನಾದ ಇವರು 1973ರ ಜೂನ್ 1ರಂದು ರಂದು ಜನಿಸಿದರು. ವಿದ್ಯಾಭ್ಯಾಸ ಮಾಡುತ್ತಿದ್ದಾಗಲೇ 1994ರಲ್ಲಿ ದೆಹಲಿ ಪೊಲೀಸ್ ಹುದ್ದೆಗೆ ನೇಮಕವಾಗಿ 32 ವರ್ಷಗಳ ಕಾಲ ಹಲವಾರು ವಿಭಾಗಗಳಲ್ಲಿ ಕಾರ್ಯ ನಿರ್ವಹಿಸಿದ್ದಾರೆ.

ಲಕ್ಷ್ಮೀ ಕಡಕೋಳ ಅವರನ್ನು ವಿವಾಹವಾದರು, ಇವರಿಗೆ ಇಬ್ಬರು ಮಕ್ಕಳು. ಮಗಳು ಪ್ರಿಯಾ ಕಡಕೋಳ (ಸಾಫ್ಟ್‌ವೇರ್ ಇಂಜಿನಿಯರ್ ಬೆಂಗಳೂರು), ಮಗ ಕಮಾರ ಪ್ರವೀಣ್ ಕಡಕೋಳ (ಇಂಜಿನಿಯರ್ ಬೆಂಗಳೂರು), ಇಬ್ಬರು ಮಕ್ಕಳು ಬೆಂಗಳೂರಿನಲ್ಲಿ ಮಲ್ಟಿ ನ್ಯಾಷನಲ್ ಕಂಪನಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ.

ಪೀರಪ್ಪನವರು ತಮ್ಮ ವೃತ್ತಿಯಲ್ಲಿ ಯಾವುದೇ ಒಂದು ಕಪ್ಪುಚುಕ್ಕೆ ಇಲ್ಲದೆ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿ ಮಕ್ಕಳ ಯೋಗಕ್ಷೇಮಕ್ಕಾಗಿ ಸ್ವಯಂ ನಿವೃತ್ತಿ ಪಡೆದು ತಾಯ್ನಾಡಿಗೆ ಹಿಂತಿರುಗುತ್ತಿದ್ದಾರೆ.

ದೆಹಲಿ ಪೊಲೀಸ್ ಕನ್ನಡಿಗರ ಕಲ್ಯಾಣ ಸಮಿತಿಯ ವತಿಯಿಂದ ಅವರನ್ನು ಅಶೋಕ್ ವಿಹಾರ ಪೊಲೀಸ್ ಕಾಲೋನಿಯಲ್ಲಿ ಸದಸ್ಯರು, ಮಹಿಳೆಯರು ಹಾಗೂ ಮಕ್ಕಳು ಅದ್ದೂರಿಯಿಂದ ಉಡುಗೊರೆ ನೀಡಿ ಬೀಳ್ಕೊಡುಗೆ ನೀಡಲಾಯಿತು.

ಪೀರಪ್ಪ ಅವರಿಗೆ ಆ ದೇವರು ಆಯಸ್ಸು ಅರೋಗ್ಯ ಕೊಟ್ಟು ಕಾಪಾಡಲಿ, ಮುಂದಿನ ಭವಿಷ್ಯ ಉಜ್ವಲವಾಗಲಿ ಎಂದು ಸಮಸ್ತ ದೆಹಲಿ ಪೊಲೀಸ್ ಕನ್ನಡಿಗರ ಕಲ್ಯಾಣ ಸಮಿತಿಯ ಪರವಾಗಿ ಹಾರೈಸಿ, ಮುಂದಿನ ಭವಿಷ್ಯ ಉಜ್ವಲವಾಗಿರಲಿ ಎಂದು ಆಶಿಸುತ್ತೇವೆ.

# ಯಾರ ಮೇಲೂ ಅಸಮಾಧಾನವಿಲ್ಲ ಮಾಜಿ ಸಚಿವ ಕೆ.ಎನ್. ರಾಜಣ್ಣ ಸ್ಪಷ್ಟನೆ



**ಬೆಂಗಳೂರು, ಸೆ.4:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿ ಯಾರ ಮೇಲೂ ಅಸಮಾಧಾನವಿಲ್ಲ ಎಂದು ಮಾಜಿ ಸಚಿವ ಕೆ.ಎನ್.ರಾಜಣ್ಣ ಸ್ಪಷ್ಟಪಡಿಸಿದ್ದಾರೆ. ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ನಿವಾಸಕ್ಕೆ ಭೇಟಿ ನೀಡಿದ ರಾಜಣ್ಣ ಮಹತ್ವದ ವಿಚಾರಗಳ ಕುರಿತು ಚರ್ಚೆ ನಡೆಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ತಿಂಗಳ 5ರಂದು ಜನಸ್ಪಂದನ ಇಲಾಖೆ ಉದ್ಘಾಟನೆಯಾಗಲಿದ್ದು, ಅದೇ ದಿನ ಶಿಕ್ಷಕರ ದಿನಾಚರಣೆಯೂ ನಡೆಯಲಿದೆ. ಕಾರ್ಯಕ್ರಮಗಳ ಸಿದ್ಧತೆ ಕುರಿತು ತಮ್ಮ ಜಿಲ್ಲೆ ಉಸ್ತುವಾರಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿಯುವರೊಂದಿಗೆ ಚರ್ಚಿಸಿರುವುದಾಗಿ ತಿಳಿಸಿದರು.

ತಮಗೆ ಯಾರ ಮೇಲೂ ಅಸಮಾಧಾನವಿಲ್ಲ. ಕಾಂಗ್ರೆಸ್ ನಲ್ಲಿರುವವರೆಲ್ಲರೂ ಒಂದೇ. ಯಾರು ಯಾರ ಪರವಾಗಿದ್ದಾರೆ, ಯಾರು ಯಾರ ವಿರುದ್ಧವಾಗಿದ್ದಾರೆ ಎಂಬುದು ಅಪ್ರಸ್ತುತ. ಎಲ್ಲರೂ ಕಾಂಗ್ರೆಸ್‌ನಲ್ಲಿದ್ದು, ನಾವೆಲ್ಲರೂ ಒಂದೇ ಎಂದು ರಾಜಣ್ಣ ಹೇಳಿದರು.

ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರ ಆಯ್ಕೆ ವಿಚಾರವಾಗಿ ಇನ್ನೂ ಯಾವುದೇ ನೋಟಿಸ್ ಬಂದಿಲ್ಲ. ಚುನಾವಣೆಗೆ ದಿನಾಂಕ ನಿಗದಿಯಾಗಿದ್ದು, ನೋಟಿಸ್ ಬಂದ ಬಳಿಕ ಈ ಬಗ್ಗೆ ಚರ್ಚೆ ನಡೆಸಬಹುದು ಎಂದು ಹೇಳಿದರು.

# ಉದ್ಯಾನವನ ಕಬಳಿಸುವ ಮಸೂದೆಗೆ ಅವಕಾಶ ಕೊಡುವುದಿಲ್ಲ: ಶೋಭಾ ಕರಂದ್ಲಾಜೆ




**ಬೆಂಗಳೂರು, ಸೆ.4:** ಕೆರೆಗಳು ಮತ್ತು ಉದ್ಯಾನವನಗಳ ಸಂಬಂಧ, ರಾಜ್ಯ ಸರ್ಕಾರ ಜಾರಿಗೆ ತರಲು ಉದ್ದೇಶಿಸಿರುವ ಮಸೂದೆಗಳನ್ನು ಸಂಪೂರ್ಣವಾಗಿ ಹಿಂಪಡೆಯಬೇಕು. ಯಾವುದೇ ಕಾರಣಕ್ಕೂ ಈ ಮಸೂದೆಗಳನ್ನು ಜಾರಿಗೆ ತರಲು ಬಿಡುವುದಿಲ್ಲ ಎಂದು ಕೇಂದ್ರ ಸಣ್ಣ, ಮಧ್ಯಮ ಉದ್ಯಮ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆರೆಗಳು ಮತ್ತು ಉದ್ಯಾನವನಗಳ ಅಸ್ತಿತ್ವವನ್ನು ಉಳಿಸುವ ಜೊತೆಗೆ, ಅಂತರ್ಜಲ ಹೆಚ್ಚಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ, ಹಿರಿಯ ನಾಗರಿಕರು, ಹೋರಾಟಗಾರರು ಹಾಗೂ ಬೆಂಗಳೂರು ಜನರ ವಿರೋಧದ ಹಿನ್ನೆಲೆಯಲ್ಲಿ, ತಾತ್ಕಾಲಿಕವಾಗಿ ಉದ್ಯಾನವನ ಮಸೂದೆಯನ್ನು ರಾಜ್ಯ ಸರ್ಕಾರ ವಾಪಸ್ ಪಡೆದಿದೆ. ಅದನ್ನು ಸಂಪೂರ್ಣವಾಗಿ ಕೈಬಿಡಬೇಕು . ಅದೇ ರೀತಿ, ಕೆರೆಗಳ ಜಾಗಗಳನ್ನು ವಿವಿಧ ಕಾರಣಕ್ಕೆ ಬಳಸಿಕೊಳ್ಳುತ್ತಿರುವ ರಾಜ್ಯ ಸರ್ಕಾರ ಈ ಸಂಬಂಧ ಜಾರಿಮಾಡಲು ಮುಂದಾಗಿರುವ ಕೆರೆ ಸಂರಕ್ಷಣಾ ಮಸೂದೆ ಕೈಬಿಡಬೇಕು ಎಂದು ಅವರು ಆಗ್ರಹಿಸಿದರು.

ಬೆಂಗಳೂರಿನಲ್ಲಿ ಸುರಂಗ ರಸ್ತೆ ಯೋಜನೆಯ ವಿಸ್ತೃತ ವರದಿಯನ್ನು ತಯಾರಿಸಿದ ಕಂಪನಿಯೇ ಕಪ್ಪು ಪಟ್ಟಿಯಲ್ಲಿದೆ. ಯಾವುದೇ ಸೂಕ್ತ ಪರೀಕ್ಷೆ ಹಾಗೂ ಭೂಗರ್ಭ ಶಾಸ್ತ್ರ ಅಧ್ಯಯನ ನಡೆಸದೆ, ತರಾತುರಿಯಲ್ಲಿ ಟೆಂಡರ್ ಕರೆದಿರುವುದು ಏಕೆ ಎಂದು ಪ್ರಶ್ನಿಸಿದ ಅವರು, ಮೆಟ್ರೋ ಮತ್ತು ರಸ್ತೆ ಸುರಂಗ ಮಾರ್ಗವನ್ನು ಏಕಕಾಲದಲ್ಲಿ ತರಲು ಮುಂದಾಗಿರುವ ರಾಜ್ಯ ಸರ್ಕಾರದ ನಡೆ ಅರ್ಥವಾಗುತ್ತಿಲ್ಲ. ಸಂಚಾರ ದಟ್ಟಣೆ ಕುರಿತು ಅಧ್ಯಯನ ನಡೆಸುವುದು ಅಗತ್ಯವಾಗಿದೆ ಎಂದರು.

**ಅವೈಜ್ಞಾನಿಕ ಯೋಜನೆ: ಪಿ.ಸಿ. ಮೋಹನ್**

ಸಂಸದ ಪಿ.ಸಿ.ಮೋಹನ್ ಮಾತನಾಡಿ, ಸುರಂಗ ರಸ್ತೆ ಯೋಜನೆ ಅವೈಜ್ಞಾನಿಕವಾಗಿದ್ದು, ಖಾಲಿ ಜಾಗಗಳಿರುವ ಕಡೆ, ಪ್ರವೇಶ ಮತ್ತು ನಿರ್ಗಮನ ನಿರ್ಮಾಣದ ಪ್ರಕ್ರಿಯೆ ಕ್ರಮ ಸರಿಯಲ್ಲ. ಮೆಟ್ರೋ ಯೋಜನೆಯ ಮೇಲೆ ಹೆಚ್ಚು ಹೂಡಿಕೆ ಮಾಡಿದರೆ, ಸಾವಿರಾರು ಜನರು ಸಂಚರಿಸಲು ಸಾಧ್ಯವಾಗಲಿದೆ. ಆದರೆ ರಸ್ತೆ ಸುರಂಗಮಾರ್ಗ ಕೆಲವರಿಗಷ್ಟೇ ಪ್ರಯೋಜನವಾಗಲಿದೆ. ಈ ಹಿನ್ನೆಲೆಯಲ್ಲಿ, ಸರ್ಕಾರ ಈ ಕುರಿತು ಗಂಭೀರವಾಗಿ ಪರಿಗಣಿಸಬೇಕು. ರಸ್ತೆ ಸುರಂಗ ಯೋಜನೆಯನ್ನು ಅದಾನಿ ಕಂಪನಿಗೆ ಕೊಡಲು ರಾಜ್ಯ ಸರ್ಕಾರ ಮುಂದಾಗಿದ್ದು, ಮುಂದಿನ ದಿನಗಳಲ್ಲಿ ವಿಮಾನ ನಿಲ್ದಾಣವೂ ಅವರ ಪಾಲಾಗುವ ಸಾಧ್ಯತೆ ಇದೆ ಎಂದು ಹೇಳಿದರು.

**ಎರಡೂ ಮಸೂದೆ ವಾಪಸ್‌ಗೆ ಆಗ್ರಹ**

ಸಂಸದ ತೇಜಸ್ವಿ ಸೂರ್ಯ ಮಾತನಾಡಿ, ರಾಜ್ಯ ಸರ್ಕಾರ, ಉದ್ಯಾನವನ ಮಸೂದೆ ಮತ್ತು ಕೆರೆ ಸಂರಕ್ಷಣೆ ಮಸೂದೆ ಎರಡನ್ನೂ ವಾಪಸ್ ಪಡೆಯಬೇಕು. ಈ ಸಂಬಂಧ ಆಂದೋಲನ ಮಾಡುವುದು ಅಗತ್ಯವಾಗಿದೆ. ಇದರ ಜೊತೆಗೆ, ಹೆಬ್ಬಾಳ ಕೆರೆ ಅಭಿವೃದ್ಧಿಗೆ 2 ಸಾವಿರ ಕೋಟಿ ರೂಪಾಯಿ ಮೊತ್ತದ ಟೆಂಡರ್ ಕರೆದಿದ್ದರೂ, ಯಾವುದೇ ತಾಂತ್ರಿಕ, ಭೂಗರ್ಭ ಶಾಸ್ತ್ರ, ಪರಿಸರ ಹಾಗೂ ಕಾರ್ಯಸಾಧ್ಯತಾ ಅಧ್ಯಯನ ನಡೆಸಿಲ್ಲ ಎಂದು ಆರೋಪಿಸಿದರು.

# ರಾಮನಗರ: ಸಾರ್ವಜನಿಕರ ಅಹವಾಲು ಆಲಿಸಿದ ಸಂಸದರು



ರಾಮನಗರದ ಜಿಲ್ಲಾ ಪಂಚಾಯಿತಿ ಭವನದಲ್ಲಿರುವ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ. ಸಿ.ಎನ್.ಮಂಜುನಾಥ್ ತಮ್ಮ ಕಚೇರಿಯಲ್ಲಿ ಶುಕ್ರವಾರ ಸಾರ್ವಜನಿಕರನ್ನು ಭೇಟಿ ಮಾಡಿ, ಅವರ ಅಹವಾಲುಗಳನ್ನು ಸ್ವೀಕರಿಸಿ, ಕುಂದು–ಕೊರತೆಗಳನ್ನು ಆಲಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,‘A’/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ


www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 70 | ನವದೆಹಲಿ | ಬೆಲೆ ₹ 10 | ಸೆಪ್ಟಂಬರ್ 5, 2026, ಶನಿವಾರ

## ಒಳಪುಟಗಳಲ್ಲಿ

ಪಿಓಪಿ ಗಣೇಶಮೂರ್ತಿ ತಯಾರಿಕೆಗೆ ಕಡಿವಾಣ ಹಾಕಲು ವಿಶೇಷ ಕಾರ್ಯಪಡೆ - ಪು.4

ಗ್ಯಾರಂಟಿಗಳ ಭ್ರಮೆಯಲ್ಲಿ ಕಡುಬಡವರ ಮರೆತ ಸರ್ಕಾರ: ಬಿವೈವಿ ವಾಗ್ದಾಳಿ - ಪು.5



ಹೊರನಾಡು-ಗಡಿನಾಡು ಪದಗಳ ಗೊಂದಲ - ಪು.6

ಬಳ್ಳಾರಿಯಲ್ಲಿ ಮೇರಿಮಾತೆಯ ಹುಟ್ಟುಹಬ್ಬ: ಗಣಿನಾಡಿನಲ್ಲಿ 8 ದಿನಗಳ ಸಂಭ್ರಮಾಚರಣೆ - ಪು.7


# ಸಾಲಮನ್ನಾಕ್ಕೆ ನೆರವು ಕೋರಿ ದೆಹಲಿಗೆ ಸರ್ವಪಕ್ಷ ನಿಯೋಗ

**ಬೆಂಗಳೂರು, ಸೆ.4:** ಸಾಲ ಮನ್ನಾಕ್ಕೆ ನೆರವು ಕೋರಿ ದೆಹಲಿಗೆ ಸರ್ವಪಕ್ಷ ನಿಯೋಗ ಕರೆದೊಯ್ಯಲಾಗುವುದು ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಜತೆ ಮಾತನಾಡಿದ ಅವರು, ಬರಗಾಲ ಎಂದು ಪ್ರಧಾನಮಂತ್ರಿಗಳೇ ಹೇಳಿದ್ದು, ಕೇಂದ್ರ ಸರ್ಕಾರ ಸಾಲಮನ್ನಾ ಮಾಡಿಸುವ ಜವಾಬ್ದಾರಿ ಹೊರಬೇಕು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್ ಹಾಗೂ ಇತರ ನಾಯಕರು ತಮ್ಮೊಂದಿಗೆ ದೆಹಲಿಗೆ ಬಂದು ಕೇಂದ್ರ ಸರ್ಕಾರದಿಂದ ಅನುದಾನ ಹಾಗೂ ರೈತರ ಸಾಲಮನ್ನಾಕ್ಕೆ ಆಗ್ರಹಿಸಬೇಕು. ಬರಗಾಲಕ್ಕೆ ಕೇಂದ್ರ ಸರ್ಕಾರ ಪರಿಹಾರ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

**ಬರಗಾಲ; ವಿಪಕ್ಷಗಳಿಂದ ರಾಜಕಾರಣ:** ಬರ ಪರಿಸ್ಥಿತಿ ಕುರಿತಂತೆ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ. ವಿಪಕ್ಷಗಳಿಗೆ ರೈತರು ಹಾಗೂ ಬರ ಪರಿಸ್ಥಿತಿಯ ಬಗ್ಗೆ ಅಧ್ಯಯನ ಮಾಡಲು, ಚರ್ಚಿಸಲು ಕಿಂಚಿತ್ತೂ ಆಸಕ್ತಿ ಇಲ್ಲ. ಬರ ಪರಿಸ್ಥಿತಿ ಚರ್ಚೆ ಬಗ್ಗೆ ಜನತಾ ದಳ

### ಬಿಜೆಪಿ ನಾಯಕರೂ ಕೇಂದ್ರ ಸರ್ಕಾರವನ್ನು ಒತ್ತಾಯಿಸುವಂತೆ ಸಿಎಂ ಡಿ.ಕೆ. ಶಿವಕುಮಾರ್ ಆಗ್ರಹ



ಮತ್ತು ಬಿಜೆಪಿ ಶಾಸಕರೇ ನನ್ನ ಬಳಿ ಬಂದು ಬೇಸರ ತೋಡಿಕೊಂಡಿದ್ದಾರೆ. ಅದಕ್ಕಾಗಿಯೇ ಪ್ರತ್ಯೇಕವಾಗಿ ವಿಶೇಷ ಅಧಿವೇಶನ ನಡೆಸಲಿದ್ದೇವೆ. ಆಯಾ ಕ್ಷೇತ್ರಗಳ ಶಾಸಕರ ಭಾವನೆ, ಪರಿಸ್ಥಿತಿ ಅರ್ಥಮಾಡಿಕೊಂಡು ನಾನು ಅವರಿಗೆ ಸಹಾಯ ಮಾಡಬೇಕು. ನೈಜ ಪರಿಸ್ಥಿತಿಯನ್ನು ಅಧ್ಯಯನ ಮಾಡುವ ಬದಲು ಪ್ರತಿಪಕ್ಷಗಳು ರಾಜಕಾರಣ ಮಾಡುತ್ತಿವೆ ಎಂದು ಡಿ.ಕೆ. ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದರು.

**ನಮ್ಮ ಯಾತ್ರೆಯನ್ನೂ ನೋಡಿ:** ಸಚಿವ ನಾಗೇಂದ್ರ ಸ್ವಯಂಪ್ರೇರಿತರಾಗಿ ರಾಜೀನಾಮೆ ನೀಡಿದರು. ಆದರೂ ಪಾದಯಾತ್ರೆ ಮಾಡುತ್ತಿದ್ದಾರೆ. ನನ್ನ ಯಾತ್ರೆಯನ್ನೂ ನೀವು ನೋಡಿ ಎಂದರು. ಸರ್ಕಾರದ ಮತ್ತೊಂದು ವಿಕೆಟ್ ಪತನವಾಗಲಿದೆ ಎಂದು ವಿರೋಧ ಪಕ್ಷದವರು ಹೇಳುತ್ತಿದ್ದಾರೆ ಎಂದು ಕೇಳಿದಾಗ, ನನ್ನನ್ನೇ ಪತನ ಮಾಡುವುದಾಗಿ ಕೆಲವರು ಹೇಳಿದ್ದಾರೆ.

ಅದರಲ್ಲಿ ಅವರು ಯಶಸ್ವಿಯಾಗಲಿ ಸಂತೋಷ. ತಪ್ಪು ಮಾಡಿದ್ದರೆ ಎಲ್ಲರೂ ಶಿಕ್ಷೆಗೆ ಒಳಗಾಗಬೇಕು, ಅದಕ್ಕೆ ನಾನೂ ಹೊರತಾಗಿಲ್ಲ" ಎಂದರು.

### ಬಿಜೆಪಿಯವರು ಅಭಿವೃದ್ಧಿಯ ವಿರೋಧಿಗಳು: ಸಿಎಂ ಕಿಡಿ

ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) ತಿದ್ದುಪಡಿ ವಿಧೇಯಕವನ್ನು ವಾಪಸ್ ಪಡೆದಿರುವ ಕುರಿತು ಸಿಎಂ ಯು-ಟರ್ನ್ ಮಾಡಿದ್ದಾರೆ ಎಂಬ ಆರೋಪಗಳ ಬಗ್ಗೆ ಪ್ರತಿಕ್ರಿಯಿಸಿ, ಯೂಟರ್ನ್ ಏಕೆ ಮಾಡಬೇಕು. ಜನರ ಭಾವನೆಗಳಿಗೆ ಬೆಲೆ ನೀಡಲಾಗಿದೆ. ಯಡಿಯೂರಪ್ಪ, ಬೊಮ್ಮಾಯಿ ಅವರ ಕಾಲದಲ್ಲಿ ಏನಾಗಿದೆ ಎಂಬ ಪಟ್ಟಿ ಬಿಡುಗಡೆ ಮಾಡುತ್ತೇವೆ. ಈ ಬಗ್ಗೆ ಚರ್ಚೆಯಾಗಬೇಕು. ಲಾಲ್‌ಬಾಗ್‌ನಲ್ಲಿಯೇ ಟನಲ್ ಮಾಡಬೇಕೆಂಬ ಉದ್ದೇಶವಿಲ್ಲ. ಇದಕ್ಕೆ ಪರ್ಯಾಯ ಮಾರ್ಗ ಪರಿಶೀಲಿಸಲಾಗುವುದು. ಹಿಂದೆ ಸಿದ್ದರಾಮಯ್ಯ ಸ್ಟೀಲ್ ಬ್ರಿಡ್ಜ್ ಮಾಡಲು ಹೊರಟಾಗಲೂ ಬಿಜೆಪಿ ವಿರೋಧಿಸಿತ್ತು. ಬಿಜೆಪಿಯವರು ಅಭಿವೃದ್ಧಿಯ ವಿರೋಧಿಗಳು. ಬೆಂಗಳೂರಿಗೆ ಏನಾದರೂ ಶಾಪವಿದ್ದರೆ ಅದು ಬಿಜೆಪಿಯವರದ್ದು. ಅವರ ಕಾಲದಲ್ಲಿ ಒಂದು ಯಾವುದಾದರೂ ಈ ರೀತಿಯ ಗುರುತರ ಯೋಜನೆ ಪ್ರಾರಂಭಿಸಿದ್ದರೆ ತಿಳಿಸಲಿ ಎಂದು ಸಿಎಂ ಸವಾಲು ಹಾಕಿದರು.

### ಮೈಸೂರು ದಸರಾ ಸಂಭ್ರಮಕ್ಕೆ ಹೊಸ ಮೆರುಗು

ಮೈಸೂರು ದಸರಾ ಸಿದ್ದತೆಗಳ ಬಗ್ಗೆ ಕೇಳಿದಾಗ, "ದಸರಾ ಸಿದ್ಧತೆ ಕುರಿತು ಉನ್ನತ ಮಟ್ಟದ ಸಭೆ ನಡೆಸಲಾಗಿದ್ದು, ಹೊಸ ಚಿಂತನೆ, ಆಲೋಚನೆಗಳು, ಹೊಸ ಆವಿಷ್ಕಾರಗಳನ್ನು ದಸರಾದಲ್ಲಿ ತರಲಾಗುವುದು. ಭಾರತೀಯ ವಾಯುಪಡೆ ಹಾಗೂ ರಕ್ಷಣಾ ಸಚಿವಾಲಯದೊಂದಿಗೆ ಮಾತುಕತೆ ನಡೆಸಲಾಗಿದ್ದು, ವಾಯುಪಡೆಯ ತುಕಡಿಯನ್ನು ಒಳಗೊಳ್ಳಲು ಹಾಗೂ ಬೀದರ್, ಗುಲ್ಬರ್ಗ ಸೇರಿದಂತೆ ದಕ್ಷಿಣ ಭಾರತದ ವಿವಿಧ ಸಾಂಸ್ಕೃತಿಕ ಕಲೆಗಳನ್ನು ಪ್ರದರ್ಶಿಸಲು ನಿರ್ಧರಿಸಲಾಗಿದೆ. ದಸರಾ ಆಚರಣೆ ಕುರಿತು ಅನೇಕ ಸಲಹೆಗಳನ್ನು ಸ್ವೀಕರಿಸಲಾಗಿದೆ" ಎಂದು ತಿಳಿಸಿದರು.

## ಯುವ ದಸರಾ ಉದ್ಘಾಟನೆ: ನಟ ಪ್ರಭುದೇವಗೆ ಆಹ್ವಾನ



**ಬೆಂಗಳೂರು, ಸೆ.4:** ಮೈಸೂರು ಯುವ ದಸರಾ 2026ರ ಉದ್ಘಾಟನಾ ಕಾರ್ಯಕ್ರಮಕ್ಕೆ ಭಾರತದ ಖ್ಯಾತ ನೃತ್ಯ ನಿರ್ದೇಶಕ, ನಟ ಹಾಗೂ ಚಿತ್ರನಿರ್ದೇಶಕ ಪ್ರಭುದೇವ ಅವರನ್ನು ಅಧಿಕೃತವಾಗಿ ಆಹ್ವಾನಿಸಲಾಗಿದೆ.ಯುವ ದಸರಾ ಸಮಿತಿಯ ಕಾರ್ಯಾಧ್ಯಕ್ಷ ಸೋಮಶೇಖರ್, ಕಾರ್ಯದರ್ಶಿಗಳಾದ ಅರುಣ್ ಹಾಗೂ ಸತ್ಯಮೂರ್ತಿ ಚೆನ್ನೈನ ಪ್ರಭುದೇವ ಅವರ ನಿವಾಸಕ್ಕೆ ತೆರಳಿ, ಯುವ ದಸರಾ ಕಾರ್ಯಕ್ರಮಕ್ಕೆ ಆಗಮಿಸುವಂತೆ ಆಹ್ವಾನಿಸಿದರು. ಆಹ್ವಾನವನ್ನು ಸಂತೋಷದಿಂದ ಸ್ವೀಕರಿಸಿದ ಪ್ರಭುದೇವ ಅವರು ಯುವ ದಸರಾ ಕಾರ್ಯಕ್ರಮಕ್ಕೆ ಆಗಮಿಸಲು ತಮ್ಮ ಒಪ್ಪಿಗೆಯನ್ನು ವ್ಯಕ್ತಪಡಿಸಿದ್ದಾರೆ. ಪ್ರಭುದೇವ ಅವರ ಆಗಮನವು ಯುವ ದಸರಾ ಕಾರ್ಯಕ್ರಮದ ಮೆರುಗನ್ನು ಮತ್ತಷ್ಟು ಹೆಚ್ಚಿಸಲಿದೆ.

## ಬುಡ್ಗಾಮ್ ಎನ್‌ಕೌಂಟರ್‌ನಲ್ಲಿ ಉಗ್ರನ ಹತ್ಯೆ; ಎಕೆ -47 ಮತ್ತಿತರ ಶಸ್ತ್ರಾಸ್ತ್ರ ವಶ

**ಬುಡ್ಗಾಮ್, ಸೆ.4:** ಜಮ್ಮು ಮತ್ತು ಕಾಶ್ಮೀರದ ಬುಡ್ಗಾಮ್ ಜಿಲ್ಲೆಯ ಅಶ್ದಾರ್ ಗಲಿ ಅರಣ್ಯ ಪ್ರದೇಶದಲ್ಲಿ ಶುಕ್ರವಾರ ನಡೆದ ಭದ್ರತಾ ಪಡೆಗಳ ಜಂಟಿ ಕಾರ್ಯಾಚರಣೆಯಲ್ಲಿ ಒಬ್ಬ ಉಗ್ರನನ್ನು ಹತ್ಯೆ ಮಾಡಲಾಗಿದೆ. ಇದೇ ಪ್ರದೇಶದಲ್ಲಿ ಇನ್ನಿಬ್ಬರು ಉಗ್ರರು ಇರಬಹುದು ಎಂದು ಶಂಕಿಸಲಾಗಿದ್ದು, ಶೋಧ ಕಾರ್ಯಾಚರಣೆ ಮುಂದುವರಿದಿದೆ. ದಕ್ಷಿಣ ಕಾಶ್ಮೀರದ ಪುಲ್ವಾಮಾ ಜಿಲ್ಲೆ ಮತ್ತು ಜಮ್ಮು ವಲಯದ ಪೂಂಚ್ ಜಿಲ್ಲೆಯ ಗಡಿಗಳ ಸಮೀಪವಿರುವ ಪಿರ್ ಪಂಜಾಲ್ ಪರ್ವತ ಶ್ರೇಣಿಯ ಎತ್ತರದ ಪ್ರದೇಶಗಳಲ್ಲಿ ಈ ಗುಂಡಿನ ಚಕಮಕಿ ನಡೆದಿದೆ.

ಶ್ರೀನಗರ ಮೂಲದ '15 ಕಾರ್ಪ್ಸ್' (ಇದನ್ನು 'ಚಿನಾರ್ ಕಾರ್ಪ್ಸ್' ಎಂದೂ ಕರೆಯಲಾಗುತ್ತದೆ) ಈ ಹತ್ಯೆಯನ್ನು ಖಚಿತಪಡಿಸಿದೆ. ಕೇಂದ್ರ ಮೀಸಲು ಪೊಲೀಸ್ ಪಡೆ (CRPF) ಮತ್ತು ಜಮ್ಮು ಮತ್ತು ಕಾಶ್ಮೀರ ಪೊಲೀಸರ ವಿಶೇಷ ಕಾರ್ಯಾಚರಣೆ ತಂಡದ (SOG) ಸಹಯೋಗದೊಂದಿಗೆ ದೊರೆತ ಮಾಹಿತಿ ಆಧಾರದ ಮೇಲೆ ಈ ಕಾರ್ಯಾಚರಣೆಯನ್ನು ನಡೆಸಲಾಗಿದೆ. ಭದ್ರತಾ ಪಡೆಗಳು ಸ್ಥಳದಿಂದ ಎಕೆ-47 ರೈಫಲ್ ಸೇರಿದಂತೆ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಂಡಿವೆ ಎಂದು ಅದು ತಿಳಿಸಿದೆ. ಅಶ್ದಾರ್ ಗಲಿ ಪ್ರದೇಶದಲ್ಲಿ ನಿರ್ದಿಷ್ಟ ಗುಪ್ತಚರ ಮಾಹಿತಿ ದೊರೆತ ನಂತರ ಜಂಟಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು ಎಂದು ಸೇನೆಯು ಸಾಮಾಜಿಕ ಜಾಲತಾಣ 'ಎಕ್ಸ್' ನಲ್ಲಿ ತಿಳಿಸಿದೆ. ಸೈನಿಕರು ಅನುಮಾನಾಸ್ಪದ ಚಲನವಲನವನ್ನು ಗಮನಿಸಿ ಅವರನ್ನು ತಡೆದಾಗ, ಉಗ್ರರು ಗುಂಡಿನ ದಾಳಿ ನಡೆಸಿದ್ದಾರೆ. ಆಗ ಎನ್ ಕೌಂಟರ್ ನಡೆದಿದ್ದು, ಒಬ್ಬ ಉಗ್ರ ಹತನಾಗಿದ್ದಾನೆ. ಆತನಿಂದ ಶಸ್ತ್ರಾಸ್ತ್ರಗಳನ್ನು ವಶಕ್ಕೆ ಪಡೆಯಲಾಗಿದೆ.

# ರಷ್ಯಾ-ಉಕ್ರೇನ್ ಸಂಘರ್ಷ ಕೊನೆಗೊಳಿಸಲು ರಾಜತಾಂತ್ರಿಕ ಮಾರ್ಗ, ಚರ್ಚೆ ಏಕೈಕ ಮಾರ್ಗ

### ರಷ್ಯಾದಿಂದ ತೈಲ, ಲೋಹ, ರಸಗೊಬ್ಬರ ಖರೀದಿಸದಂತೆ ಒತ್ತಡ ಹೇರುವುದರಿಂದ ಶಾಂತಿ ಸ್ಥಾಪನೆ ಸಾಧ್ಯವಿಲ್ಲ: ವಿದೇಶಾಂಗ ಸಚಿವ ಎಸ್. ಜೈಶಂಕರ್

**ನವದೆಹಲಿ, ಸೆ.5:** ಐದನೇ ವರ್ಷಕ್ಕೆ ಕಾಲಿಟ್ಟಿರುವ ರಷ್ಯಾ-ಉಕ್ರೇನ್ ಸಂಘರ್ಷವನ್ನು ರಷ್ಯಾದ ತೈಲ, ಲೋಹಗಳು, ಖನಿಜಗಳು ಅಥವಾ ರಸಗೊಬ್ಬರ ಖರೀದಿಗೆ ಸಂಬಂಧಿಸಿದಂತೆ ದೇಶಗಳ ಮೇಲೆ ಒತ್ತಡ ಹೇರುವ ಮೂಲಕ ಕೊನೆಗೊಳಿಸಲು ಸಾಧ್ಯವಿಲ್ಲ. ರಾಜತಾಂತ್ರಿಕತೆ ಮತ್ತು ಮಾತುಕತೆ ಶಾಂತಿಗೆ ಏಕೈಕ ಮಾರ್ಗ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಹೇಳಿದ್ದಾರೆ.

ಉಕ್ರೇನ್‌ನ ಕೀವ್‌ನಲ್ಲಿ ಯುಕ್ರೇನಿಯನ್ ವಿದೇಶಾಂಗ ಸಚಿವ ಆಂಡ್ರಿ ಸಿಬಿಹಾ ಅವರೊಂದಿಗೆ ಮಾತುಕತೆ ನಂತರ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರನ್ನು ಭೇಟಿ ವೇಳೆ ಮಾತನಾಡಿದರು.

ರಷ್ಯಾ ತೈಲ ಖರೀದಿಸುವ ದೇಶಗಳ ಮೇಲೆ ಅಮೆರಿಕ ನಿರ್ಬಂಧ ಹೇರಿದರೆ ಭಾರತ ಆಮದನ್ನು ಕಡಿಮೆ ಮಾಡುತ್ತದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಜೈಶಂಕರ್, ಭಾರತದ ಇಂಧನ ಅಗತ್ಯಗಳನ್ನು ಎತ್ತಿ ತೋರಿಸಿದರು. "ವಿಶ್ವ ಇಂಧನ ಪರಿಸ್ಥಿತಿ ತುಂಬಾ ಕಷ್ಟಕರವಾಗಿರುವ ಸಮಯದಲ್ಲಿ 1.4 ಶತಕೋಟಿ ಜನರಿಗೆ ಇಂಧನವನ್ನು ಒದಗಿಸುವ ಸವಾಲುಗಳನ್ನು ನೀವೆಲ್ಲರೂ ಪಡೆಯುವುದು ಸಹ ಮುಖ್ಯವಾಗಿದೆ" ಎಂದು ಹೇಳಿದರು.

ಉಕ್ರೇನ್‌ನ ನಿಲುವನ್ನು ಒಪ್ಪಿಕೊಳ್ಳುತ್ತಾ, ಜೈಶಂಕರ್ ಭಾರತದ ಕಾರ್ಯತಂತ್ರದ ಸ್ವಾಯತ್ತತೆಯನ್ನು ಒತ್ತಿ ಹೇಳಿದರು. "ಉಕ್ರೇನ್‌ನ ದೃಷ್ಟಿಕೋನವನ್ನು ಭಾರತ ಗೌರವಿಸುತ್ತದೆ. ಮತ್ತು ಭಾರತಕ್ಕೆ ತನ್ನದೇ ಆದ ದೃಷ್ಟಿಕೋನವಿದ್ದು, ಅದನ್ನು ಇತರರು ಸಹ ಗೌರವಿಸಬೇಕೆಂದು ನಿರೀಕ್ಷಿಸುತ್ತೇವೆ. ಸಂವಾದ, ರಾಜತಾಂತ್ರಿಕತೆ, ಮಾತುಕತೆಯ ಮೂಲಕ ಸಂಘರ್ಷ ಕೊನೆಗೊಳ್ಳಲು ಸಾಧ್ಯವೇ ಹೊರತು, ಯುದ್ಧಭೂಮಿಯಿಂದ ಪರಿಹಾರ ಸಾಧ್ಯವಿಲ್ಲ ಎಂಬ ಭಾರತದ ದೀರ್ಘಕಾಲದ ನಿಲುವನ್ನು ಅವರು ಪುನರುಚ್ಚರಿಸಿದರು. ಶಾಂತಿ ಪ್ರಯತ್ನಗಳು ಸಹಾಯಕವಾಗಿದ್ದರೆ "ಯಾವುದೇ ರೀತಿಯಲ್ಲಿ"



### ಭಾರತದ ಬದ್ಧತೆಗೆ ಝೆಲೆನ್ಸ್ಕಿ ಸ್ವಾಗತ

ಯುದ್ಧವನ್ನು ಕೊನೆಗೊಳಿಸುವ ಭಾರತದ ಬದ್ಧತೆಯನ್ನು ಉಕ್ರೇನ್ ಸ್ವಾಗತಿಸಿತು. ಜೈಶಂಕರ್ ಅವರನ್ನು ಭೇಟಿಯಾದ ನಂತರ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬರೆದಿರುವ ಝೆಲೆನ್ಸ್ಕಿ, "ಈ ಅನ್ಯಾಯದ ಯುದ್ಧವನ್ನು – ಉಕ್ರೇನ್ ವಿರುದ್ಧದ ರಷ್ಯಾದ ಯುದ್ಧವನ್ನು ಕೊನೆಗೊಳಿಸುವ ಭಾರತದ ಬದ್ಧತೆಗಾಗಿ ನಾವು ಕೃತಜ್ಞರಾಗಿರುತ್ತೇವೆ." "ಇದು ಖಂಡಿತವಾಗಿಯೂ ಯುದ್ಧದ ಸಮಯವಾಗಿರಬಾರದು. ಶಾಂತಿಯ ಅಗತ್ಯವಿದೆ. ಇದು ಭಾರತದ ಸ್ಪಷ್ಟ ನಿಲುವು." ಎಂದು ಹೇಳಿದ್ದಾರೆ.

ಸಹಾಯ ಮಾಡಲು ಭಾರತ ಸಿದ್ಧ ಎಂದು ಹೇಳಿದರು.

ಮಾಸ್ಕೋ ಜೊತೆ ವ್ಯಾಪಕ ಸಂಬಂಧಗಳನ್ನು ಕಾಯ್ದುಕೊಳ್ಳುವುದರ ಜೊತೆಗೆ ಕೀವ್ ಜೊತೆಗಿನ ಸಂಬಂಧವನ್ನು ಉಳಿಸಿಕೊಳ್ಳಲು ಭಾರತ ಪ್ರಯತ್ನಿಸುತ್ತಿರುವುದರಿಂದ ಈ ಭೇಟಿ ರಾಜತಾಂತ್ರಿಕ ಮಹತ್ವವನ್ನು ಹೊಂದಿದೆ. ಸೆಪ್ಟೆಂಬರ್ 3 ರಿಂದ 5 ರವರೆಗೆ ನಡೆಯುವ ಜೈಶಂಕರ್ ಅವರ ಉಕ್ರೇನ್ ಮತ್ತು ಪೋಲೆಂಡ್ ಪ್ರವಾಸ ದ್ವಿಪಕ್ಷೀಯ ಸಂಬಂಧಗಳನ್ನು ಮುಂದುವರಿಸುವ ಮತ್ತು ಬದಲಾಗುತ್ತಿರುವ ಯುರೋಪಿಯನ್ ಭದ್ರತಾ ವಾತಾವರಣದ ಮಧ್ಯೆ ಪ್ರಾದೇಶಿಕ ಬೆಳವಣಿಗೆಗಳನ್ನು ಚರ್ಚಿಸುವ ಗುರಿಯನ್ನು ಹೊಂದಿದೆ.

# ಇಸ್ರೋದ ಭೂಸ್ಥಿರ ಕಕ್ಷೆಯ ಚಿತ್ರಗ್ರಹಣ ಉಪಗ್ರಹ ಉಡಾವಣೆ



**ಬೆಂಗಳೂರು,ಸೆ.4:** ಭಾರತದ ಮೊದಲ ಭೂಸ್ಥಿರ ಕಕ್ಷೆಯ ಚಿತ್ರಗ್ರಹಣ ಉಪಗ್ರಹ- ಇಮೇಜಿಂಗ್ ಸಾಟಲೈಟ್, ಇಒಎಸ್ – 05 ಅನ್ನು ಹೊತ್ತ ಜಿ.ಎಸ್.ಎಲ್.ವಿ – ಎಫ್ 17 ರಾಕೆಟ್ ಅನ್ನು ಇಸ್ರೋ ಶುಕ್ರವಾರ ಮುಂಜಾನೆ ಯಶಸ್ವಿಯಾಗಿ ಉಡಾವಣೆ ಮಾಡಿದೆ.

ಆಂಧ್ರಪ್ರದೇಶದ ಶ್ರೀಹರಿಕೋಟಾದಲ್ಲಿರುವ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಬೆಳಗಿನಜಾವ 2.55ಕ್ಕೆ ರಾಕೆಟ್ ಉಡಾವಣೆ ಯಾಯಿತು. 27 ಗಂಟೆಗಳ ಇಳಿ, ಎಣಿಕೆ ಬಳಿಕ ನಡೆದ ಉಡಾವಣೆ ಯಶಸ್ವಿಯಾಯಿತು.

ಉಡಾವಣೆಯಾದ 18 ನಿಮಿಷಗಳ ಬಳಿಕ 2,367 ಕೆ.ಜಿ. ತೂಕದ ಇಒಎಸ್-05 ಉಪಗ್ರಹವನ್ನು ಉಪ-ಭೂಸ್ಥಿರ ಕಕ್ಷೆಗೆ ಯಶಸ್ವಿಯಾಗಿ ಸೇರಿಸಲಾಯಿತು ಎಂದು ಇಸ್ರೋ ತಿಳಿಸಿದೆ. ಈ ಅತ್ಯಾಧುನಿಕ ಉಪಗ್ರಹದಿಂದ ನೈಜ ಸಮಯದ ಭೂಚಿತ್ರಗಳು ಲಭ್ಯವಾಗಲಿವೆ. ಇದರಿಂದ ಕೃಷಿ, ವಿಪತ್ತು ನಿರ್ವಹಣೆ ಸೇರಿದಂತೆ ಹಲವು ಕ್ಷೇತ್ರಗಳಿಗೆ




ನೆರವಾಗಲಿದೆ. ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಮಾತನಾಡಿ, ಈ ಮಿಷನ್ ಭಾರತದ ಭೂ ವೀಕ್ಷಣಾ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲಿದ್ದು, ಭೂ ವೀಕ್ಷಣಾ ಸೇವೆಗಳ ವಿತರಣೆಯನ್ನು ಸುಧಾರಿಸಲಿದೆ ಎಂದು ತಿಳಿಸಿದ್ದಾರೆ.

### ಪ್ರಧಾನಿ ಮೋದಿ ಶ್ಲಾಘನೆ



ಜಿಯೋ ಸಿಂಕ್ರೋನಸ್ ಕಕ್ಷೆಯಿಂದ ಭಾರತದ ಮೊದಲ ಇಮೇಜಿಂಗ್ ಉಪಗ್ರಹವಾದ EOS-05 ಅನ್ನು ಹೊತ್ತ ಜಿಎಸ್‌ಎಲ್‌ವಿ-ಈ17 ನ ಯಶಸ್ವಿ ಉಡಾವಣೆಯು ಭಾರತದ ಬಾಹ್ಯಾಕಾಶ ವಲಯವನ್ನು ವ್ಯಾಖ್ಯಾನಿಸುವ ಶ್ರೇಷ್ಠತೆ, ನಾವೀನ್ಯತೆ ಮತ್ತು ಬೆಳೆಯುತ್ತಿರುವ ಸಾಮರ್ಥ್ಯಗಳ ಪ್ರತಿಬಿಂಬವಾಗಿದೆ. ಇಸ್ರೋ ಇಂದು ಮತ್ತೊಂದು ಮಹತ್ವದ ಸಾಧನೆ ಮಾಡಿದೆ ಹಾಗೂ ಇದು ರಾಷ್ಟ್ರಕ್ಕೆ ಹೆಮ್ಮೆಯ ಕ್ಷಣ ಎಂದು ಬಣ್ಣಿಸಿದ್ದಾರೆ. ಇಸ್ರೋ ಮತ್ತು ಭಾರತೀಯ ಉದ್ಯಮದ ನಡುವೆ ಬೆಳೆಯುತ್ತಿರುವ ಪಾಲುದಾರಿಕೆಯು ಬಾಹ್ಯಾಕಾಶ ಕಾರ್ಯಕ್ರಮಕ್ಕೆ ಹೊಸ ಶಕ್ತಿ ಮತ್ತು ಪ್ರಮಾಣವನ್ನು ಸೇರ್ಪಡೆ ಮಾಡಿದೆ. ಇಡೀ ಬಾಹ್ಯಾಕಾಶ ಪೂರಕ ವ್ಯವಸ್ಥೆಯಲ್ಲಿ ಭಾರತದ ಸಾಮರ್ಥ್ಯಗಳನ್ನು ವಿಸ್ತರಿಸುತ್ತಿದೆ ಎಂದಿದ್ದಾರೆ.

# ದೆಹಲಿಯಲ್ಲಿ ಭಾರಿ ಮಳೆ: ಇಂದಿರಾಗಾಂಧಿ ವಿಮಾನ ನಿಲ್ದಾಣ ಜಲಾವೃತ, ರೆಡ್ ಅಲರ್ಟ್ ಘೋಷಣೆ



**ನವದೆಹಲಿ, ಸೆ.4:** ರಾಷ್ಟ್ರ ರಾಜಧಾನಿಯ ಹಲವು ಭಾಗಗಳಲ್ಲಿ ಶುಕ್ರವಾರ ಭಾರಿ ಮಳೆಯಾಗಿದೆ. ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಜಲಾವೃತವಾಗಿದ್ದು, ಹಲವು ವಿಮಾನಗಳ ಮಾರ್ಗದಲ್ಲಿ ಬದಲಾವಣೆ ಮಾಡಲಾಗಿದೆ.

ಭಾರತೀಯ ಹವಾಮಾನ ಇಲಾಖೆ (IMD) ತೀವ್ರ ಮಳೆ, ಗುಡುಗು, ಸಿಡಿಲು ಮತ್ತು ಬಿರುಗಾಳಿ ಸಹಿತ ಗಾಳಿಯ ಮುನ್ಸೂಚನೆಯೊಂದಿಗೆ 'ರೆಡ್ ಅಲರ್ಟ್' ಘೋಷಿಸಿದೆ. ಜನ್ಮಾಷ್ಟಮಿ ಆಚರಣೆಗಾಗಿ ಮನೆಯಿಂದ ಹೊರಬಂದ ಜನರು ಹಠಾತ್ ಮಳೆಗೆ ಸಿಲುಕಿಕೊಂಡರು. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ವಾಹನ ಸವಾರರು ತೀವ್ರ ಪರದಾಡುವಂತಾಯಿತು.

ಹಲವು ಗಂಟೆಗಳ ಮಳೆಯ ನಂತರ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನೀರು ನಿಂತು ಜಲಾವೃತಗೊಂಡಿತು. ಪ್ರಯಾಣಿಕರು ಪಾದದ ಮಟ್ಟದ ನೀರಿನಲ್ಲಿ ಲಗೇಜ್ ಟ್ರಾಲಿಗಳನ್ನು ತಳ್ಳಿಕೊಂಡು ಹೋಗುತ್ತಿರುವುದು ವಿಡಿಯೋಗಳಲ್ಲಿ ಕಂಡುಬಂದಿದೆ.

ಭಾರಿ ಮಳೆಯಿಂದಾಗಿ ಮಧ್ಯಾಹ್ನ 3.30 ರಿಂದ 4.30 ರ ನಡುವೆ ಒಂಬತ್ತು ವಿಮಾನಗಳ ಮಾರ್ಗವನ್ನು ಬದಲಾಯಿಸಲಾಗಿದೆ. ಇವುಗಳಲ್ಲಿ ನಾಲ್ಕು ಜೈಪುರಕ್ಕೆ, ನಾಲ್ಕು ಲಕ್ನೋಗೆ ಮತ್ತು ಒಂದು ಅಹಮದಾಬಾದ್‌ಗೆ ತೆರಳಬೇಕಾದ ವಿಮಾನಗಳು ಸೇರಿವೆ.

**ವಿಮಾನ ಸಂಚಾರದಲ್ಲಿ ವ್ಯತ್ಯಯ:** ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಿಂದಾಗಿ ದೆಹಲಿಗೆ ಬರುವ ಮತ್ತು ಅಲ್ಲಿಂದ ಹೊರಡುವ ವಿಮಾನಗಳ ಮೇಲೆ ಪರಿಣಾಮ ಬೀರಬಹುದು ಎಂದು ಏರ್ ಇಂಡಿಯಾ ಪ್ರಯಾಣಿಕರಿಗೆ ನೀಡಿದೆ. ಐಎಂಡಿ ಪ್ರಕಾರ, ಪಾಲಂನಲ್ಲಿ ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 2.30 ರ ನಡುವೆ 3.4 ಮಿ.ಮೀ ಮಳೆಯಾಗಿದ್ದರೆ, ನಜಫ್‌ಗಢದಲ್ಲಿ ಬೆಳಿಗ್ಗೆ 8.30 ರಿಂದ 11.30 ರ ನಡುವೆ 0.5 ಮಿ.ಮೀ ಮಳೆಯಾಗಿದೆ.

ಸಂಜೆ 5 ರಿಂದ ರಾತ್ರಿ 8 ರ ನಡುವೆ ಹೆಚ್ಚಿನ ಸ್ಥಳಗಳಲ್ಲಿ ಹಗುರದಿಂದ ಸಾಧಾರಣ ಮಳೆ, ಗುಡುಗು ಮತ್ತು ಸಿಡಿಲು ಹಾಗೂ ಕೆಲವು ಸ್ಥಳಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

# 15 ದಿನದಲ್ಲಿ ಮತ್ತಷ್ಟು ತಾಲೂಕುಗಳು ಬರಪೀಡಿತ ಎಂದು ಘೋಷಣೆ: ಸಿಎಂ. ಡಿ.ಕೆ. ಶಿವಕುಮಾರ್

**ಕೂಡಲಸಂಗಮ, ಸೆ.4:** ಈಗಾಗಲೇ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಮುಂದಿನ 15 ದಿನಗಳಲ್ಲಿ ಮತ್ತಷ್ಟು ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲು ತೀರ್ಮಾನ ಮಾಡಲಾಗುವುದು ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಬಾಗಲಕೋಟೆಯ ಕೂಡಲಸಂಗಮದಲ್ಲಿ ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದ ಅವರು, ಜಿಲ್ಲಾ ಸಚಿವರು ಭೇಟಿ ನೀಡಿ ಸಲ್ಲಿಸಿರುವ ವರದಿಗಳು ಮತ್ತು ಅಧಿಕಾರಿಗಳ ವರದಿಗಳನ್ನು ಆಧರಿಸಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಹಂತ-ಹಂತವಾಗಿ ಪಟ್ಟಿ ಬಿಡುಗಡೆ ಮಾಡಲಾಗುವುದು. ಮಿಕ್ಕ ತಾಲ್ಲೂಕುಗಳ ಬಗ್ಗೆ ವೈಜ್ಞಾನಿಕ ಪರಿಶೀಲನೆ ನಡೆಯುತ್ತಿದೆ. ಒಂದಷ್ಟು ಅಚ್ಚುಕಟ್ಟು ಪ್ರದೇಶಗಳನ್ನು ಹೊರತುಪಡಿಸಿದರೆ ಬಹುತೇಕ ಕಡೆ ಉತ್ತಮ ಬೆಳೆ ಕಾಣುತ್ತಿಲ್ಲ. ಬಾಗಲಕೋಟೆಯಲ್ಲೂ ಪರಿಸ್ಥಿತಿ ಗಂಭೀರವಾಗಿದೆ.

### ಹಂತ ಹಂತವಾಗಿ ಪಟ್ಟಿ ಬಿಡುಗಡೆ: ಉಳಿದ ತಾಲೂಕುಗಳ ಪರಿಸ್ಥಿತಿ ಬಗ್ಗೆ ವೈಜ್ಞಾನಿಕ ಪರಿಶೀಲನೆ ಪ್ರಗತಿಯಲ್ಲಿದೆ

ರೈತರೊಂದಿಗೆ ಚರ್ಚಿಸಿ ವಾಸ್ತವ ಸ್ಥಿತಿಯನ್ನು ಅರಿಯಲಾಯಿತು. ರಾಜ್ಯದಲ್ಲಿ ಶೇ.42-43ರಷ್ಟು ಮಳೆ ಕೊರತೆಯಾಗಿದ್ದು, ಹಲವು ಜಿಲ್ಲೆಗಳಲ್ಲಿ ಬರ ಪರಿಸ್ಥಿತಿ ನಿರ್ಮಾಣವಾಗಿದೆ. ಗದಗ, ಧಾರವಾಡ, ಹಾವೇರಿ ಬಳಿಕ ಬಾಗಲಕೋಟೆಯಲ್ಲೂ ಬೆಳೆಗಳು ತೀವ್ರವಾಗಿ ಹದಗೆಟ್ಟಿವೆ ಎಂದರು.

**ರೈತರ ಹಿತ ಸರ್ಕಾರಕ್ಕೆ ಮುಖ್ಯ:** ಕೃಷ್ಣಾನದಿಗೆ ಸ್ವಲ್ಪ ನೀರು ಬಂದಿದೆ, ಕಾವೇರಿ ಸೇರಿ ಇತರ ಕಡೆ ಇಷ್ಟೂ ನೀರು ಬಂದಿಲ್ಲ. ತಮಿಳುನಾಡಿನವರು ತಮ್ಮ ಬೆಳೆಗಳಿಗಾಗಿ ನೀರು ಕೇಳುತ್ತಿದ್ದಾರೆ. ನಾನು, ಸಚಿವರಾದ ಯತೀಂದ್ರ ಸಿದ್ದರಾಮಯ್ಯ ಹಾಗೂ ಚಲುವರಾಯಸ್ವಾಮಿಯವರು ಚರ್ಚಿಸಿ ಚರ್ಚಿಸಿ ಸೂಕ್ತ ಕ್ರಮ ಕೈಗೊಂಡಿದ್ದೇವೆ. ಕೆಆರ್‌ಎಸ್ ಬದಲಿಗೆ ಕಬಿನಿಯಿಂದ ನೀರನ್ನು ಹರಿಸಲಾಗುತ್ತಿದೆ. ರೈತರ ಹಿತ ಸರ್ಕಾರಕ್ಕೆ ಮುಖ್ಯ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.



ಸಿಎಂ ಡಿ.ಕೆ. ಶಿವಕುಮಾರ್ ಅವರು ಬಾಗಲಕೋಟೆ, ವಿಜಯನಗರ, ಬಳ್ಳಾರಿ ಜಿಲ್ಲೆಯ ಬರಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆಯನ್ನು ಶುಕ್ರವಾರ ನಡೆಸಿದರು.

### ಪ್ರತಿ ತಿಂಗಳ 3ನೇ ಶನಿವಾರ 'ಪ್ರಜಾಸೇವೆ'

ಜನರ ಸಮಸ್ಯೆಗಳನ್ನು ಸ್ಥಳದಲ್ಲೇ ಆಲಿಸಿ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಕೂಡ್ಲಗಿಯಲ್ಲಿ ಪ್ರಜಾಸೇವಾ ಇಲಾಖೆಗೆ ಚಾಲನೆ ನೀಡಲಾಗುತ್ತಿದೆ. ಸರ್ಕಾರವೇ ಜನರ ಮನೆ ಬಾಗಿಲಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸುವ ವ್ಯವಸ್ಥೆ ರೂಪಿಸಲಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು. ಪ್ರತಿ ತಿಂಗಳು ಮೊದಲ ಹಾಗೂ ಮೂರನೇ ಶನಿವಾರ ಸಚಿವರು ಕಡ್ಡಾಯವಾಗಿ ಒಂದೊಂದು ತಾಲೂಕಿಗೆ ತೆರಳಿ ಜನರ ಸಮಸ್ಯೆ ಆಲಿಸಬೇಕು. ಮೊದಲ ಸುತ್ತಿನ ಬಳಿಕ ಹೋಬಳಿ ಮಟ್ಟಕ್ಕೂ ತೆರಳಬೇಕು. ಶಾಸಕರು ಪಂಚಾಯಿತಿ ಮಟ್ಟದಲ್ಲಿ ಜನರನ್ನು ಭೇಟಿ ಮಾಡಿ ಅವರ ಸಮಸ್ಯೆಗಳನ್ನು ಆಲಿಸಲು ಸೂಚಿಸಲಾಗಿದೆ. ಎಲ್ಲ ಸಮಸ್ಯೆಗಳನ್ನೂ ತಕ್ಷಣವೇ ಪರಿಹರಿಸಲಾಗುತ್ತದೆ ಎಂದು ಹೇಳುವುದಿಲ್ಲ. ಆದರೆ ಜನರ ಬಳಿಗೆ ತೆರಳಿ ಅವರ ಸಮಸ್ಯೆ ಮತ್ತು ಭಾವನೆಗಳನ್ನು ನೇರವಾಗಿ ತಿಳಿದುಕೊಂಡರೆ ಪರಿಹಾರ ಕಂಡುಕೊಳ್ಳಲು ಹೆಚ್ಚಿನ ಅವಕಾಶ ದೊರೆಯಲಿದೆ ಎಂದು ಹೇಳಿದರು.

# ಪಿಓಪಿ ಗಣೇಶಮೂರ್ತಿ ತಯಾರಿಕೆಗೆ ಕಡಿವಾಣ ಹಾಕಲು ವಿಶೇಷ ಕಾರ್ಯಪಡೆ



■ ಪರಿಸರಸ್ನೇಹಿ ಹಬ್ಬ ಆಚರಿಸಲು ರಾಮಲಿಂಗಾರೆಡ್ಡಿ ಕರೆ

**ಬೆಂಗಳೂರು, ಸೆ.4:** ಗಣೇಶ ಚತುರ್ಥಿ ಹಬ್ಬದ ಹಿನ್ನೆಲೆಯಲ್ಲಿ ಪರಿಸರಕ್ಕೆ ಮಾರಕವಾದ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ಗಣೇಶ ಮೂರ್ತಿಗಳ ತಯಾರಿಕೆ ಮತ್ತು ಮಾರಾಟಕ್ಕೆ ಕಡಿವಾಣ ಹಾಕಲು ಅರಣ್ಯ ಇಲಾಖೆಯಿಂದ ರಾಜ್ಯದ ಪ್ರಮುಖ ಜಿಲ್ಲೆಗಳಲ್ಲಿ ವಿಶೇಷ ಕಾರ್ಯಪಡೆ ರಚಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಪಿಓಪಿ ಮೂರ್ತಿಗಳನ್ನು ಪತ್ತೆಹಚ್ಚಿ ವಶಪಡಿಸಿಕೊಳ್ಳುವ ಉದ್ದೇಶದಿಂದ ಬೆಂಗಳೂರು, ರಾಮನಗರ, ಮೈಸೂರು, ಮಂಗಳೂರು, ಬೆಳಗಾವಿ, ದಾವಣಗೆರೆ, ಧಾರವಾಡ, ಕಲಬುರಗಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಈ ವಿಶೇಷ ತನಿಖಾ ತಂಡಗಳು ಕಾರ್ಯಾಚರಣೆ ನಡೆಸುತ್ತಿವೆ. ಆ.18ರಿಂದ ಸೆ.2ರವರೆಗೆ ಈ ವಿಶೇಷ ತಂಡಗಳು ಭರ್ಜರಿ ಕಾರ್ಯಾಚರಣೆ ನಡೆಸಿವೆ. ನಿಯಮ ಉಲ್ಲಂಘಿಸಿ ಪಿಓಪಿ ಮೂರ್ತಿಗಳನ್ನು ತಯಾರಿಸಿ ಸಂಗ್ರಹಿಸಲಾಗಿದ್ದ ಒಟ್ಟು 153 ಸ್ಥಳಗಳ ಮೇಲೆ ದಾಳಿ ನಡೆಸಿ, 872 ಪಿಓಪಿ ಗಣೇಶ ವಿಗ್ರಹಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಸಾರ್ವಜನಿಕರು ಪಿಓಪಿ ಮೂರ್ತಿಗಳನ್ನು ತ್ಯಜಿಸಿ, ಪರಿಸರ ಸ್ನೇಹಿ ಮಣ್ಣಿನ ಗಣಪತಿಯನ್ನೇ ಪೂಜಿಸಬೇಕು ಎಂದು ಸಚಿವ ರಾಮಲಿಂಗಾರೆಡ್ಡಿ ಮನವಿ ಮಾಡಿದ್ದಾರೆ. ಮಣ್ಣಿನ ಮೂರ್ತಿಗಳು ನೀರಿನಲ್ಲಿ ಸುಲಭವಾಗಿ ಕರಗುವುದರಿಂದ ನದಿ, ಕೆರೆಗಳು ಕಲುಷಿತಗೊಳ್ಳುವುದು ತಪ್ಪುತ್ತದೆ ಹಾಗೂ ಜಲಚರಗಳ ಸಂರಕ್ಷಣೆ ಸಾಧ್ಯವಾಗುತ್ತದೆ. ಆದ್ದರಿಂದ ಹಬ್ಬದ ಸಂಭ್ರಮದ ನಡುವೆ ಪ್ರಕೃತಿ ಸಂರಕ್ಷಣೆಗೂ ಸಾರ್ವಜನಿಕರು ಕೈಜೋಡಿಸಬೇಕು ಎಂದು ಅವರು ಕೋರಿದ್ದಾರೆ.

# ಶಕ್ತಿ ಯೋಜನೆಯಡಿ 1 ಕೋಟಿ ಸ್ಮಾರ್ಟ್ ಕಾರ್ಡ್ ವಿತರಣೆ



■ ಸಣ್ಣ ಪ್ರಮಾಣದಲ್ಲಿ ಬಸ್ ಪ್ರಯಾಣದ ದರ ಏರಿಕೆ: ಸಚಿವ ಬೈರತಿ ಸುರೇಶ್

**ಬೆಂಗಳೂರು, ಸೆ.4:** ಮಹಿಳೆಯರಿಗೆ ಉಚಿತ ಪ್ರಯಾಣ ಕಲ್ಪಿಸುವ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಶಕ್ತಿ ಯೋಜನೆಯಡಿಯಲ್ಲಿ ರಾಜ್ಯದ ಒಂದು ಕೋಟಿಗೂ ಅಧಿಕ ಮಹಿಳೆಯರಿಗೆ ಮೊದಲ ಹಂತದಲ್ಲಿ ಉಚಿತ ಸ್ಮಾರ್ಟ್ ಕಾರ್ಡ್ ಗಳನ್ನು ವಿತರಿಸಲಾಗುತ್ತಿದ್ದು, ಇದಕ್ಕೆ 250 ಕೋಟಿ ರೂಪಾಯಿಗಳ ವೆಚ್ಚವಾಗುತ್ತದೆ. ಸದ್ಯದಲ್ಲೇ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗುತ್ತದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ಕಳೆದ ಎಂಟು ತಿಂಗಳಲ್ಲಿ ಕೇಂದ್ರ ಸರ್ಕಾರ ತೈಲೋತ್ಪನ್ನ ದರಗಳನ್ನು ಹೆಚ್ಚಳ ಮಾಡಿದೆ. ಹೀಗಿದ್ದಾಗ್ಯೂ ನಾವು ಬಸ್ ಪ್ರಯಾಣ ದರವನ್ನು ಹೆಚ್ಚಳ ಮಾಡಿಲ್ಲ. ಇದರಿಂದ ನಮ್ಮ ನಾಲ್ಕೂ ಸಾರಿಗೆ ನಿಗಮಗಳಿಗೆ ಸಾವಿರಾರು ಕೋಟಿ ರೂಪಾಯಿ ನಷ್ಟವಾಗುತ್ತಿದೆ. ನಿವೃತ್ತ ಹಿರಿಯ ಐಎಎಸ್ ಅಧಿಕಾರಿ ಅತುಲ್ ತಿವಾರಿ ನೇತೃತ್ವದ ಸಮಿತಿ ದರ ಪರಿಷ್ಕರಣೆಗೆ ಸಂಬಂಧಿಸಿದಂತೆ ಅಧ್ಯಯನ ನಡೆಸುತ್ತಿದ್ದು, ಸದ್ಯದಲ್ಲೇ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ. ಜನಸಾಮಾನ್ಯರಿಗೆ ಹೆಚ್ಚು ಹೊರೆಯಾಗದ ರೀತಿಯಲ್ಲಿ ಸ್ವಲ್ಪ ಪ್ರಮಾಣದಲ್ಲಿ ದರ ಪರಿಷ್ಕರಣೆ ಮಾಡಲಾಗುತ್ತದೆ. ಇದರಿಂದ ಆಗುವ ಹೊರೆಯನ್ನು ಸರಿದೂಗಿಸಲು ಸರ್ಕಾರದಿಂದ ನೆರವು ನೀಡ ಲಾಗುವುದು ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದ್ದಾರೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

## ರಾಜಧಾನಿಯ ರಸ್ತೆಗಿಳಿಯಲಿವೆ 4500 ಇ.ವಿ ಬಸ್

**ರಾಜಧಾನಿ ರಸ್ತೆಗೆ ಸದ್ಯವೇ ಇನ್ನಷ್ಟು ಇವಿ ಬಸ್‌ಗಳು ದೊರೆಯಲಿವೆ. ರಾಜ್ಯ ಸಚಿವ ಸಂಪುಟದಲ್ಲಿ 4500 ಬಸ್ ಪಡೆಯಲು ಅನುಮೋದನೆ ನೀಡಿದ್ದು. ಕೇಂದ್ರ ಸರ್ಕಾರದ ಪಿಎಂ ಇ-ಡ್ರೈವ್ ಕಾರ್ಯಕ್ರಮದಡಿ ಈ 4500 ಬಸ್‌ಗಳನ್ನು ಪಡೆಯಲಾಗುತ್ತಿದೆ. ಇದಕ್ಕಾಗಿ ರಾಜ್ಯ ಸರ್ಕಾರ ವಾರ್ಷಿಕ 600 ಕೋಟಿ ರೂಪಾಯಿ ವೆಚ್ಚ ಮಾಡಲಿದೆ. ಬಸ್ ಡಿಪೋ, ನಿಲ್ದಾಣಗಳ ಉನ್ನತೀಕರಣಕ್ಕೆ ಕೇಂದ್ರದಿಂದ 2 ಸಾವಿರ ಕೋಟಿ ಸಾಲಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು. ಇವಿ ಬಸ್‌ಗಳ ಸಂಚಾರದಿಂದ ಬೆಂಗಳೂರು ನಗರದ ಪರಿಸರ ಮಾಲಿನ್ಯ ಪ್ರಮಾಣ ಕಡಿಮೆಯಾಗಲಿದೆ. ಈ ಮೂಲಕ ರಾಜ್ಯ ಸರ್ಕಾರ ಪರಿಸರ ಸಂರಕ್ಷಣೆಯ ಬದ್ಧತೆಯನ್ನು ಪ್ರದರ್ಶಿಸಲಿದೆ ಎಂದು ಸಚಿವ ಬೈರತಿ ಸುರೇಶ್ ಹೇಳಿದರು. ಕೇಂದ್ರ ಸರ್ಕಾರ ವಿವಿಧ ಬಸ್ ತಯಾರಿಕಾ ಸಂಸ್ಥೆಗಳ ಮೂಲಕ ಈ ಎಲೆಕ್ಟ್ರಿಕ್ ಬಸ್ ಗಳನ್ನು ಪೂರೈಕೆ ಮಾಡುತ್ತದೆ. ಒಂದು ಕಿಲೋಮೀಟರ್‌ಗೆ ನಿಗದಿತ ಹಣವನ್ನು ಬಿಎಂಟಿಸಿ ಸಂಸ್ಥೆಗಳಿಗೆ ಪಾವತಿಸಲಿದೆ ಎಂದು ಸಾರಿಗೆ ಸಚಿವರು ಮಾಹಿತಿ ನೀಡಿದ್ದಾರೆ.**

# ಫುಟ್‌ಪಾತ್ ತೆರವಿನ ನಂತರವೂ ಒತ್ತುವರಿ ಮಾಡಿದರೆ ಕಾನೂನು ಕ್ರಮ ಜರುಗಿಸಿ



■ ಪಾದಚಾರಿ ಮಾರ್ಗಗಳ ಮೇಲೆ ನಿರಂತರ ನಿಗಾ ವಹಿಸಿ: ಅಧಿಕಾರಿಗಳಿಗೆ ಸಚಿವ ಕೃಷ್ಣಬೈರೇಗೌಡ ಸೂಚನೆ

**ಬೆಂಗಳೂರು, ಸೆ.4:** ರಾಜಧಾನಿಯ ವಿವಿಧೆಡೆ ಈಗಾಗಲೇ ತೆರವುಗೊಳಿಸಿರುವ ಫುಟ್‌ಪಾತ್‌ಗಳಲ್ಲಿ ಮತ್ತೆ ಒತ್ತುವರಿ ನಡೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಮರುಒತ್ತುವರಿ ಮಾಡುವವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನಗರದ ಐದು ನಗರ ಪಾಲಿಕೆ ವ್ಯಾಪ್ತಿಗಳಲ್ಲಿ ಪೊಲೀಸ್ ಹಾಗೂ ನಾಗರಿಕ ಸಂಸ್ಥೆಗಳ ಅಧಿಕಾರಿಗಳನ್ನು ಒಳಗೊಂಡ ಜಂಟಿ ಟಾಸ್ಕ್‌ಫೋರ್ಸ್‌ಗಳನ್ನು ರಚಿಸಿ, ಫುಟ್‌ಪಾತ್‌ಗಳ ಮೇಲೆ ನಿರಂತರ ನಿಗಾ ವಹಿಸುವಂತೆ ಅವರು ನಿರ್ದೇಶನ ನೀಡಿದ್ದಾರೆ.

ಫುಟ್‌ಪಾತ್ ಒತ್ತುವರಿ ಕುರಿತಂತೆ ನಡೆದ ವರ್ಚುವಲ್ ಸಭೆಯಲ್ಲಿ ಅಧಿಕಾರಿಗಳೊಂದಿಗೆ ಸಮಸ್ಯೆ ಪರಿಶೀಲಿಸಿದ ಸಚಿವರು, ಒತ್ತುವರಿ ತೆರವುಗೊಳಿಸಿದ ಬಳಿಕ ಅದೇ ಸ್ಥಳದಲ್ಲಿ ಮತ್ತೆ ಒತ್ತುವರಿ ಕಾಣಿಸಿಕೊಳ್ಳುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಹೇಳಿದರು.

ಒತ್ತುವರಿ ತೆರವುಗೊಳಿಸುವುದಷ್ಟೇ ಸಾಕಾಗುವುದಿಲ್ಲ. ತೆರವುಗೊಳಿಸಿದ ಜಾಗ ಮತ್ತೆ ಒತ್ತುವರಿಯಾಗದಂತೆ ಶಾಶ್ವತ ವ್ಯವಸ್ಥೆ ರೂಪಿಸಬೇಕು,

ಪ್ರತಿ ನಗರ ಪಾಲಿಕೆ ವ್ಯಾಪ್ತಿಯಲ್ಲೂ ಪೊಲೀಸ್ ಮತ್ತು ಪಾಲಿಕೆ ಅಧಿಕಾರಿಗಳನ್ನೊಳಗೊಂಡ ಜಂಟಿ ಟಾಸ್ಕ್‌ಫೋರ್ಸ್ ಇರಬೇಕು ಎಂದು ನಿರ್ದೇಶಿಸಿದರು.

**ಮರುಒತ್ತುವರಿ ಗುರುತಿಸಿ ವರದಿ ಮಾಡಿ:**

ಮರುಒತ್ತುವರಿ ಪ್ರಕರಣಗಳನ್ನು ತಕ್ಷಣ ಗುರುತಿಸಿ, ಛಾಯಾಚಿತ್ರ ಹಾಗೂ ಜಿಯೋ-ಟ್ಯಾಗ್ ಮಾಡಿದ ದಾಖಲೆಗಳೊಂದಿಗೆ ವರದಿ ಮಾಡಬೇಕು. ಮಾರ್ಷಲ್‌ಗಳು ಮತ್ತು ಬೀಟ್ ಪೊಲೀಸರು ಜಂಟಿಯಾಗಿ ನಿಯಮಿತ ತಪಾಸಣೆ ನಡೆಸಬೇಕು. ನಗರದಲ್ಲಿರುವ ಬೀದಿ ವ್ಯಾಪಾರಿಗಳ ಕುರಿತು ಹೊಸದಾಗಿ ಸಮಗ್ರ ಸಮೀಕ್ಷೆ ನಡೆಸಬೇಕು. ಸಮೀಕ್ಷೆಯ ಬಳಿಕ ಅರ್ಹತೆ ಹಾಗೂ ಅನ್ವಯವಾಗುವ ಕಾನೂನು ಮಾನದಂಡಗಳ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಬೇಕು ಎಂದು ಕೃಷ್ಣಬೈರೇಗೌಡ ತಿಳಿಸಿದರು.

# ಮಳೆ ಕೊರತೆ ಸವಾಲು: ಮೋಡ ಬಿತ್ತನೆ ಕಾರ್ಯಕ್ಕೆ ಚಾಲನೆ

### ಮಳೆ ಕೊರತೆ: 28.52 ಕೋಟಿ ರೂ. ವೆಚ್ಚ: ಸಚಿವ ಚೆಲುವರಾಯಸ್ವಾಮಿ



**ಬೆಂಗಳೂರು.ಸೆ.4:** ರಾಜ್ಯದಲ್ಲಿ ಎದುರಾಗಿರುವ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸುವ ಸಲುವಾಗಿ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ 'ಮೋಡ ಬಿತ್ತನೆ' ಕಾರ್ಯಕ್ರಮಕ್ಕೆ ನಗರದ ಎಚ್.ಎ.ಎಲ್ ವಿಮಾನ ನಿಲ್ದಾಣದಲ್ಲಿ ಜಲಸಂಪನ್ಮೂಲ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ಅಧಿಕೃತವಾಗಿ ಚಾಲನೆ ನೀಡಿದರು. ಮೋಡ ಬಿತ್ತನೆಗಾಗಿಯೇ ಸಿದ್ಧಗೊಂಡಿರುವ ವಿಶೇಷ ಲಘು ವಿಮಾನಕ್ಕೆ ರಾಷ್ಟ್ರಧ್ವಜ ಹಾಗೂ ನಾಡಧ್ವಜ ತೋರುವ ಮೂಲಕ ಚಾಲನೆ ನೀಡಿದರು.

**ಜಲ ಸಂಕಟದ ಎಚ್ಚರಿಕೆ:** ಈ ವೇಳೆ ಮಾತನಾಡಿದ ಸಚಿವ ಚಲುವರಾಯಸ್ವಾಮಿ, "ರಾಜ್ಯದಲ್ಲಿ ಈ ವರ್ಷ ಮಳೆಯ ಪ್ರಮಾಣ ಕಡಿಮೆಯಾಗಿದೆ. ಮುಂದಿನ ದಿನಗಳಲ್ಲಿ ತೀವ್ರ ಬರ ಎದುರಾಗುವ ಸಾಧ್ಯತೆಗಳಿದ್ದು, ಅದರ ನಿಖರ ಪ್ರಮಾಣವನ್ನು ಈಗಲೇ ಅಂದಾಜಿಸಲು ಸಾಧ್ಯವಿಲ್ಲ. ಈ ತಿಂಗಳ ಅಂತ್ಯಕ್ಕೆ ಮುಂಗಾರು ಮಳೆಗಾಲ ಮುಕ್ತಾಯಗೊಳ್ಳಲಿದೆ. ಒಂದು ವೇಳೆ ಈ ತಿಂಗಳ ಅಂತ್ಯದೊಳಗೆ ಕುಡಿಯುವ ನೀರಿನ ಶೇಖರಣೆ ಆಗದಿದ್ದರೆ, ಮುಂದಿನ ಜೂನ್ ಅಂತ್ಯದವರೆಗೂ ತೀವ್ರ ಅಭಾವ ಎದುರಾಗಲಿದೆ. ಹೀಗಾಗಿ, ನೀರಿನ ಅಭಾವವನ್ನು ಸರಿದೂಗಿಸಲು ಹಾಗೂ ರೈತರ ಹಿತದೃಷ್ಟಿಯಿಂದ ಮೋಡ ಬಿತ್ತನೆಗೆ ಮುಂದಾಗಿದ್ದೇವೆ. ಈ ಹಿಂದೆ ನಡೆದ ಮೋಡ ಬಿತ್ತನೆ ಕಾರ್ಯಾಚರಣೆ ಶೇ.35ರಷ್ಟು ಯಶಸ್ವಿಯಾಗಿತ್ತು. ಏನೇ ನಷ್ಟ ಅಥವಾ ಲಾಭವಾದರೂ, ಈ ಯೋಜನೆಯಿಂದ ಜನರಿಗೆ ಒಳ್ಳೆಯದಾಗಬೇಕು ಎಂಬುದಷ್ಟೇ ನಮ್ಮ ಆಶಯ ಎಂದು ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಜೆ.ಸಿ. ಚಂದ್ರಶೇಖರ್, ಮಾಜಿ ಸಚಿವ ಎಚ್. ಕೆ. ಪಾಟೀಲ್, ಶಾಸಕ ಕೋನರೆಡ್ಡಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

**ಯೋಜನೆಯ ಅನುಷ್ಠಾನ ಮತ್ತು ವೆಚ್ಚ:** ಅಂದಾಜು ವೆಚ್ಚ: ಒಟ್ಟು 28.52 ಕೋಟಿ ರೂ. (ಜಿಎಸ್‌ಟಿ ಹೊರತುಪಡಿಸಿ) ಆಡಳಿತಾತ್ಮಕ ಅನುಮೋದನೆ ಇದಾಗಿದೆ. ಜಲಸಂಪನ್ಮೂಲ ಇಲಾಖೆಯ 'ಕರ್ನಾಟಕ ನೀರಾವರಿ ನಿಗಮ ನಿಯಮಿತ' ಮತ್ತು ಕಂದಾಯ ಇಲಾಖೆಯ 'ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ' ಜಂಟಿಯಾಗಿ ಅನುಷ್ಠಾನಗೊಳಿಸಿದೆ. ಮೋಡ ಬಿತ್ತನೆಯನ್ನು ಖ್ಯಾತಿ ಕ್ಲೈಮೇಟ್ ಮಾರ್ಡಿಫಿಕೇಶನ್ ಕನ್ಸಲ್ಟೆಂಟ್ಸ್ ಗೆ ಕೆಟಿಪಿಪಿ ಕಾಯ್ದೆಯಿಂದ ವಿನಾಯಿತಿ ನೀಡಿ ಗುತ್ತಿಗೆ ನೀಡಲಾಗಿದೆ. ಮೋಡ ಬಿತ್ತನೆ ಕಾರ್ಯವನ್ನು ವೈಜ್ಞಾನಿಕವಾಗಿ ಮತ್ತು ಪರಿಣಾಮಕಾರಿಯಾಗಿ ನಿರ್ವಹಿಸಲು ಸರ್ಕಾರ ಎರಡು ಸಮಿತಿಗಳನ್ನು ರಚಿಸಿದ್ದು, ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ನೇತೃತ್ವ ವಹಿಸಲಿದ್ದಾರೆ.

**ಮೋಡ ಬಿತ್ತನೆ ಹೇಗೆ?:** ವಾತವರಣದಲ್ಲಿ ಮೋಡಗಳಲ್ಲಿನ ತೇವಾಂಶವು ಮಳೆಯಾಗಿ ಸುರಿಯುವಂತೆ ಮಾಡಲು, ಕೃತಕವಾಗಿ ರಾಸಾಯನಿಕಗಳನ್ನು ಸಿಂಪಡಿಸಿ ಮಳೆಯಾಗುವ ಪ್ರಕ್ರಿಯೆಯನ್ನು ಚುರುಕುಗೊಳಿಸುವ ವೈಜ್ಞಾನಿಕ ವಿಧಾನವೇ ಮೋಡ ಬಿತ್ತನೆ. ಮೋಡಗಳ ಸ್ವರೂಪ (ಬೆಚ್ಚಗಿನ ಅಥವಾ ತಂಪಾದ ಮೋಡಗಳು) ಆಧರಿಸಿ ರಾಸಾಯನಿಕಗಳನ್ನು ಬಳಸಲಾಗುತ್ತದೆ. ರಾಸಾಯನಿಕ ಕಣಗಳು ಮೋಡದೊಳಗಿನ ಸಣ್ಣ ನೀರಿನ ಹನಿಗಳನ್ನು ಆಕರ್ಷಿಸಿ, ಅವು ಭಾರವಾಗಿ ಮಳೆಯ ರೂಪದಲ್ಲಿ ಭೂಮಿಗೆ ಬೀಳುತ್ತವೆ. ಪ್ರಕ್ರಿಯೆ ನಡೆದ 30 ನಿಮಿಷಗಳಿಂದ 1 ಗಂಟೆಯೊಳಗೆ ಮಳೆಯಾಗುವ ಸಾಧ್ಯತೆ ಇರುತ್ತದೆ.

## ಎಲ್ಲೆಲ್ಲಿ ಮೋಡ ಬಿತ್ತನೆ?

**ರಾಜ್ಯದಲ್ಲಿ ನಿರ್ದಿಷ್ಟವಾಗಿ ಇಂತಹುದೇ ಜಿಲ್ಲೆ ಎಂದು ಮೊದಲೇ ನಿರ್ಧರಿಸಲಾಗುವುದಿಲ್ಲ. ಬದಲಾಗಿ, ತಾಂತ್ರಿಕ ತಂಡವು ನಿರಂತರವಾಗಿ ನೀಡುವ ವರದಿಗಳ ಆಧಾರದ ಮೇಲೆ, ಮಳೆ ಕೊರತೆ ಇರುವ ಪ್ರದೇಶಗಳು, ಪ್ರಮುಖ ಜಲಾಶಯಗಳ ಜಲಾನಯನ ಪ್ರದೇಶಗಳು ಹಾಗೂ ಕೃಷಿ ಬಿಕ್ಕಟ್ಟು ಎದುರಿಸುತ್ತಿರುವ ಜಿಲ್ಲೆಗಳ ಆಕಾಶದಲ್ಲಿ ಸೂಕ್ತ ಮೋಡಗಳು ಕಂಡುಬಂದಾಗ ತಕ್ಷಣವೇ ಅಲ್ಲಿಗೆ ವಿಮಾನ ತೆರಳಿ ಬಿತ್ತನೆ ಕಾರ್ಯ ನಡೆಸುತ್ತದೆ. ಪ್ರತಿ 2 ಗಂಟೆಗೊಮ್ಮೆ ಲಭ್ಯವಾಗುವ ಹವಾಮಾನ ದತ್ತಾಂಶವೇ ಕಾರ್ಯಾಚರಣೆಯ ಸ್ಥಳವನ್ನು ನಿರ್ಧರಿಸುತ್ತದೆ.**

# ಭೂಮಿಯ ಮೇಲ್ಮೈ ಜಲಮೂಲಗಳ ರಕ್ಷಣೆ ಮಾಡದಿದ್ದರೆ ಜಲಕ್ಷಾಮ ಕಟ್ಟಿಟ್ಟ ಬುತ್ತಿ



■ ಒತ್ತುವರಿ ಮಾಡಿದರೆ ಕ್ರಿಮಿನಲ್ ಪ್ರಕರಣ: ಸಚಿವ ಈಶ್ವರ ಖಂಡ್ರೆ ಎಚ್ಚರಿಕೆ

**ಬೆಂಗಳೂರು, ಸೆ.4:** ಗ್ರಾಮಪಂಚಾಯತಿಗೆ ಸೇರಿದ ಮತ್ತು ನಿರ್ವಹಿಸುತ್ತಿರುವ ಯಾವುದೇ ಕೆರೆಯನ್ನು ಒತ್ತುವರಿ ಮಾಡಿದ್ದರೆ ನಿರ್ದಾಕ್ಷಿಣ್ಯವಾಗಿ ತೆರವು ಮಾಡಿಸಲಾಗುವುದು ಮತ್ತು ಒತ್ತುವರಿದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಎಚ್ಚರಿಕೆ ನೀಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದ ದೇಶದಲ್ಲೇ 2ನೇ ಅತಿಹೆಚ್ಚು ಬರಡು ಭೂಮಿ ಇರುವ ರಾಜ್ಯವಾಗಿದ್ದು, ಗ್ರಾಮೀಣ ಕುಡಿಯುವ ನೀರು ಪೂರೈಕೆ ದೊಡ್ಡ ಸವಾಲಾಗಿದೆ. ಅಂತರ್ಜಲ ದಿನದಿಂದ ದಿನಕ್ಕೆ ಕುಸಿಯುತ್ತಿದ್ದು, ಮೇಲ್ಮೈ ಜಲಮೂಲಗಳನ್ನು ರಕ್ಷಿಸದಿದ್ದರೆ ಮುಂದೆ ನೀರಿಗೆ ಹಾಹಾಕಾರ ಎದುರಾಗಲಿದೆ ಎಂದರು. ರಾಜ್ಯದ ಬಹುತೇಕ ಕಡೆ ಭೂಮಿಯೊಳಗೆ ಹೆಬ್ಬಂಡೆಗಳು ಮತ್ತು ಲ್ಯಾಟರೈಟ್ ಇರುವ ಕಾರಣ ಮಳೆಯ ನೀರು ಇಂಗದೆ ಅಂತರ್ಜಲ ಕುಸಿಯುತ್ತಿದೆ. ಅತಿಯಾದ ಅಂತರ್ಜಲ ಬಳಕೆಯಿಂದಲೂ ಭೂಮಿಯೊಳಗಿನ ಜಲ ಮಟ್ಟ ಕುಸಿದಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ಮೇಲ್ಮೈ ಜಲ ಮೂಲಗಳೇ ಜೀವನಾಧಾರವಾಗಿದ್ದು, ನಾವು ಕೆರೆ, ಕಟ್ಟೆ, ಸರೋವರ, ನದಿಗಳನ್ನು ಸಂರಕ್ಷಿಸದಿದ್ದರೆ ಜಲಕ್ಷಾಮವೇ ಎದುರಾಗುತ್ತದೆ. ಶೃಂಗ ಸಭೆಯ ಸಮಾರೋಪ ಸಮಾರಂಭದಲ್ಲಿ ಪ್ರಧಾನಿಯವರ ಸಮ್ಮುಖದಲ್ಲೇ ಕೆರೆ, ಸರೋವರ, ನದಿಗಳ ನೀರು ತ್ಯಾಜ್ಯ ಸೇರ್ಪಡೆಯಿಂದ ಕಲುಷಿತಗೊಳ್ಳದಂತೆ ಹಾಗೂ ಒತ್ತುವರಿಯಾಗದಂತೆ ಸಂರಕ್ಷಿಸಲು ರಾಷ್ಟ್ರೀಯ ಯೋಜನೆ ರೂಪಿಸಲು ಒತ್ತಾಯಿಸಿದ್ದೇನೆ ಎಂದರು.


ರಾಜ್ಯದ ಅರ್ಧಕ್ಕಿಂತ ಹೆಚ್ಚು ಜನ ಅಂದರೆ, 26,589 ಹಳ್ಳಿಗಳಲ್ಲಿ 4 ಕೋಟಿ 45 ಲಕ್ಷ ಜನರು ವಾಸಿಸುತ್ತಿದ್ದಾರೆ. ಇವರೆಲ್ಲರಿಗೂ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ದೊಡ್ಡ ಸವಾಲಾಗಿದ್ದು, ಸರ್ಕಾರ ಮುಂದಿನ 30 ವರ್ಷಗಳಲ್ಲಿ ಹೆಚ್ಚಳವಾಗುವ ಜನಸಂಖ್ಯೆಯನ್ನೂ ಗಮನದಲ್ಲಿಟ್ಟುಕೊಂಡು ಏಕಗ್ರಾಮ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಅನುಷ್ಠಾನಗೊಳಿಸುತ್ತಿದೆ, ಮೇಲ್ಮೈ ಜಲದ ಗುಣಮಟ್ಟ ಪರೀಕ್ಷೆಗೆ 1.51 ಲಕ್ಷ ಮಹಿಳೆಯರಿಗೆ ತರಬೇತಿ ನೀಡಿದ್ದು ಅವರಿಗೆ ಕ್ಷೇತ್ರೀಯ ಪರೀಕ್ಷಾ ಕಿಟ್ ನೀಡಲಾಗಿದೆ ಎಂದರು.

ಗ್ರಾ.ಪಂ. ವ್ಯಾಪ್ತಿಯಲ್ಲಿ 32504 ಕೆರೆಗಳಿದ್ದು 11498 ಕೆರೆ ಒತ್ತುವರಿ ಆಗಿತ್ತು. ಈ ಪೈಕಿ 6670 ಕೆರೆ ಒತ್ತುವರಿ ತೆರವು ಮಾಡಲಾಗಿದ್ದು, ಇನ್ನೂ 4828 ಕೆರೆಗಳ 11671 ಎಕರೆ ಒತ್ತುವರಿ ತೆರವು ಮಾಡಬೇಕಿದೆ. ಹೊಸದಾಗಿ ಕೆರೆ ಒತ್ತುವರಿ ಮಾಡಿದರೆ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು.

**ಜಲ ಬಜೆಟ್–ಪ್ರಥಮ ರಾಜ್ಯ ಕರ್ನಾಟಕ:** ಇಡೀ ದೇಶದಲ್ಲಿ ವಾಟರ್ ಬಜೆಟಿಂಗ್ ಮಾಡಿದ ಪ್ರಥಮ ರಾಜ್ಯ ಕರ್ನಾಟಕವಾಗಿದೆ. ಇದರಿಂದ ನಿರ್ದಿಷ್ಟ ಭೌಗೋಳಿಕ ಪ್ರದೇಶದಲ್ಲಿ ಲಭ್ಯವಿರುವ ನೀರಿನ ಪ್ರಮಾಣ ಮತ್ತು ಆ ಪ್ರದೇಶದ ನೀರಿನ ಹಾಲಿ ಬೇಡಿಕೆ, ಭವಿಷ್ಯದ ಬೇಡಿಕೆ ಲೆಕ್ಕಹಾಕಿ ಸಮತೋಲಿತವಾಗಿ ನೀರು ಪೂರೈಕೆಗೆ ವೈಜ್ಞಾನಿಕ ಯೋಜನೆ ರೂಪಿಸಲು ಸಹಕಾರಿಯಾಗಿದೆ ಎಂದರು.

# ಖರ್ಗೆ ಭಾಷಣ ನಂತರ ಶುದ್ಧೀಕರಣ ಪ್ರಕರಣ ಉತ್ತರಾಖಂಡ ಬಿಜೆಪಿ ಘಟಕದ ಪದಾಧಿಕಾರಿಗಳ ವಿರುದ್ಧ ಟಿ.ಆರ್.ರಾಮಪ್ಪ ದೂರು ದಾಖಲು

**ಬೆಂಗಳೂರು, ಸೆ.4:** ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಉತ್ತರಾಖಂಡನಲ್ಲಿ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಿದ್ದ ವೇದಿಕೆಯನ್ನು ಶುದ್ಧೀಕರಣ ಮಾಡಿದ್ದಾರೆ ಎಂಬ ಆರೋಪದಲ್ಲಿ ಬೆಂಗಳೂರು ಪೊಲೀಸರು ಶುಕ್ರವಾರ ಉತ್ತರಾಖಂಡದ ಭಾರತೀಯ ಜನತಾ ಪಕ್ಷದ (ಬಿಜೆಪಿ) ಸದಸ್ಯರು ಮತ್ತು ಪದಾಧಿಕಾರಿಗಳ ವಿರುದ್ಧ ವಿಧಾನಸೌಧ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಈ ಸಂಬಂಧ ಭಾರತೀಯ



ರಾಷ್ಟ್ರೀಯ ಕಾಂಗ್ರೆಸ್‌ನ ಎಸ್‌ಟಿ ವಿಭಾಗದ (ಆದಿವಾಸಿ ಕಾಂಗ್ರೆಸ್) ಮಾಜಿ ಉಪಾಧ್ಯಕ್ಷ ಟಿ.ಆರ್. ರಾಮಪ್ಪ ದೂರು ನೀಡಿದ್ದಾರೆ. ಉತ್ತರಾಖಂಡದ ನೈನಿತಾಲ್ ಜಿಲ್ಲೆಯ ಹಲ್ದ್ವಾನಿಯಲ್ಲಿರುವ ರಾಮಲೀಲಾ ಮೈದಾನದಲ್ಲಿ ಆಗಸ್ಟ್ 8ರಂದು ಮಲ್ಲಿಕಾರ್ಜುನ ಖರ್ಗೆ ಅವರು ಶಾಂತಿಯುತ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ್ದರು. ಆಗಸ್ಟ್ 10 ರಂದು ಸ್ಥಳೀಯ ಬಿಜೆಪಿ ಪದಾಧಿಕಾರಿಗಳು ಆ ಸ್ಥಳದಲ್ಲಿ ಧಾರ್ಮಿಕ ಶುದ್ಧೀಕರಣ ಕಾರ್ಯಕ್ರಮವನ್ನು ಆಯೋಜಿಸಿದ್ದರು ಎಂದು ದೂರುದಾರರು ಆರೋಪಿಸಿದ್ದಾರೆ. ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದ ಮಲ್ಲಿಕಾರ್ಜುನ ಖರ್ಗೆ ಅವರ ಉಪಸ್ಥಿತಿಯಿಂದಾಗಿ ಮೈದಾನವು "ಅಪವಿತ್ರ"ಗೊಂಡಿದೆ ಎಂಬ ಜಾತಿವಾದಿ ಕಲ್ಪನೆಯನ್ನು ಪ್ರಚಾರ ಮಾಡಲು ಈ ಕೃತ್ಯವನ್ನು ಉದ್ದೇಶಪೂರ್ವಕವಾಗಿ ಮಾಡಲಾಗಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಉತ್ತರಾಖಂಡ ಬಿಜೆಪಿ ರಾಜ್ಯಾಧ್ಯಕ್ಷ ಮಹೇಂದ್ರ ಭಟ್ ಅವರು ಮಾಧ್ಯಮಗಳಿಗೆ ನೀಡಿದ ಹೇಳಿಕೆಯಲ್ಲಿ ಈ ವಿಧಿಯನ್ನು ಸಾರ್ವಜನಿಕವಾಗಿ ಸಮರ್ಥಿಸಿಕೊಂಡಿದ್ದಾರೆ. ಆ ಮೂಲಕ ತಾರತಮ್ಯದ ನಡವಳಿಕೆಗೆ ಅಧಿಕೃತ ಬೆಂಬಲವನ್ನು ನೀಡಿದ್ದಾರೆ ಎಂದು ದೂರಿನಲ್ಲಿ ಹೆಸರಿಸಲಾಗಿದೆ.

# ಎಸ್‌ಐಆರ್: ರಾಜ್ಯದ 43.81 ಲಕ್ಷಕ್ಕೂ ಹೆಚ್ಚು ಮತದಾರರಿಗೆ ನೋಟಿಸ್ ಸಿದ್ಧ

### ಈಗಾಗಲೇ 7.31 ಲಕ್ಷ ಮಂದಿ ಕೈಸೇರಿದೆ: ಮುಖ್ಯ ಚುನಾವಣಾ ಅಧಿಕಾರಿ



**ಬೆಂಗಳೂರು, ಸೆ.4:** ಮತದಾರರ ಪಟ್ಟಿಯ ಪ್ರಸ್ತುತ ಎಸ್‌ಐಆರ್ ಭಾಗವಾಗಿ 43.81 ಲಕ್ಷಕ್ಕೂ ಹೆಚ್ಚು ನೋಟೀಸ್‌ಗಳನ್ನು ಸಿದ್ಧಪಡಿಸಲಾಗಿದ್ದು, ಈಗಾಗಲೇ 7.31 ಲಕ್ಷ ಮತದಾರರಿಗೆ ನೋಟಿಸ್ ತಲುಪಿಸಲಾಗಿದೆ ಎಂದು ಮುಖ್ಯ ಚುನಾವಣಾ ಅಧಿಕಾರಿ ಕಚೇರಿ ಶುಕ್ರವಾರ ತಿಳಿಸಿದೆ.

ಸೆ.4ರ ವೇಳೆಗೆ ರಾಜ್ಯದಲ್ಲಿ ಮತದಾರರ ಪಟ್ಟಿಯಲ್ಲಿ 4,46,38,124 ಮತದಾರರಿದ್ದು, ಇದರಲ್ಲಿ 2.21 ಕೋಟಿ ಪುರುಷರು, 2.24 ಕೋಟಿ ಮಹಿಳೆಯರು ಮತ್ತು 2,871 ಟ್ರಾನ್ಸ್‌ಜೆಂಡರ್ ಮತದಾರರು ಸೇರಿದ್ದಾರೆ. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದ ಭಾಗವಾಗಿ "ಮ್ಯಾಪಿಂಗ್ ಇಲ್ಲ" ಮತ್ತು "ವೈಪರೀತ್ಯಗಳು" ವರ್ಗಗಳ ಅಡಿಯಲ್ಲಿ ಹೆಸರುಗಳನ್ನು ಹೊಂದಿರುವ ಮತದಾರರಿಗೆ ನೋಟಿಸ್‌ಗಳನ್ನು ನೀಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಿಇಓ ಕಚೇರಿ ಹೊರಡಿಸಿದ ಹೇಳಿಕೆಯ ಪ್ರಕಾರ, 36,49,371 ನೋಟಿಸ್‌ಗಳು ವಿತರಣೆ ಬಾಕಿ ಇದೆ. ಒಟ್ಟು 206 ವಿಚಾರಣೆಗಳು ಪೂರ್ಣಗೊಂಡಿವೆ. ಸೆಪ್ಟೆಂಬರ್ 3ರಂದು ವಿಚಾರಣೆಗಳು ಪ್ರಾರಂಭವಾದವು ಮತ್ತು ಅಕ್ಟೋಬರ್ 12 ರವರೆಗೆ ಚುನಾವಣಾ ನೋಂದಣಿ ಅಧಿಕಾರಿಗಳು ಮತ್ತು ಸಹಾಯಕ ಚುನಾವಣಾ ನೋಂದಣಿ ಅಧಿಕಾರಿಗಳ ಮುಂದೆ ಮುಂದುವರಿಯಲಿವೆ ಎಂದು ತಿಳಿಸಿದ್ದಾರೆ. ನೋಂದಾಯಿತ ಮತ್ತು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಕೋರಿಕೆಯ ಮೇರೆಗೆ, "ನೋ ಮ್ಯಾಪಿಂಗ್" ಮತ್ತು "ವೈಪರೀತ್ಯಗಳು" ವರ್ಗಗಳ ಅಡಿಯಲ್ಲಿ ನೋಟಿಸ್ ನೀಡಲಾದ ವ್ಯಕ್ತಿಗಳ ಪಟ್ಟಿಗಳನ್ನು ಸೆಪ್ಟೆಂಬರ್ 6ರ ಮೊದಲು ಹಂಚಿಕೊಳ್ಳಲಾಗುವುದು ಎಂದು ಸಿಇಓ ಕಚೇರಿ ತಿಳಿಸಿದೆ. ನೋಟಿಸ್ ಹಂತದಲ್ಲಿ 224 ಇಆರ್‌ಒಗಳು ಮತ್ತು 4,262 ಎಇಆರ್‌ಒಗಳು ಮತ್ತು ಹೆಚ್ಚುವರಿ ಎಇಆರ್‌ಒಗಳು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗದ ಸೂಚನೆಗಳ ಪ್ರಕಾರ ಮತದಾರರ ನೋಂದಣಿಗಾಗಿ ಎರಡನೇ ವಿಶೇಷ ಅಭಿಯಾನವನ್ನು ಸೆಪ್ಟೆಂಬರ್ 19 ಮತ್ತು 20 ರಂದು ನಡೆಸಲಾಗುವುದು. ಮತಗಟ್ಟೆಗಳ ಸುಧಾರಣೆಗಳ ನಂತರ, 1,873 ಹೊಸ ಬೂತ್‌ಮಟ್ಟದ ಅಧಿಕಾರಿಗಳನ್ನು ನೇಮಿಸಲಾಗಿದೆ ಮತ್ತು ಅವರ ಲಾಗಿನ್‌ಗಳನ್ನು ಬಿಎಲ್‌ಒ ಅಪ್ಲಿಕೇಶನ್‌ನಲ್ಲಿ ರಚಿಸಲಾಗಿದೆ ಎಂದು ಚುನಾವಣಾಧಿಕಾರಿ ಪ್ರಕಟಣೆ ತಿಳಿಸಿದೆ. ಮತಗಟ್ಟೆಗಳ ಸುಧಾರಣೆ ಮತ್ತು ಮರು-ಕ್ರಮಬದ್ಧಗೊಳಿಸುವಿಕೆಯಿಂದಾಗಿ ಮತದಾರರ ಭಾಗ ಸಂಖ್ಯೆ ಮತ್ತು ಸರಣಿ ಸಂಖ್ಯೆ ಬದಲಾಗಿರಬಹುದು ಎಂದು ಅದು ಸ್ಪಷ್ಟಪಡಿಸಿದೆ. ಹಿಂದಿನ ಭಾಗಗಳಲ್ಲಿ ತಮ್ಮ ಹೆಸರುಗಳನ್ನು ಕಂಡುಹಿಡಿಯಲು ಸಾಧ್ಯವಾಗದ ಮತದಾರರು ತಮ್ಮ ಮತದಾರರ ಫೋಟೋ ಗುರುತಿನಚೀಟಿ ಸಂಖ್ಯೆಯನ್ನು ಬಳಸಿಕೊಂಡು voters.eci.gov.in ನಲ್ಲಿ ಅಥವಾ ECINET ಮೊಬೈಲ್ ಅಪ್ಲಿಕೇಶನ್ ಮೂಲಕ ಹುಡುಕಲು ವಿನಂತಿಸಲಾಗಿದೆ ಎಂದು ಅದು ಹೇಳಿದೆ.

# ಪಿಎಂ ಸೇತು ಯೋಜನೆ: ಬೆಂಗಳೂರು ನಗರ, ಕಲಬುರಗಿ ಹಬ್‌ನ ತಲಾ 4 ಐಟಿಐ ಆಯ್ಕೆ



### ಸಾರ್ವಜನಿಕ, ಖಾಸಗಿ ಉದ್ಯಮಗಳು ಸಕ್ರಿಯ ಪಾಲ್ಗೊಂಡು ಅಗತ್ಯ ಸಂಪನ್ಮೂಲ ಸೃಷ್ಟಿಸಿಕೊಳ್ಳುವಂತೆ ಸಚಿವ ಎಂ.ಬಿ. ಪಾಟೀಲ್ ಸಲಹೆ




**ಬೆಂಗಳೂರು, ಸೆ.4:** ರಾಜ್ಯದ 48 ಐಟಿಐ ಸಂಸ್ಥೆಗಳನ್ನು ಉನ್ನತೀಕರಿಸುವ ಗುರಿ ಹೊಂದಿರುವ 'ಪಿಎಂ ಸೇತು' ಯೋಜನೆಯಲ್ಲಿ ಸಾರ್ವಜನಿಕ ಮತ್ತು ಖಾಸಗಿ ವಲಯದ ಉದ್ಯಮಗಳು ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಶಿಕ್ಷಣ ಸಂಸ್ಥೆಗಳ ಜತೆ ಸಹಯೋಗದ ಮೂಲಕ ಕೈಗಾರಿಕೆಗಳು ತಮಗೆ ಬೇಕಾದ ಮಾನವ ಸಂಪನ್ಮೂಲವನ್ನು ಸೃಷ್ಟಿಸಿಕೊಳ್ಳಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ.

ಪಿಎಂ ಸೇತು ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಅಗತ್ಯವಿರುವ ಕೈಗಾರಿಕಾ ಸಹಭಾಗಿತ್ವ ಕುರಿತು ಚರ್ಚಿಸಲು ಅವರು ಕರ್ನಾಟಕ ಉದ್ಯೋಗ ಮಿತ್ರದ ಸಭಾಂಗಣದಲ್ಲಿ ಗಣ್ಯ ಉದ್ಯಮಿಗಳ ಜತೆ ಸಭೆ ನಡೆಸಿದರು. ಜತೆಯಲ್ಲಿ ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಇದ್ದರು.

ಸಭೆಯ ಬಗ್ಗೆ ಮಾತನಾಡಿದ ಪಾಟೀಲ್, ಪಿಎಂ ಸೇತು ಯೋಜನೆಯು ಹಬ್ ಮತ್ತು ಸ್ಪೋಕ್ ಸ್ವರೂಪ ಹೊಂದಿದೆ. ಇದರಲ್ಲಿ ಒಂದು ಹಬ್ ಅಡಿಯಲ್ಲಿ 4 ಐಟಿಐ ಬರುತ್ತವೆ. ಇದರಲ್ಲಿ ರಾಜ್ಯದಲ್ಲಿ 12 ಹಬ್ ಇದ್ದು, 48 ಐಟಿಐ ಇವೆ. ಈಗ ಬೆಂಗಳೂರು ನಗರ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಒಂದೊಂದು ಹಬ್ ಆಯ್ಕೆ ಮಾಡಿಕೊಳ್ಳಲಾಗಿದೆ. ಇದರಲ್ಲಿ ಆಯಾ ಭಾಗಗಳ ಉದ್ಯಮಿಗಳು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಅವರು ಕರೆ ಕೊಟ್ಟಿದ್ದಾರೆ.

ಯೋಜನೆಯ ಅನುಷ್ಠಾನಕ್ಕೆ ವಿಶೇಷ ಘಟಕ ಯೋಜನೆ (ಎಸ್.ಪಿ.ವಿ) ಇರಲಿದ್ದು, ಇದರಲ್ಲಿ ತಲಾ 6 ಮಂದಿ ಉದ್ಯಮಿಗಳೇ ಇರಲಿದ್ದಾರೆ. ಕಂಪನಿಗಳ ಸಿಎಸ್‌ಆರ್ ವಿಭಾಗ, ಪ್ರತಿಷ್ಠಾನ ಇತ್ಯಾದಿಗಳು ಪಿಎಂ ಸೇತು ಯೋಜನೆಯ ಭಾಗವಾಗಲು ಅವಕಾಶವಿದೆ. ವರ್ಷಕ್ಕೆ ಕನಿಷ್ಠ 500 ಕೋಟಿ ರೂಪಾಯಿ ವ್ಯವಹಾರ ನಡೆಸುತ್ತಿರುವ ಮತ್ತು 1,000ಕ್ಕಿಂತ ಹೆಚ್ಚು ಉದ್ಯೋಗಿಗಳನ್ನು ಹೊಂದಿರುವ ಕಂಪನಿಗಳು ಇದರಲ್ಲಿ ಭಾಗವಹಿಸಬಹುದು. ಈ ಸಹಯೋಗದ ಮೂಲಕ ಕಂಪನಿಗಳು ತಮಗೆ ಅಗತ್ಯವಿರುವ ಪಠ್ಯಕ್ರಮ, ತರಬೇತಿ ಮತ್ತು ಕೌಶಲ್ಯಾಭಿವೃದ್ಧಿಯ ಸ್ವರೂಪವನ್ನು ರೂಪಿಸುವ ಅವಕಾಶ ಪಡೆಯಲಿವೆ ಎಂದು ನುಡಿದಿದ್ದಾರೆ

ಬೆಂಗಳೂರು ನಗರದಲ್ಲಿ ಪೀಣ್ಯ ಐಟಿಐ ಹಬ್ ಸಂಸ್ಥೆಯಾಗಿದ್ದು, ಇದರ ವ್ಯಾಪ್ತಿಯಲ್ಲಿ ತುಮಕೂರು ರಸ್ತೆ, ದೊಮ್ಮಲೂರು, ಹೊಸೂರು ರಸ್ತೆ ಮತ್ತು ದೇವನಹಳ್ಳಿ ಐಟಿಐಗಳು ಸ್ಪೋಕ್ ಸಂಸ್ಥೆಗಳಾಗಿವೆ. ಉತ್ತರ ಕರ್ನಾಟಕ ಭಾಗದಲ್ಲಿ ಕಲಬುರಗಿ ಬಾಲಕರ ಐಟಿಐ ಹಬ್ ಆಗಿದ್ದು, ಇಲ್ಲಿ ಸೇಡಂ, ಅಫಜಲಪುರ, ಜೇವರ್ಗಿ ಮತ್ತು ಕಲಬುರಗಿ ಮಹಿಳಾ ಐಟಿಐ ಸ್ಪೈಕ್ ಸಂಸ್ಥೆಗಳಾಗಿವೆ ಎಂದು ವಿವರಿಸಿದ್ದಾರೆ.

ಈ ಯೋಜನೆಗೆ ಕೇಂದ್ರ ಸರಕಾರ 112 ಕೋಟಿ, ರಾಜ್ಯ ಸರಕಾರ 98 ಕೋಟಿ ಮತ್ತು ಕೈಗಾರಿಕಾ ವಲಯವು 31 ಕೋಟಿ ರೂಪಾಯಿ ವಿನಿಯೋಗಿಸುತ್ತಿವೆ ಎಂದು ಪಾಟೀಲ ಮಾಹಿತಿ ನೀಡಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಶರಣ ಪ್ರಕಾಶ ಪಾಟೀಲ್ ಅವರು, ರಾಜ್ಯದಲ್ಲಿ 270 ಸರ್ಕಾರಿ ಐಟಿಐಗಳು ಇವೆ. ಉದ್ಯಮಿಗಳು ಈ ಐಟಿಐಗಳನ್ನು ದತ್ತು ತೆಗೆದುಕೊಳ್ಳಲು ಮುಂದೆ ಬಂದರೆ ಅದಕ್ಕೆ ಅವಕಾಶ ನೀಡಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಬೋಯಿಂಗ್, ಬಯೋಕಾನ್, ಜಿಂದಾಲ್, ಟೊಯೋಟಾ, ಲೆನ್ಸ್ ಕಾರ್ಟ್, ಆಟೊ ಲೈವ್, ಸೆಂಟಮ್, ಎನ್ ಟಿಟಿಎಫ್ ಮುಂತಾದ ಪ್ರತಿಷ್ಠಿತ ಕಂಪನಿಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

ಕರ್ನಾಟಕ ಕೌಶಲ್ಯಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅ.ಇ.ವಿ.ರಮಣರೆಡ್ಡಿ, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಕೌಶಲ್ಯಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಸುಬೋಧ್ ಯಾದವ್, ಕೈಗಾರಿಕಾ ಇಲಾಖೆ ಆಯುಕ್ತೆ ಖುಷ್ಬೂ ಗೋಯೆಲ್, ಕೈಗಾರಿಕಾ ತರಬೇತಿ ಇಲಾಖೆಯ ಆಯುಕ್ತೆ ಶಿಲ್ಪಾ ಉಪಸ್ಥಿತರಿದ್ದರು.

# ಗ್ಯಾರಂಟಿಗಳ ಭ್ರಮೆಯಲ್ಲಿ ಕಡುಬಡವರ ಮರೆತ ಸರ್ಕಾರ: ಬಿವೈವಿ ವಾಗ್ದಾಳಿ



**ಸಿಂಧನೂರು, ಸೆ.4:** ಸಿಎಂ ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ನಾಡಿನ ಬಡವರು, ಕೂಲಿ ಕಾರ್ಮಿಕರು, ರೈತರು ಹಾಗೂ ದುರ್ಬಲ ವರ್ಗಗಳಿಂದ ದೂರ ಸಾಗುತ್ತಿದೆ. ರಾಜ್ಯದ ಕಡುಬಡವರು ಸರ್ಕಾರಕ್ಕೆ ಶಾಪ ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಾಗ್ದಾಳಿ ನಡೆಸಿದರು.

ಸಿಂಧನೂರಿನಲ್ಲಿ ಬಿಜೆಪಿ 4ನೇ ದಿನದ ಪಾದಯಾತ್ರೆಗೆ ಚಾಲನೆ ನೀಡಿದ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪಂಚ ಗ್ಯಾರಂಟಿಗಳ ಭ್ರಮೆಯಲ್ಲಿ ತೇಲುತ್ತಿರುವ ಕಾಂಗ್ರೆಸ್ ಸರ್ಕಾರ ವಾಸ್ತವಿಕ ಸತ್ಯದಿಂದ ದೂರವಾಗಿದೆ ಎಂದು ಟೀಕಿಸಿದರು. ವೃದ್ಧಾಪ್ಯ ವೇತನ, ಅಂಗವಿಕಲರ ಮಾಸಾಶನ ಸೇರಿದಂತೆ ಸಾಮಾಜಿಕ ಭದ್ರತಾ ಪಿಂಚಣಿಗಳು ಹಲವು ತಿಂಗಳುಗಳಿಂದ ಫಲಾನುಭವಿಗಳಿಗೆ ತಲುಪುತ್ತಿಲ್ಲ. ಕಳೆದ ಆರು ತಿಂಗಳಿಂದ ಮಾಸಾಶನ ಬಂದಿಲ್ಲ ಎಂದು ಫಲಾನುಭವಿಗಳೇ ಅಳಲು ತೋಡಿಕೊಳ್ಳುತ್ತಿದ್ದಾರೆ. ಕಡುಬಡವರ ಬದುಕಿಗೆ ಆಸರೆಯಾಗಬೇಕಾದ ಸರ್ಕಾರ ಅವರ ಸಂಕಷ್ಟಕ್ಕೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು.

ಗಂಗಾಕಲ್ಯಾಣ ಯೋಜನೆಯ ಪ್ರಯೋಜನವೂ ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ದೊರೆಯುತ್ತಿಲ್ಲ. ಮನೆ ಇಲ್ಲದ ಬಡವರಿಗೆ ಮನೆಗಳನ್ನು ನಿರ್ಮಿಸಿಕೊಡುವಲ್ಲಿಯೂ ಸರ್ಕಾರ ವಿಫಲವಾಗಿದೆ. ಬಡವರ ಕಲ್ಯಾಣಕ್ಕಾಗಿ ನೀಡಬೇಕಾದ ಹಣವನ್ನೇ ಸಮಯಕ್ಕೆ ನೀಡಲು ಸಾಧ್ಯವಾಗದ ಸ್ಥಿತಿಗೆ ಕಾಂಗ್ರೆಸ್ ಸರ್ಕಾರ ತಲುಪಿದೆ ಎಂದು ವಿಜಯೇಂದ್ರ ಹೇಳಿದರು.

ರೈತರು, ಕೂಲಿಕಾರ್ಮಿಕರು, ವೃದ್ಧರು, ಅಂಗವಿಕಲರು ಸೇರಿದಂತೆ ಸಮಾಜದ ಎಲ್ಲ ವರ್ಗದ ಜನರನ್ನು ಸರ್ಕಾರ ನಿರ್ಲಕ್ಷ್ಯದಿಂದ ನೋಡುತ್ತಿದೆ. ಒಂದು ಕಡೆ ಗ್ಯಾರಂಟಿಗಳ ಪ್ರಚಾರದಲ್ಲಿ ಸರ್ಕಾರ ಮುಳುಗಿದ್ದರೆ, ಮತ್ತೊಂದೆಡೆ ನಾಡಿನ ಕಡುಬಡವರ ನೈಜ ಸಮಸ್ಯೆಗಳು ಕಡೆಗಣನೆಯಾಗಿವೆ ಎಂದು ದೂರಿದರು.ಕಾಂಗ್ರೆಸ್ ಸರ್ಕಾರ ನಾಡಿನ ಕಡುಬಡವರಿಗೆ ಶಾಪವಾಗಿ ಪರಿಣಮಿಸಿದೆ. ರಾಜ್ಯದ ಜನತೆ ಸರ್ಕಾರದ ಆಡಳಿತದಿಂದ ಬೇಸತ್ತಿದ್ದಾರೆ. ಗ್ಯಾರಂಟಿಗಳ ಭ್ರಮೆಯಿಂದ ಹೊರಬಂದು ಜನರ ವಾಸ್ತವಿಕ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

### ಹೋರಾಟದ ಮೂಲಕ 25 ದಿನಗಳಲ್ಲಿ ಬಿಜೆಪಿಗೆ ನಾಲ್ಕು ಜಯ

ಬೆಂಗಳೂರು, ಸೆ.4: ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಬಿಜೆಪಿ ನಡೆಸಿದ ನಿರಂತರ ಹೋರಾಟದ ಫಲವಾಗಿ ಕಳೆದ 25 ದಿನಗಳಲ್ಲಿ ಪಕ್ಷವು ನಾಲ್ಕು ಮಹತ್ವದ ಯಶಸ್ಸುಗಳನ್ನು ಸಾಧಿಸಿದೆ ಎಂದು ಬಿ.ವೈ. ವಿಜಯೇಂದ್ರ ಪ್ರತಿಪಾದಿಸಿದ್ದಾರೆ.

ಮೊದಲ ಯಶಸ್ಸು ವಿಧಾನಮಂಡಲದ ಉಭಯ ಸದನಗಳಲ್ಲಿ ಬಿಜೆಪಿ ನಡೆಸಿದ ಧರಣಿಯ ಪರಿಣಾಮವಾಗಿ ಬಿ. ನಾಗೇಂದ್ರ ಅವರ ರಾಜೀನಾಮೆಯನ್ನು ಸರ್ಕಾರದಿಂದ ಪಡೆಯುವಲ್ಲಿ ಪಕ್ಷ ಯಶಸ್ವಿಯಾಯಿತು. ಎರಡನೇ ಯಶಸ್ಸು, ಬಿಜೆಪಿ ಬೀದಿಗಿಳಿದು ಹೋರಾಟ ನಡೆಸಿದ ಪರಿಣಾಮ ಮುಖ್ಯಮಂತ್ರಿ ಸೇರಿದಂತೆ ಸಚಿವರು ತಮ್ಮ ಹವಾನಿಯಂತ್ರಿತ ಕೊಠಡಿಗಳಿಂದ ಹೊರಬಂದು ಬರಪೀಡಿತ ಜಿಲ್ಲೆಗಳಿಗೆ ಭೇಟಿ ನೀಡುವಂತೆ ಸರ್ಕಾರವನ್ನು ಒತ್ತಾಯಿಸುವಲ್ಲಿ ಯಶಸ್ವಿಯಾಯಿತು. ಮೂರನೇ ಮಹತ್ವದ ಯಶಸ್ಸು ಎಂದರೆ, ಬಿಜೆಪಿ ನಿರಂತರ ಹೋರಾಟ ನಡೆಸಿದ ಪರಿಣಾಮ ಸರ್ಕಾರ ಉದ್ಯಾನವನ ಮಸೂದೆಯನ್ನು ಸರ್ಕಾರ ವಾಪಸ್ ಪಡೆಯಿತು. ಎತ್ತರಕ್ಕೆ ಹಾರುತ್ತಿದ್ದ ಸರ್ಕಾರವನ್ನು ನಾವು ಮಂಡಿಯೂರಿಸುವಂತೆ ಮಾಡಿದ್ದೇವೆ ಎಂದು ವಿವರಿಸಿದ್ದಾರೆ.

ನಾಲ್ಕನೇ ಯಶಸ್ಸಾಗಿ, ಬರ ಸೇರಿದಂತೆ ರಾಜ್ಯದ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಲು ವಿಧಾನಮಂಡಲದ ವಿಶೇಷ ಅಧಿವೇಶನ ಕರೆಯುವಂತೆ ಸರ್ಕಾರವನ್ನು ಒತ್ತಾಯಿಸುವಲ್ಲಿ ಪಕ್ಷ ಯಶಸ್ವಿಯಾಗಿದೆ. ಇದು ಬಿಜೆಪಿಯ ಒತ್ತಾಯದಿಂದ ಮಾತ್ರ ಸಾಧ್ಯವಾಗಿದೆ ಎಂದು ಅವರು ತಿಳಿಸಿದ್ದಾರೆ. ಇದೇ ಶಕ್ತಿಯುತ ಜನಾಂದೋಲನದ ಅರ್ಥ. ಬಿಜೆಪಿ ಬಲಿಷ್ಠ ಹೋರಾಟವನ್ನು ಕಟ್ಟುವಲ್ಲಿ ಯಶಸ್ವಿಯಾಗಿದೆ. ಸತತ ಯಶಸ್ಸುಗಳಿಂದ ನಾವು ಮತ್ತಷ್ಟು ಉತ್ಸಾಹಗೊಂಡಿದ್ದೇವೆ. ಯಶಸ್ಸಿನಂತೆ ಯಶಸ್ಸನ್ನು ಮತ್ತಾವುದೂ ತಂದುಕೊಡದು. ಈ ಯಶಸ್ಸು ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧದ ನಮ್ಮ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲು ಬಿಜೆಪಿಗೆ ಶಕ್ತಿ ನೀಡಲಿದೆ ಎಂದು ವಿಜಯೇಂದ್ರ ಹೇಳಿದ್ದಾರೆ.



ಬಾಗಲಕೋಟೆಯ ಕೂಡಲ ಸಂಗಮದ ಸಂಗಮನಾಥ ದೇಗುಲದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಶುಕ್ರವಾರ ಪೂಜೆ ಸಲ್ಲಿಸಿ, ಘಟಪ್ರಭಾ, ಮಲಪ್ರಭಾ ಮತ್ತು ಕೃಷ್ಣಾ ನದಿ ಸಂಗಮದಲ್ಲಿ ಬಾಗಿನ ಸಮರ್ಪಿಸಿದರು. ವಿಧಾನಸಭೆ ಉಪಾಸಭಾಧ್ಯಕ್ಷ ಮಂಕಾಳ ವೈದ್ಯ, ಸಚಿವ ವಿಜಯಾನಂದ ಕಾಶಪ್ಪನವರ್, ಸಂಸದ ಡಾ ಜಿ ಸಿ ಚಂದ್ರಶೇಖರ್, ಶಾಸಕರಾದ ಆರ್ ಬಿ ತಿಮ್ಮಾಪುರ, ಜೆ.ಟಿ.ಪಾಟೀಲ್, ಭೀಮಸೇನ್ ಚಿಮ್ಮನಕಟ್ಟಿ, ವೀಣಾ ಕಾಶಪ್ಪನವರ್ ಮತ್ತಿತರರು ಇದ್ದರು.

# ಲಾಲ್‌ಬಾಗ್ ಬಂಡೆಗೆ ಸಂಬಂಧಿಸಿದ ಜಿಎಸ್‌ಐ ವರದಿ ಸಲ್ಲಿಸುವಂತೆ ಹೈಕೋರ್ಟ್ ಆದೇಶ

**ಬೆಂಗಳೂರು, ಸೆ.4:** ಬೆಂಗಳೂರಿನ ಲಾಲ್‌ಬಾಗ್ ಸಸ್ಯಕಾಶಿಯಲ್ಲಿರುವ ಅತ್ಯಂತ ಪುರಾತನವಾದ ಶಿಲಾ ರಚನೆ ಪೆನಿನ್ಸುಲರ್ ಗ್ನೀಸ್ ಸ್ಮಾರಕ ಅಥವಾ ಲಾಲ್‌ಬಾಗ್ ಬಂಡೆಗೆ ಬಂಧಿಸಿದಂತೆ ಭಾರತೀಯ ಭೂವೈಜ್ಞಾನಿಕ ಸಮೀಕ್ಷಾ (ಜಿಎಸ್‌ಐ) ಸಂಸ್ಥೆ ಸಿದ್ಧಪಡಿಸಿರುವ ವರದಿ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ.

ಈ ಸ್ಮಾರಕ ಸ್ಥಳಾಂತರವು ಮಹತ್ವಾಕಾಂಕ್ಷಿ ಯೋಜನೆಯಾದ 16.7 ಕಿ.ಮೀ. ಬೆಂಗಳೂರು ಅವಳಿ ಸುರಂಗ ಮಾರ್ಗ ಯೋಜನೆಗೆ ಸವಾಲಿನದು ಎಂದು ಪರಿಗಣಿಸಲಾಗಿದೆ. ಸುರಂಗ ಮಾರ್ಗ ಯೋಜನೆಗೆ ಆಕ್ಷೇಪಿಸಿ ನಟ, ನಿರ್ದೇಶಕ ಪ್ರಕಾಶ್ ಬೆಳವಾಡಿ ಮತ್ತಿತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಕೆ ಎಸ್ ಹೇಮಲೇಖಾ ಅವರ ವಿಭಾಗೀಯ ಪೀಠ ನಡೆಸಿತು.

ಅರ್ಜಿದಾರರ ಪರವಾಗಿ ಹಾಜರಾಗಿದ್ದ ಬೆಂಗಳೂರು ದಕ್ಷಿಣ ಲೋಕಸಭಾ ಸದಸ್ಯ ಮತ್ತು ವಕೀಲ ತೇಜಸ್ವಿ ಸೂರ್ಯ ಅವರು ಜಿಎಸ್‌ಐ ವರದಿ ಸಲ್ಲಿಸಲು ಸಂಬಂಧಿತ ಪ್ರಾಧಿಕಾರಕ್ಕೆ ನಿರ್ದೇಶಿಸಬೇಕು ಎಂದು ಕೋರಿದರು. ಈ ಕೋರಿಕೆಯನ್ನು ಪುರಸ್ಕರಿಸಿದ ಪೀಠವು ವರದಿ ಸಲ್ಲಿಸಲು ಸಕ್ಷಮ ಪ್ರಾಧಿಕಾರಕ್ಕೆ ನಿರ್ದೇಶಿಸಿತು.

ಇದೇ ಸುರಂಗ ಮಾರ್ಗ ಯೋಜನೆ ಪ್ರಶ್ನಿಸಿರುವ ಅರ್ಜಿಗಳನ್ನು ಪ್ರತ್ಯೇಕವಾಗಿ ವಿಚಾರಣೆ ನಡೆಸಿದ ಪೀಠವು ಹೆಬ್ಬಾಳ ಕೆರೆಯಲ್ಲಿ ಸುರಂಗ ಮಾರ್ಗ ಹಾದುಹೋಗುವ ಹಿನ್ನೆಲೆಯಲ್ಲಿ ಎದುರಾಗಿರುವ ಆತಂಕಗಳನ್ನು ನಿವಾರಿಸುವ ನಿಟ್ಟಿನಲ್ಲಿ ಎಂಜಿನಿಯರ್ ಅವರಿಂದ ತಾಂತ್ರಿಕ ಉಪನ್ಯಾಸ (ಪ್ರೆಸೆಂಟೇಷನ್) ಏರ್ಪಡಿಸುವಂತೆ ಸರ್ಕಾರಕ್ಕೆ ನಿರ್ದೇಶಿಸಿದೆ.

ಸುರಂಗ ಮಾರ್ಗದಿಂದ ಹೆಬ್ಬಾಳ ಕೆರೆಗೆ ಒಳ ಹರಿವು ಅಥವಾ ಹೊರ ಹರಿವು ಹಾಗೂ ಅಂತರ್ಜಲದ ಹರಿವಿಗೆ ಅಡ್ಡಿಪಡಿಸಲಿದೆಯೇ ಎಂಬುದನ್ನು ಉಪನ್ಯಾಸದಲ್ಲಿ ಸ್ಪಷ್ಟಪಡಿಸಬೇಕು. ಕೆರೆಯ ತಳದಲ್ಲಿ ಸುರಂಗ ಮಾರ್ಗ ಹಾದು ಹೋಗುವುದರಿಂದ ಇದು ಹೆಬ್ಬಾಳ ಕೆರೆಗೆ ಸೇರುವ ರಾಜಕಾಲುವೆ ಜಾಲಕ್ಕೆ ಅಡ್ಡಿಪಡಿಸುವ ಸಾಧ್ಯತೆಯನ್ನು ಅರ್ಜಿದಾರರು ವ್ಯಕ್ತಪಡಿಸಿದ್ದಾರೆ ಎಂದು ಪೀಠ ಹೇಳಿದೆ.

ಅರ್ಜಿದಾರರನ್ನು ಪ್ರತಿನಿಧಿಸಿದ್ದ ಸ್ನೇಹಾ ನಾಗರಾಜ್ ಅವರು ಪ್ರಸ್ತಾವಿತ ಯೋಜನೆಯು ಕೆರೆಯ ಬಫರ್ ವಲಯದಲ್ಲಿ ಮಾತ್ರ ಹಾದು ಹೋಗುವುದಿಲ್ಲ, ಅದು ಕೆರೆಜಾಗದಲ್ಲಿ ಹೋಗುತ್ತದೆ. ಹೆಬ್ಬಾಳ ಕೆರೆಯು 136 ಎಕರೆ ಇದ್ದು, 3.5 ಎಕರೆ ಭೂಮಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯೋಜನೆಗೆ ಸ್ವಾಧೀನಪಡಿಸಿಕೊಂಡಿದೆ. ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ಕಾಯಿದೆ ಅಡಿ ಪ್ರಸ್ತಾವಿತ ಯೋಜನೆಗೆ ಕೆರೆಯ ಜಾಗವನ್ನು ವರ್ಗಾಯಿಸಲು ಶಾಸನಬದ್ಧ ಅಧಿಕಾರವಿಲ್ಲ ಎಂದರು. ಅಡ್ವೋಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಪ್ರಸ್ತಾವಿತ ಯೋಜನೆಯು ಹೆಬ್ಬಾಳ ಕೆರೆಯ ಒಳಹರಿವು ಮತ್ತು ಹೊರ ಹರಿವಿಗೆ ಯಾವುದೇ ಅಡ್ಡಿ ಉಂಟು ಮಾಡುವುದಿಲ್ಲ ಎಂದರು. ಆಗ ಪೀಠವು ಅರ್ಜಿದಾರರ ಆತಂಕಗಳನ್ನು ನಿವಾರಿಸುವ ನಿಟ್ಟಿನಲ್ಲಿ ಎಂಜಿನಿಯರ್ ತಾಂತ್ರಿಕ ಉಪನ್ಯಾಸ ನೀಡುವುದು ಒಳಿತು ಎಂದಿತು. ಇದಕ್ಕೆ ಎಜಿ ಒಪ್ಪಿಗೆ ಸೂಚಿಸಿದರು.

ವಿಸ್ತೃತ ಯೋಜನಾ ವರದಿ (ಡಿಪಿಆರ್) ಉಲ್ಲೇಖಿಸಿ ಅರ್ಜಿದಾರರು ಇದು ಕೆರೆಯ ಒಳ ಮತ್ತು ಹೊರ ಹರಿವಿಗೆ ಹಾನಿ ಮಾಡುತ್ತದೆ ಎಂದು ವಾದಿಸಿದ್ದಾರೆ. ಸುರಂಗಮಾರ್ಗ ಯೋಜನೆಗೆ ಒಪ್ಪಿಗೆ ನೀಡುವುದಕ್ಕೂ ಮುನ್ನ ಸ್ವತಂತ್ರವಾದ ಜಲವಿಜ್ಞಾನ, ಜಲಭೂವಿಜ್ಞಾನ ಅಥವಾ ಪರಿಸರ ಅಧ್ಯಯನ ನಡೆಸಲಾಗಿಲ್ಲ ಎಂಬುದು ಅರ್ಜಿದಾರರ ವಾದವಾಗಿದೆ.

ಮುಂದಿನ ವಿಚಾರಣೆಯನ್ನು ನ್ಯಾಯಾಲಯವು ಸೆಪ್ಟೆಂಬರ್ 10ಕ್ಕೆ ನಿಗದಪಡಿಸಿದೆ.

# ಮೆಟ್ರೋ, ಬಿಎಂಟಿಸಿ ಎರಡಕ್ಕೂ ಬಳಕೆಯಾಗುವಂತೆ ಮೆಟ್ರೋ ಮೊಬಿಲಿಟಿ ಕಾರ್ಡ್ ಪರಿಚಯಿಸಲು ತೀರ್ಮಾನ

**ಬೆಂಗಳೂರು, ಸೆ,4:** ನಗರದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಪ್ರಯಾಣಿಕ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಡಲಾಗಿದ್ದು, ಬೆಂಗಳೂರು ಮೆಟ್ರೋ ರೈಲು ನಿಗಮ (ಬಿಎಂಆರ್‌ಸಿಎಲ್) ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಪ್ರಯಾಣಿಕರಿಗೆ ಒಂದೇ ಮೊಬಿಲಿಟಿ ಕಾರ್ಡ್‌ನ್ನು ಜಾರಿಗೊಳಿಸಲು ತೀರ್ಮಾನಿಸಿವೆ.



ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಮೂರನೇ ಕಾರ್ಯಕಾರಿ ಸಭೆಯಲ್ಲಿ ಈ ಕುರಿತು ಚರ್ಚೆ ನಡೆಸಿ, ಮೆಟ್ರೋ ಹಾಗೂ ಬಿಎಂಟಿಸಿ ಬಸ್‌ಗಳಲ್ಲಿ ಒಂದೇ ಸ್ಮಾರ್ಟ್‌ಕಾರ್ಡ್ ಬಳಕೆ ಮಾಡುವ ವ್ಯವಸ್ಥೆ ಜಾರಿಗೆ ತರಲು ನಿರ್ಧರಿಸಲಾಗಿದೆ. ಇದರಿಂದ ಪ್ರತಿದಿನ ಮೆಟ್ರೋ ಮತ್ತು ಬಸ್ ಎರಡೂ ಸಾರಿಗೆ ವ್ಯವಸ್ಥೆಗಳನ್ನು ಬಳಸುವ ಸಾವಿರಾರು ಪ್ರಯಾಣಿಕರಿಗೆ ಅನುಕೂಲವಾಗಲಿದೆ.

**ಎರಡು ಸಾರಿಗೆಗೆ ಒಂದೇ ಕಾರ್ಡ್:** ಪ್ರಸ್ತುತ ಮೆಟ್ರೋ ಮತ್ತು ಬಿಎಂಟಿಸಿ ಪ್ರಯಾಣಕ್ಕೆ ಪ್ರತ್ಯೇಕ ಟಿಕೆಟ್ ಅಥವಾ ಕಾರ್ಡ್ ವ್ಯವಸ್ಥೆ ಇರುವುದರಿಂದ ಪ್ರಯಾಣಿಕರು ಎರಡೂ ವ್ಯವಸ್ಥೆಗಳಲ್ಲಿ ಪ್ರತ್ಯೇಕವಾಗಿ ವ್ಯವಹರಿಸಬೇಕಾಗಿದೆ. ನೂತನ ಮೊಬಿಲಿಟಿ ಕಾರ್ಡ್ ಜಾರಿಯಾದ ಬಳಿಕ ಒಂದೇ ಕಾರ್ಡ್ ಮೂಲಕ ಎರಡೂ ಸಾರ್ವಜನಿಕ ಸಾರಿಗೆ ಸೇವೆಗಳನ್ನು ಬಳಸಿಕೊಳ್ಳಲು ಅವಕಾಶ ದೊರೆಯಲಿದೆ. ಮೆಟ್ರೋ ನಿಲ್ದಾಣದಿಂದ ಬಸ್‌ಗೆ ಅಥವಾ ಬಸ್‌ನಿಂದ ಮೆಟ್ರೋಗೆ ಬದಲಾವಣೆ ಮಾಡುವ ಪ್ರಯಾಣಿಕರಿಗೆ ಈ ವ್ಯವಸ್ಥೆ ವಿಶೇಷವಾಗಿ ಅನುಕೂಲವಾಗಲಿದೆ. ನಗದು ವ್ಯವಹಾರ ಕಡಿಮೆ ಮಾಡುವ ಜೊತೆಗೆ ಟಿಕೆಟ್ ಪಡೆಯಲು ಸರತಿ ಸಾಲಿನಲ್ಲಿ ನಿಲ್ಲುವ ಸಮಯವನ್ನೂ ಉಳಿತಾಯ ಮಾಡಬಹುದಾಗಿದೆ.

**ಬಿಎಂಆರ್‌ಸಿಎಲ್–ಬಿಎಂಟಿಸಿ ಜಂಟಿ ವ್ಯವಸ್ಥೆ:** ನೂತನ ಸ್ಮಾರ್ಟ್ ಮೊಬಿಲಿಟಿ ಕಾರ್ಡ್‌ನ್ನು ಬಿಎಂಆರ್‌ಸಿಎಲ್ ಹಾಗೂ ಬಿಎಂಟಿಸಿ ಜಂಟಿಯಾಗಿ ವಿತರಿಸುವ ಸಾಧ್ಯತೆ ಇದೆ. ಕಾರ್ಡ್ ವಿತರಣೆ, ರೀಚಾರ್ಜ್, ಪ್ರಯಾಣ ದರ ಕಡಿತ ಹಾಗೂ ಎರಡೂ ಸಂಸ್ಥೆಗಳ ನಡುವಿನ ಹಣಕಾಸು ಹೊಂದಾಣಿಕೆ ಸೇರಿದಂತೆ ತಾಂತ್ರಿಕ ವಿಚಾರಗಳನ್ನು ಅಂತಿಮಗೊಳಿಸುವ ಪ್ರಕ್ರಿಯೆ ನಡೆಯಲಿದೆ. ಪ್ರಯಾಣಿಕರಿಗೆ ಒಂದೇ ಕಾರ್ಡ್‌ನಲ್ಲಿ ವಿವಿಧ ಸಾರ್ವಜನಿಕ ಸಾರಿಗೆ ಸೇವೆಗಳನ್ನು ಬಳಸುವ ಅವಕಾಶ ಕಲ್ಪಿಸುವ ಮೂಲಕ ನಗರದಲ್ಲಿ ಸಾರ್ವಜನಿಕ ಸಾರಿಗೆಯ ಬಳಕೆಯನ್ನು ಹೆಚ್ಚಿಸುವ ಉದ್ದೇಶವೂ ಇದರ ಹಿಂದಿದೆ.

ಮೊಬಿಲಿಟಿ ಕಾರ್ಡ್‌ನ ಸ್ವರೂಪ, ವಿತರಣೆ ವಿಧಾನ, ರೀಚಾರ್ಜ್ ವ್ಯವಸ್ಥೆ ಹಾಗೂ ಯಾವೆಲ್ಲ ಸೇವೆಗಳಿಗೆ ಬಳಸಬಹುದು ಎಂಬ ವಿವರಗಳನ್ನು ಶೀಘ್ರದಲ್ಲೇ ಪ್ರಕಟಿಸುವ ನಿರೀಕ್ಷೆಯಿದೆ.

ನಗರದ ಸಂಚಾರ ದಟ್ಟಣೆ ಕಡಿಮೆ ಮಾಡಿ, ಖಾಸಗಿ ವಾಹನಗಳ ಅವಲಂಬನೆಯನ್ನು ತಗ್ಗಿಸುವ ನಿಟ್ಟಿನಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಗಳನ್ನು ಪರಸ್ಪರ ಜೋಡಿಸುವ ಕ್ರಮಕ್ಕೆ ಜಿಬಿಎ ಮುಂದಾಗಿದೆ. ಮೆಟ್ರೋ–ಬಿಎಂಟಿಸಿ ಏಕೀಕೃತ ಮೊಬಿಲಿಟಿ ಕಾರ್ಡ್ ಈ ಪ್ರಯತ್ನದ ಪ್ರಮುಖ ಹೆಜ್ಜೆಯಾಗಿದೆ.

# ವೈದ್ಯೆ ಮೇಲಿನ ಅತ್ಯಾಚಾರ, ಕೊಲೆ ಪ್ರಕರಣ ಮತ್ತೊಬ್ಬ ಆರೋಪಿ ಬೆಂಗಳೂರಿನಲ್ಲಿ ಸೆರೆ

**ಬೆಂಗಳೂರು/ಕೋಲ್ಕತ್ತ, ಸೆ.4:** ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಸಾಕ್ಷ್ಯ ನಾಶಪಡಿಸಿದ ಆರೋಪದ ಮೇಲೆ ತೃಣಮೂಲ ಕಾಂಗ್ರೆಸ್ ನಾಯಕ ಹಾಗೂ ಪಶ್ಚಿಮ ಬಂಗಾಳದ ಪಾಣಿಹಟಿ ಪುರಸಭೆಯ ಮಾಜಿ ಅಧ್ಯಕ್ಷ ಸೋಮನಾಥ್ ಡೇ ಅವರನ್ನು ಪಶ್ಚಿಮ ಬಂಗಾಳದ ಪೊಲೀಸರು ಬೆಂಗಳೂರಿನಲ್ಲಿ ಬಂಧಿಸಿದ್ದಾರೆ.



2024ರಲ್ಲಿ ನಡೆದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ವೈದ್ಯೆಯ ಭೀಕರ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ನಂತರ, ಮೃತದೇಹದ ಎರಡನೇ ಮರಣೋತ್ತರ ಪರೀಕ್ಷೆಗೆ ಅವಕಾಶ ಸಿಗಬಾರದು ಎಂಬ ಉದ್ದೇಶದಿಂದ ತರಾತುರಿಯಲ್ಲಿ ಸಾಕ್ಷ್ಯ ನಾಶಪಡಿಸಲು ಹಾಗೂ ನಿಯಮಗಳನ್ನು ಮೀರಿ ತರಾತುರಿಯಲ್ಲಿ ಅಂತಿಮ ಸಂಸ್ಕಾರ ನೆರವೇರಿಸಿದ ಸಂಚಿನಲ್ಲಿ ಸೋಮನಾಥ್ ಡೇ ಭಾಗಿಯಾಗಿದ್ದ ಎಂಬ ಆರೋಪವಿದೆ.

ಮೃತರ ಕುಟುಂಬದವರ ದೂರಿನ ಮೇರೆಗೆ ಇವರ ವಿರುದ್ಧ ಹೊಸ ಎಫ್‌ಐಆರ್ ದಾಖಲಾಗಿತ್ತು. ಆದರೆ, ಪ್ರಕರಣ ದಾಖಲಾಗುತ್ತಿದ್ದಂತೆ ತಲೆಮರೆಸಿಕೊಂಡಿದ್ದ ಇವರು ಮೊದಲು ಹೈದರಾಬಾದ್‌ಗೆ ಓಡಿಹೋಗಿದ್ದ. ಪೊಲೀಸರು ಬೆನ್ನಟ್ಟುತ್ತಿದ್ದಂತೆ ಅಲ್ಲಿಂದ ಬೆಂಗಳೂರಿಗೆ ಬಂದು ತಲೆಮರೆಸಿಕೊಂಡಿದ್ದ. ಖಚಿತ ಮಾಹಿತಿ ಮೇರೆಗೆ ಪಶ್ಚಿಮ ಬಂಗಾಳದ ಖಾರ್ದಾ ಪೊಲೀಸ್ ತಂಡ ಬೆಂಗಳೂರಿಗೆ ಆಗಮಿಸಿ ಆರೋಪಿಯನ್ನು ಬುಧವಾರ ತಡರಾತ್ರಿ ವಶಕ್ಕೆ ಪಡೆದಿದೆ.

ಮುಂದುವರಿದು, ಈ ಅಂತಿಮ ಸಂಸ್ಕಾರದ ವಿವಾದಕ್ಕೆ ಸಂಬಂಧಿಸಿದಂತೆ ಇದು ಮೂರನೇ ಬಂಧನವಾಗಿದೆ. ಇದಕ್ಕೂ ಮುನ್ನ ಟಿಎಂಸಿ ಮಾಜಿ ಶಾಸಕ ನಿರ್ಮಲ್ ಘೋಷ್ ಮತ್ತು ಸ್ಥಳೀಯ ಕೌನ್ಸಿಲರ್ ಸಂಜೀವ್ ಮುಖರ್ಜಿ ಎಂಬುವವರನ್ನು ಪೊಲೀಸರು ಈಗಾಗಲೇ ಬಂಧಿಸಿದ್ದರು.


# 2026–27ನೇ ಸಾಲಿನ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಕಟ

**ಬೆಂಗಳೂರು, ಸೆ.4:** ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು 2026–27ನೇ ಸಾಲಿನ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಪಟ್ಟಿಯನ್ನು ಅಧಿಕೃತವಾಗಿ ಬಿಡುಗಡೆ ಮಾಡಿದೆ.

ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಪ್ರಾಥಮಿಕ ಶಾಲಾ ವಿಭಾಗದಿಂದ 20 ಜನ ಮತ್ತು ಪ್ರೌಢಶಾಲಾ ವಿಭಾಗದಿಂದ 11 (ಓರ್ವ ವಿಶೇಷ ಶಿಕ್ಷಕರೂ ಸೇರಿ) 31 ಶಿಕ್ಷಕರು ಆಯ್ಕೆಯಾಗಿದ್ದಾರೆ. ಮಹಿಳಾ ಶಿಕ್ಷಕರಿಗೆ ವಿಶೇಷ ಗೌರವವಾಗಿ, ಅಕ್ಷರ ಮಾತೆ "ಸಾವಿತ್ರಿಬಾ ಬಾಯಿ ಪುಲೆ" ಅವರ ಹೆಸರಿನಲ್ಲಿ ಸೆಪ್ಟೆಂಬರ್ 5ರಂದು ನಡೆಯುವ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆಯಂದು ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು. ಸರ್ಕಾರದ ಆದೇಶದಂತೆ ಪ್ರಶಸ್ತಿ ಪುರಸ್ಕೃತರಿಗೆ ತಲಾ 25,000 ರೂ. ಗಳ ನಗದು ಪುರಸ್ಕಾರವನ್ನು ನೀಡಲಾಗುತ್ತದೆ.

**ಪ್ರಶಸ್ತಿ ಪುರಸ್ಕೃತರು (ಪ್ರಾಥಮಿಕ ಶಾಲೆ)**

ಸಿ. ಉಮಾ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೆಂಪತಿಮ್ಮನಹಳ್ಳಿ, ದೇವನಹಳ್ಳಿ ತಾಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬಸಪ್ಪ ವರಪ್ಪ ಪಾಟೀಲ, ಕೆ.ಎಚ್.ಪಿ.ಎಸ್. ಹಲ್ಲೂರು ಕ್ರಾಸ್, ಮೂಡಲಗಿ ಶೈಕ್ಷಣಿಕ ವಲಯ, ಚಿಕ್ಕೋಡಿ ಜಿಲ್ಲೆ, ಅಶೋಕ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೆಸಕುತೂರು, ಕುಂದಾಪುರ ತಾಲೂಕು, ಉಡುಪಿ ಜಿಲ್ಲೆ, ಸುರೇಶ.ಕೆ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಗುಂಡೇರಡೊಡ್ಡಿ, ದೇವದುರ್ಗ ತಾಲೂಕು, ರಾಯಚೂರು ಜಿಲ್ಲೆ, ಹಣಮಂತ ಕಲ್ಲಪ್ಪ ಕಾತರಕಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೆಂಗಲಗುತ್ತಿ, ವಿಜಯಪುರ ಗ್ರಾಮಾಂತರ ತಾಲೂಕು, ವಿಜಯಪುರ ಜಿಲ್ಲೆ, ಉಷಾ ವಿ.ನಾಯಕ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊನ್ನಾವರ, ನಂ.01, ಹೊನ್ನಾವರ ತಾಲೂಕು, ಉತ್ತರಕನ್ನಡ ಜಿಲ್ಲೆ, ಮಸ್ತಾನ್ ವಲಿ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಗುಟ್ಟಹಳ್ಳಿ, ಚಿಂತಾಮಣಿ ತಾಲೂಕು, ಚಿಕ್ಕಬಳ್ಳಾಪುರ ಜಿಲ್ಲೆ, ಪ್ರಭಾವತಿ ಬಾಳಪ್ಪಾ ಹಾಲೇಣ್ಣವರ (ಮುಖ್ಯ ಶಿಕ್ಷಕರು), ಮುರಾರಿ ಹಿರಿಯ ಪ್ರಾಥಮಿಕ ಶಾಲೆ, ಜಾಫರವಾಡಿ, ಕಡೋಲಿ ಬೆಳಗಾವಿ ಗ್ರಾಮಾಂತರ ತಾಲೂಕು, ಬೆಳಗಾವಿ ಜಿಲ್ಲೆ, ಸರೋಜಮ್ಮ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಸತ್ತೇಗಾಲ ಅಗ್ರಹಾರ, ಕೊಳ್ಳೇಗಾಲ ತಾಲೂಕು, ಚಾಮರಾಜನಗರ ಜಿಲ್ಲೆ, ನಿಂಗಪ್ಪ (ಮುಖ್ಯ ಶಿಕ್ಷಕರು), ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಗುಂಜಬಬಲಾದ, ಆಳಂದ ತಾಲೂಕು, ಕಲಬುರಗಿ ಜಿಲ್ಲೆ, ರತ್ನಮ್ಮ. ಎನ್.ಎಂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೆಂಬತಹಳ್ಳಿ, ಬೆಂಗಳೂರು ದಕ್ಷಿಣ ವಲಯ–3, ಬೆಂಗಳೂರು ಕೇಂದ್ರ ಶೈಕ್ಷಣಿಕ ಜಿಲ್ಲೆ, ನೇಮಣ್ಣ ಬಮ್ಮಣ್ಣ ಜಮಖಂಡಿ, ಶ್ರೀ ಜಿನಸೇನ ಚಾರ್ಮ ಹಿರಿಯ ಪ್ರಾಥಮಿಕ ಶಾಲೆ, ತೇರದಾಳ, ಜಮಖಂಡಿ ತಾಲೂಕು, ಬಾಗಲಕೋಟೆ ಜಿಲ್ಲೆ, ರಾಮಚಂದ್ರ ಈ ನಾಯ್ಕ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಗಣಪತಿಗಲ್ಲಿ, ಯಲ್ಲಾಪುರ ತಾಲೂಕು, ಶಿರಸಿ ಶೈಕ್ಷಣಿಕ ಜಿಲ್ಲೆ, ಮಾಲಿನಿ.ಎಂ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಮುದಿಗೌಡನಹನಹಟ್ಟಿ, ಕೊರಟಗೆರೆ ತಾಲೂಕು, ಮಧುಗಿರಿ ಶೈಕ್ಷಣಿಕ ಜಿಲ್ಲೆ, ಕುಮಾರನಾಯ್ಕ.ಬಿ.ಡಿ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಚಿಕ್ಕಮಾಗಡಿ ತಾಂಡ, ಶಿಕಾರಿಪುರ ತಾಲೂಕು, ಶಿವಮೊಗ್ಗ ಜಿಲ್ಲೆ, ಕೃಷ್ಣಮೂರ್ತಿ ಕೆ.ಎಸ್, ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ, ಗೃಹಲಕ್ಷ್ಮಿ ಬಡಾವಣೆ, ಬೆಂಗಳೂರು ಉತ್ತರ ವಲಯ–1, ಬೆಂಗಳೂರು ಉತ್ತರ ಜಿಲ್ಲೆ, ಮಲ್ಲಿಕಾರ್ಜುನ ಬಡಿಗೇರ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಸದಾಶಿವಪುರ, ಹೊನ್ನಾಳಿ ತಾಲೂಕು, ದಾವಣಗೆರೆ ಜಿಲ್ಲೆ, ಪ್ರೇಮಕುಮಾರ್ ವಿ.ಎಸ್, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೆಗೆರೆ, ತುರುವೇಕೆರೆ ತಾಲೂಕು, ತುಮಕೂರು ಜಿಲ್ಲೆ, ದುರ್ಗವ್ವ. ಎಚ್, ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆ, ಕೊಂಚಿಗೇರಿ, ಸಿರುಗುಪ್ಪ ತಾಲೂಕು, ಬಳ್ಳಾರಿ ಜಿಲ್ಲೆ, ಮೈಲಾರಪ್ಪ ಬೂದಿಹಾಳ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹನವಾಳ, ಗಂಗಾವತಿ ತಾಲೂಕು, ಕೊಪ್ಪಳ ಜಿಲ್ಲೆ




**ಪ್ರಶಸ್ತಿ ಪುರಸ್ಕೃತರು (ಪ್ರೌಢಶಾಲೆ)**

ಬಿರಾದಾರ ಸಿದ್ಧಪ್ಪ ವೀರಭದ್ರಪ್ಪ, ಸರ್ಕಾರಿ ಪ್ರೌಢಶಾಲೆ, ಚಿಬ್ಬಲಗೇರಿ, ಹಳಿಯಾಳ ತಾಲೂಕು, ಶಿರಸಿ ಶೈಕ್ಷಣಿಕ ಜಿಲ್ಲೆ, ಶೈನಾಕುಮಾರಿ. ಎಂ., ಕರ್ನಾಟಕ ಪಬ್ಲಿಕ್ ಶಾಲೆ, ಜೀವನ್ ಭೀಮಾನಗರ, ಬೆಂಗಳೂರು ದಕ್ಷಿಣ ವಲಯ–4, ಬೆಂಗಳೂರು ಕೇಂದ್ರ ಶೈಕ್ಷಣಿಕ ಜಿಲ್ಲೆ, ಕುಬೇರನಾಯ್ಕ.ಬಿ, ಸರ್ಕಾರಿ ಪ್ರೌಢಶಾಲೆ, ತಮ್ಮಡಿಹಳ್ಳಿ, ಶಿವಮೊಗ್ಗ ತಾಲೂಕು ಮತ್ತು ಜಿಲ್ಲೆ

ನೀಲಕಂತ ಗಾವಂಕರ್, ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ), ದೇವನಹಳ್ಳಿ, ದೇವನಹಳ್ಳಿ ತಾಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ವಿ.ವೆಂಕಟೇಶ (ಮುಖ್ಯ ಶಿಕ್ಷಕರು), ಸರ್ಕಾರಿ ಪ್ರೌಢಶಾಲೆ, ಗೊಳೂರು, ಬಾಗೇಪಲ್ಲಿ ತಾಲೂಕು, ಚಿಕ್ಕಬಳ್ಳಾಪುರ ಜಿಲ್ಲೆ, ಮಮತಾ ಆರ್. ನಾಯ್ಕ (ಮುಖ್ಯ ಶಿಕ್ಷಕರು), ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಅಘನಾಶಿನಿ ಉನ್ನತೀಕರಿಸಿದ ಆರ್.ಎಂ.ಎಸ್.ಎ ಶಾಲೆ, ಕುಮಟಾ ತಾಲೂಕು, ಉತ್ತರ ಕನ್ನಡ ಜಿಲ್ಲೆ, ರೋಷನ್ ಅಲೆಕ್ಸಾಂಡರ್ ಪಿಂಟೋ, ಕಾರ್ಮಲ್ ಹೈಸ್ಕೂಲ್, ಮೋದನಕಾಪು, ಬಂಟ್ವಾಳ ತಾಲೂಕು, ದಕ್ಷಿಣ ಕನ್ನಡ ಜಿಲ್ಲೆ, ಜಯಶೀಲ, ಸರ್ಕಾರಿ ಆದರ್ಶ ವಿದ್ಯಾಲಯ, ಮೈಸೂರು ದಕ್ಷಿಣ ತಾಲೂಕು ಮತ್ತು ಮೈಸೂರು ಜಿಲ್ಲೆ, ಮಥಾಯಿ.ಟಿ, ಸರ್ಕಾರಿ ಪ್ರೌಢಶಾಲೆ, ಮುತ್ತಿನಕೊಪ್ಪ, ನರಸಿಂಹರಾಜಪುರ ತಾಲೂಕು, ಚಿಕ್ಕಮಗಳೂರು ಜಿಲ್ಲೆ, ಜಯಪ್ಪ ಕೆ.ಟಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ (ಉನ್ನತೀಕರಣ ಶಾಲೆ) ನಿಟ್ಟುವಳ್ಳಿ, ಆರ್.ಎಂ.ಎಸ್.ಎ., ದಾವಣಗೆರೆ ತಾಲೂಕು ಮತ್ತು ಜಿಲ್ಲೆ, ನಂದ ಮಾದೇವ ರುಂಡೆ (ವಿಶೇಷ ಶಿಕ್ಷಕರು), ಸರ್ಕಾರಿ ಪ್ರೌಢಶಾಲೆ, ಟಕ್ಕಲಕಿ, ವಿಜಯಪುರ ಗ್ರಾಮಾಂತರ ತಾಲೂಕು ಮತ್ತು ವಿಜಯಪುರ ಜಿಲ್ಲೆ.

# ಸದ್ಗುರು ನಿತ್ಯಾನಂದ ವಿದ್ಯಾಪೀಠದಲ್ಲಿ ಕೃಷ್ಣನ ವೇಷದಲ್ಲಿ ಕಂಗೊಳಿಸಿದ ಪುಟಾಣಿಗಳು




**ಕೊಂಡೆವೂರು,ಸೆ.4:** ಶ್ರೀಕೃಷ್ಣಜನ್ಮಾಷ್ಟಮಿಯ ಪ್ರಯುಕ್ತ ಸದ್ಗುರು ಶ್ರೀನಿತ್ಯಾನಂದ ವಿದ್ಯಾಪೀಠದಲ್ಲಿ ನಡೆದಶ್ರೀಕೃಷ್ಣವೇಷ ಸ್ಪರ್ಧೆಯಲ್ಲಿ ಪುಟಾಣಿ ಮಕ್ಕಳು ಕೃಷ್ಣನ ವಿವಿಧ ವೇಷಭೂಷಣಗಳಲ್ಲಿ ಕಂಗೊಳಿಸಿ, ತಮ್ಮ ಮುಗ್ಧ ಅಭಿನಯ ಹಾಗೂ ಪ್ರತಿಭೆಯಿಂದ ಎಲ್ಲರ ಗಮನ ಸೆಳೆದರು

ಶಾಲೆಯ ಎಲ್‌ಕೆಜಿ ತರಗತಿಯ ವಿದ್ಯಾರ್ಥಿಗಳಿಗೆ

ಮುದ್ದು ಕೃಷ್ಣಹಾಗೂ 1 ಮತ್ತು 2ನೇ ತರಗತಿಯ ವಿದ್ಯಾರ್ಥಿಗಳಿಗೆ ಬಾಲಕೃಷ್ಣ ವಿಭಾಗಗಳಲ್ಲಿ ಸ್ಪರ್ಧೆನಡೆಯಿತು.

ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಉತ್ಸಾಹದಿಂದ ವೇದಿಕೆಯಲ್ಲಿ ತಮ್ಮ ಪ್ರದರ್ಶನ ನೀಡಿದರು. ಕಾರ್ಯಕ್ರಮವು ಮಕ್ಕಳಲ್ಲಿ ಭಾರತೀಯ ಸಂಸ್ಕೃತಿ, ಪಾರಂಪರಿಕ ಆಚರಣೆಗಳು ಮತ್ತು ಭಕ್ತಿ ಭಾವವನ್ನು ಬೆಳೆಸುವ ಉದ್ದೇಶದಿಂದ ಆಯೋಜಿಸಲಾಗಿತ್ತು.

ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಕ ಬಹುಮಾನಗಳನ್ನು ನೀಡಿ, ಅವರ ಪ್ರತಿಭೆ ಹಾಗೂ ಉತ್ಸಾಹವನ್ನು ಅಭಿನಂದಿಸಲಾಯಿತು.

# ಗಡಿ ಸಮೀಪ 17 ದಿನ ವಾಯು ಸಮರಾಭ್ಯಾಸ: ಪಾಕ್ ತುರ್ತುಸಭೆ

**ನವದೆಹಲಿ,ಸೆ.4:** ಭಾರತ–ಪಾಕಿಸ್ತಾನ ಗಡಿಯಲ್ಲಿ ಮತ್ತೆ ಸೇನಾ ಚಟುವಟಿಕೆಗಳ ಬಗ್ಗೆ ಕುತೂಹಲ ಮತ್ತು ಆತಂಕ ಹೆಚ್ಚಾಗಿದೆ. ಭಾರತೀಯ ವಾಯುಪಡೆ ಸೆಪ್ಟೆಂಬರ್ 21ರಿಂದ ಅಕ್ಟೋಬರ್ 7ರವರೆಗೆ 17 ದಿನಗಳ ಕಾಲ ಪಶ್ಚಿಮ ರಾಜಸ್ಥಾನದ ವಿಶಾಲ ವಾಯುಪ್ರದೇಶವನ್ನು ಸೇನಾ ಚಟುವಟಿಕೆಗಾಗಿ ಕಾಯ್ದಿರಿಸಿ NOTAM (Notice to Air Missions) ಹೊರಡಿಸಿದೆ. ಈ ಬೆಳವಣಿಗೆ ಪಾಕಿಸ್ತಾನದ ರಕ್ಷಣಾ ವಲಯದಲ್ಲಿ ಎಚ್ಚರಿಕೆ ಮೂಡಿಸಿದ್ದು, ಅಲ್ಲಿನ ರಕ್ಷಣಾ ಸಚಿವಾಲಯ ತುರ್ತು ಸಭೆ ನಡೆಸಿದೆ.

**ರಾಜಸ್ಥಾನದ ಗಡಿ ಪ್ರದೇಶದಲ್ಲಿ ಭಾರಿ ಅಭ್ಯಾಸ**

NOTAM ಅಡಿಯಲ್ಲಿ ಜೈಸಲ್ಮೇರ್ ಬಾರ್ಮರ್ ಫಲೋಡಿ ಜೋಧಪುರ ವಲಯದ ವಾಯುಪ್ರದೇಶವನ್ನು ಸೇನಾ ಚಟುವಟಿಕೆಗಳಿಗೆ ಕಾಯ್ದಿರಿಸಲಾಗಿದೆ. ಬಿಕಾನೇರ್ ಪ್ರದೇಶದ ಸುತ್ತಮುತ್ತಲಿನ ವಾಯುಪ್ರದೇಶವೂ ನಿರ್ಬಂಧಿತ ವಲಯದ ವ್ಯಾಪ್ತಿಗೆ ಬಂದಿದೆ. ಕಾಯ್ದಿರಿಸಲಾದ ವಾಯುಪ್ರದೇಶವು ಸುಮಾರು 40,000 ಅಡಿ ಎತ್ತರದವರೆಗೆ ವಿಸ್ತರಿಸಲಿದೆ ಎಂದು ವರದಿಗಳು ತಿಳಿಸಿವೆ. ಕೆಲವು ಭಾಗಗಳು ಅಂತಾರಾಷ್ಟ್ರೀಯ ಗಡಿಯಿಂದ ಸುಮಾರು 20 ಕಿ.ಮೀ. ಸಮೀಪದಲ್ಲಿವೆ.

ಭಾರತ ಹೊರಡಿಸಿರುವ NOTAMಅನ್ನು ಪರಿಶೀಲಿಸಲು ಪಾಕಿಸ್ತಾನದ ರಕ್ಷಣಾ ಸಚಿವಾಲಯ ತುರ್ತುಸಭೆ ನಡೆಸಿದೆ. ಗಡಿ ಪ್ರದೇಶದ ಸಮೀಪ ಇಷ್ಟು ದೀರ್ಘ ಅವಧಿಗೆ ವಾಯುಪ್ರದೇಶ ಕಾಯ್ದಿರಿಸಿರುವುದನ್ನು ಪಾಕಿಸ್ತಾನ ಗಂಭೀರವಾಗಿ ಪರಿಗಣಿಸುತ್ತಿದೆ. ಭಾರತದ ಘೋಷಣೆಯ ಹಿನ್ನೆಲೆಯಲ್ಲಿ ಪಾಕಿಸ್ತಾನವು ಗಡಿಯಲ್ಲಿ ಭದ್ರತೆ ಹಾಗೂ ಕಣ್ಗಾವಲು ಹೆಚ್ಚಿಸಿದ್ದು, ಭದ್ರತಾ ಪಡೆಗಳನ್ನು ಹೆಚ್ಚಿನ ಎಚ್ಚರಿಕೆಯಲ್ಲಿರಿಸಿದೆ. ಭಾರತೀಯ ವಾಯುಪಡೆಯ ಚಟುವಟಿಕೆಗಳನ್ನು ನಿಕಟವಾಗಿ ಗಮನಿಸಲಾಗುತ್ತಿದೆ ಎಂದು ಪಾಕಿಸ್ತಾನದ ಭದ್ರತಾ ಅಧಿಕಾರಿಗಳು ತಿಳಿಸಿದ್ದಾರೆ.

**ಏಕಕಾಲದಲ್ಲಿ ಎರಡು ಪ್ರಮುಖ ಅಭ್ಯಾಸ**

F NOTAM ಅವಧಿಯು ಭಾರತೀಯ ವಾಯುಪಡೆಯ ಹಲವು ಪ್ರಮುಖ ಅಭ್ಯಾಸಗಳೊಂದಿಗೆ ಹೊಂದಿಕೆಯಾಗುತ್ತಿದೆ. ಸೆಪ್ಟೆಂಬರ್ 9ರಿಂದ 21ರವರೆಗೆ ಭಾರತ–ಜಪಾನ್ ವೀರ್ ಗಾರ್ಡಿಯನ್ 26 ಜಂಟಿ ವಾಯುಪಡೆ ಅಭ್ಯಾಸ ನಡೆಯಲಿದೆ. ಈ ಅಭ್ಯಾಸದಲ್ಲಿ ಜಪಾನ್‌ನ ಮೂರು F-2A ಯುದ್ಧವಿಮಾನಗಳು ಹಾಗೂ ಸುಮಾರು 110 ಸಿಬ್ಬಂದಿ ಭಾಗವಹಿಸಲಿದ್ದಾರೆ. ಭಾರತೀಯ ವಾಯುನೆಲೆಯಲ್ಲಿ ಜಪಾನ್‌ನ ಯುದ್ಧವಿಮಾನಗಳು ಕಾರ್ಯನಿರ್ವಹಿಸುತ್ತಿರುವುದು ಇದೇ ಮೊದಲ ಬಾರಿಗೆ ಎಂದು ವರದಿಯಾಗಿದೆ.

ಇದಾದ ಬಳಿಕ ಸೆಪ್ಟೆಂಬರ್ 26ರಿಂದ ಅಕ್ಟೋಬರ್ 12ರವರೆಗೆ ಜೋಧಪುರದಲ್ಲಿ ತರಂಗ್ ಶಕ್ತಿ 2026 ಬಹುರಾಷ್ಟ್ರೀಯ ವಾಯುಸೇನಾ ಅಭ್ಯಾಸ ನಡೆಯಲಿದೆ. ಹಲವು ದೇಶಗಳ ವಾಯುಪಡೆಗಳು ಇದರಲ್ಲಿ ಭಾಗವಹಿಸಲಿದ್ದು, ಯುದ್ಧವಿಮಾನಗಳ ಕಾರ್ಯಾಚರಣೆ, ಸಮನ್ವಯ ಮತ್ತು ಯುದ್ಧ ಸಿದ್ಧತೆಯನ್ನು ಪರೀಕ್ಷಿಸುವ ಉದ್ದೇಶ ಹೊಂದಿದೆ.

**NOTAM ಎಂದರೇನು?**

NOTAM ಎಂದರೆ ವಿಮಾನಯಾನಕ್ಕೆ ಸಂಬಂಧಿಸಿದ ಅಧಿಕೃತ ಸೂಚನೆ. ತಾತ್ಕಾಲಿಕವಾಗಿ ವಾಯುಪ್ರದೇಶದಲ್ಲಿ ನಿರ್ಬಂಧ, ಸೇನಾ ಅಭ್ಯಾಸ, ಶಸ್ತ್ರಾಸ್ತ್ರ ಪರೀಕ್ಷೆ ಅಥವಾ ವಿಮಾನಗಳ ಸುರಕ್ಷತೆಗೆ ಸಂಬಂಧಿಸಿದ ಚಟುವಟಿಕೆಗಳ ಕುರಿತು ವಿಮಾನಯಾನ ಸಂಸ್ಥೆಗಳು ಮತ್ತು ಪೈಲಟ್‌ಗಳಿಗೆ ಮುಂಚಿತವಾಗಿ ಮಾಹಿತಿ ನೀಡಲು ಇದನ್ನು ಬಳಸಲಾಗುತ್ತದೆ. ಆದ್ದರಿಂದ ಓಔಖಿಂಒ ಹೊರಡಿಸಿರುವುದೇ ಭಾರತ ದಾಳಿ ನಡೆಸಲಿದೆ ಎಂಬುದರ ನೇರ ಸೂಚನೆಯಲ್ಲ; ಸೇನಾ ಅಭ್ಯಾಸಗಳ ಸಂದರ್ಭದಲ್ಲಿ ಇದು ಸಾಮಾನ್ಯ ವಾಯುಪ್ರದೇಶ ನಿರ್ವಹಣಾ ಕ್ರಮವಾಗಿದೆ.

# ಕೆಂಬಾಳೆ ಊರಿನಲ್ಲಿ ಪ್ರಜಾಸೇವೆ ಸಭೆ

## ಜಿಲ್ಲೆಯ ಚೊಚ್ಚಲ ಸಭೆಯ ಯಶಸ್ಸಿಗೆ ಸಿದ್ಧತೆ: ಸಿಇಓ ರಾಹುಲ್ ಸಂಕನೂರ್



ಕಮಲಾಪುರದಲ್ಲಿ ಇದೇ ದಿ.5ರಂದು ನಡೆಯಲಿರುವ ಪ್ರಜಾಸೇವೆ ಪ್ರಥಮ ಸಭೆಯ ಸಿದ್ಧತಾ ಸಭೆಯಲ್ಲಿ ಜಿಲ್ಲಾ ಪಂಚಯತ್ ಸಿಇಓ ರಾಹುಲ್ ಸಂಕನೂರ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಎಸ್‌ಪಿ ಅಡ್ಡೂರು ಶ್ರೀನಿವಾಸಲು ಅವರಿದ್ದರು.

**ಕಲಬುರಗಿ, ಸೆ.4:** ರಾಜ್ಯದ ಜನತೆಯ ಕುಂದುಕೊರತೆಗಳನ್ನು ಮತ್ತು ಅಹವಾಲುಗಳನ್ನು ಆಲಿಸಿ ಸ್ಥಳದಲ್ಲೇ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪ್ರಜಾಸೇವೆ ಆಂದೋಲನ ಸಭೆ ನಡೆಸಲಾಗುತ್ತಿದೆ. ಜಿಲ್ಲೆಯ ಚೊಚ್ಚಲ ಸಭೆ ಇದೇ ಸೆ.5 ರಂದು ಕೆಂಬಾಳೆಯ ಊರು ಎಂದೇ ಹೆಸರಾಗಿರುವ ಕಮಲಾಪೂರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಅವರಣದಲ್ಲಿ ಆಯೋಜಿಸಿದ್ದು, ಸಕಲ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನೂರ್ ತಿಳಿಸಿದರು.

ಜಿಲ್ಲೆಯ ಕಮಲಾಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು, ರಾಜ್ಯದ ಗೃಹ, ಐ.ಟಿ-ಬಿ.ಟಿ, ಇ-ಆಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದ್ದು, ಜಿಲ್ಲಾ ಮತ್ತು ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ತಾಲೂಕಿನ ವಿವಿಧ ಗ್ರಾಮಗಳಿಂದ ಸಾರ್ವಜನಿಕರು ಅಗಮಿಸುವುದರಿಂದ ಅವರ ದೂರು, ಸೇವೆ ಪಡೆಯಲು ತಾಲುಕಿನ 19 ಗ್ರಾಮ ಪಂಚಾಯತಿವಾರು ಕೌಂಟರ್ ಸ್ಥಾಪಿಸಬೇಕು. ಇದಲ್ಲದೆ ಪ್ರಮುಖವಾಗಿ ಕೃಷಿ, ತೋಟಗಾರಿಕೆ, ಕಂದಾಯ, ಗ್ರಾಮೀಣಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳು ಸೇರಿದಂತೆ ಇತರೆ ಪ್ರಮುಖ ಇಲಾಖೆಗಳು ಸಹ ಸ್ಟಾಲ್ ಹಾಕಿ ಇಲಾಖೆ ಯೋಜನೆಗಳ ಕುರಿತು ಅರಿವು ಮೂಡಿಸುವ ಕೆಲಸ ಮಾಡಬೇಕು. ಇನ್ನು ಪ್ರತಿ ಸ್ಟಾಲ್‌ನಲ್ಲಿ ಕಂಪ್ಯೂಟರ್ ಅಪರೇಟರ್, ಸಿಬ್ಬಂದಿ ನಿಯೋಜಿಸಬೇಕು. ಇಂಟರನೆಟ್, ವಿದ್ಯುತ್ ವ್ಯವಸ್ಥೆ ಇರುವಂತೆಯೂ ನೋಡಿಕೊಳ್ಳಬೇಕೆಂದರು.

ತಾಲೂಕಿನ ವಿವಿದಡೆಯಿಂದ ಆಗಮಿಸುವ ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ ಮಾಡಬೇಕು. ಅಸನದ ವ್ಯವಸ್ಥೆ, ಶಾಮಿಯಾನ ಹಾಕಬೇಕು. ಗಣ್ಯರ, ಅಧಿಕಾರಿಗಳ, ಸಾರ್ವಜನಿಕರ ವಾಹನಗಳ ಪಾರ್ಕಿಂಗ್ ವ್ಯವಸ್ಥೆ, ಪೊಲೀಸ್ ಭದ್ರತೆ ಕಲ್ಪಿಸಬೇಕು ಎಂದು ರಾಹುಲ್ ಸಂಕನೂರ್ ಅವರು, ಶುಕ್ರವಾರ ಸಂಜೆಯೊಳಗೆ ಕಾರ್ಯಕ್ರಮದ ಬ್ಲೂಪ್ರಿಂಟ್ ಸಿದ್ಧಪಡಿಸಿಕೊಂಡು ಬರುವಂತೆ ಕಾರ್ಯಕ್ರಮದ ಮ್ಯಾನೇಜರ್ ಮತ್ತು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಮಾತನಾಡಿ ಸಭೆಗೆ ಆಗಮಿಸುವ ಸಾರ್ವಜನಿಕರಿಗೆ ಅರ್ಜಿ ಬರೆದುಕೊಡಲು ಸಹಾಯ ಮಾಡಲು ಮತ್ತು ಜನರನ್ನು ನಿಯಂತ್ರಿಸಲು ಅಗತ್ಯ ಸ್ವಯಂ ಸೇವಕರನ್ನು ನಿಯೋಜಿಸಬೇಕು ಎಂದರಲ್ಲದೆ ಐ.ಇ.ಸಿ ಜಾಗೃತಿಗೆ ಸ್ಟಾಲ್ ಹಾಕಲು ಉದ್ದೇಶಿಸಿದಲ್ಲಿ ಅಂತಹ ಇಲಾಖೆಗಳು ಗುರುವಾರ ಸಂಜೆಯೊಳಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಸಭೆಯಲ್ಲಿ ಎಸ್.ಪಿ. ಅಡ್ಡೂರು ಶ್ರೀನಿವಾಸುಲು, ಕಮಲಾಪೂರ ತಹಶೀಲ್ದಾರ ಮೊಹಮ್ಮದ ಮೋಹಸೀನ್ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅನೇಕ ಅಧಿಕಾರಿಗಳಿದ್ದರು.

# ಬೆಟ್ಟದಪುರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ

ಪಿರಿಯಾಪಟ್ಟಣ, ಸೆ.4: ಮೈಸೂರು ಜಿಲ್ಲೆ ಪಿರಿಯಾಪಟ್ಟಣದ ಬೆಟ್ಟದಪುರ ಗ್ರಾಮದಲ್ಲಿ ಶ್ರೀ ಸಿಡಿಲು ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನದ ಬೆಟ್ಟಕ್ಕೆ ತೆರಳುವ ರಸ್ತೆ ನಿರ್ಮಾಣ ಕಾಮಗಾರಿಗೆ ನಗರಾಭಿವೃದ್ಧಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಶುಕ್ರವಾರ ಭೂಮಿಪೂಜೆ ನೆರವೇರಿಸಿದರು.

ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಹಾಗೂ ಪಿರಿಯಾಪಟ್ಟಣ ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಕೆ. ವೆಂಕಟೇಶ್ ಅವರೊಂದಿಗೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆಯನ್ನೂ ನೆರವೇರಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಕೆ. ಶಿವಕುಮಾರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ. ಬಿ.ಜೆ. ವಿಜಯ್ ಕುಮಾರ್, ಮೈಸೂರು ಪೇಯಿಂಟ್ಸ್ ಮತ್ತು ವಾರ್ನಿಷ್ ಸಂಸ್ಥೆ ಅಧ್ಯಕ್ಷ ಎಚ್.ಡಿ.ಗಣೇಶ್, ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ನಿತಿನ್ ವೆಂಕಟೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯುಕೇಶ್ ಕುಮಾರ್, ಕೆಪಿಸಿಸಿ ವಕ್ತಾರರಾದ ಎಂ. ಲಕ್ಷ್ಮಣ್ ಸೇರಿದಂತೆ ಹಲವು ಗಣ್ಯರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು

# ದಸರಾದಲ್ಲಿ ಭಾಗವಹಿಸಲು ಆನೆ ಅಭಿಮನ್ಯುಗೆ ಸರ್ಕಾರ ಅನುಮತಿ

ಮೈಸೂರು, ಸೆ.4: ಈ ಬಾರಿಯ ದಸರಾ ಮಹೋತ್ಸವದಲ್ಲಿ ಅಭಿಮನ್ಯು ಆನೆ ಭಾಗವಹಿಸಲು ಕೊನೆಗೂ ಸರ್ಕಾರದಿಂದ ಗ್ರೀನ್ ಸಿಗ್ನಲ್ ಸಿಕ್ಕಿದೆ. ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರು ಈ ಸಂಬಂಧ ಅಧಿಕೃತ ಪ್ರಕಟಣೆ ಹೊರಡಿಸಿದ್ದಾರೆ. ಒಟ್ಟಿನಲ್ಲಿ ಕೋಟ್ಯಂತರ ಅಭಿಮಾನಿಗಳ ಆಸೆಯಂತೆ 6 ಬಾರಿ ಅಂಬಾರಿ ಹೊತ್ತ ಅಭಿಮನ್ಯು ಈ ಬಾರಿ ನಿಶಾನೆ ಆನೆಯಾಗಿ ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳಲಿದ್ದಾನೆ. ಮೈಸೂರು ದಸರಾ ಕರ್ನಾಟಕದ ನಾಡಹಬ್ಬವಾಗಿದ್ದು, ನಾಡಿನ ಕಲೆ, ಸಂಸ್ಕೃತಿ, ಪರಂಪರೆ ಹಾಗೂ ವೈಭವವನ್ನು ವಿಶ್ವದಾದ್ಯಂತ ಸಾರುವ ಐತಿಹಾಸಿಕ ಉತ್ಸವವಾಗಿದೆ. ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂಸವಾರಿ ಉತ್ಸವದಲ್ಲಿ ದಸರಾ ಗಜಪಡೆಯ ಆನೆಗಳು ವರ್ಷಗಳಿಂದಲೂ ಪ್ರಮುಖ ಪಾತ್ರ ವಹಿಸುತ್ತಾ ಬಂದಿವೆ. ಈ ಮಹತ್ವದ ದಸರಾ ಪರಂಪರೆಯಲ್ಲಿ ಅಭಿಮನ್ಯು ಆನೆಯ ಸೇವೆ ಅತ್ಯಂತ ವಿಶೇಷ ಹಾಗೂ ಸ್ಮರಣೀಯವಾಗಿದೆ.

# ಜಲ ಹೋರಾಟಕ್ಕೆ ಎಲ್ಲರೂ ಬೆಂಬಲಿಸಿ: ಶಾಸಕ ಬಿ.ಆರ್.ಪಾಟೀಲ್



**ಕಲಬುರಗಿ, ಸೆ. 4:** ಬೋರಿ ನದಿಯಿಂದ ಅಫಜಲಪುರ ತಾಲೂಕಿನ 10 ಹಾಗೂ ಆಳಂದ ತಾಲೂಕಿನ 3 ಕೆರೆ, ಅಮರ್ಜಾ ಅಣೆಕಟ್ಟಿಗೆ ನೀರು ತುಂಬುವ ಜೀವಜಲ ಯೋಜನೆ ಪೈಪ್‌ಲೈನ್ ಹಾಳು ಮಾಡಿರುವ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ದುಷ್ಕೃತ್ಯ ಖಂಡಿಸಿ ಹಾಗೂ ಪೈಪ್‌ಲೈನ್ ದುರಸ್ತಿಗೆ ಆಗ್ರಹಿಸಿ ಶಾಸಕ ಬಿ. ಆರ್.ಪಾಟೀಲ್, ಕಲಬುರಗಿ-ಬೀದರ್ ಮತ್ತು ಯಾದಗಿರಿ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಅಧ್ಯ ಆರ್.ಕೆ.ಪಾಟೀಲ್ ನೇತೃತ್ವದಲ್ಲಿ ಅರ್ಜುಣಗಿಯಲ್ಲಿ ನಡೆಯುತ್ತಿರುವ ನೀರಿಗಾಗಿ ಧರಣಿ ಬುಧವಾರ 7 ದಿನ ಪೂರ್ಣಗೊಳಿಸಿದೆ.

8ನೇ ದಿನಕ್ಕೆ ಪದಾರ್ಪಣೆ ಮಾಡಿದೆ.ಜಿಡಗಾ, ಮುಗಳಖೋಡ ಮಠದ ಪೀಠಾಧಿಪತಿ ಡಾ. ಮುರುಘರಾಜೇಂದ್ರ ಸ್ವಾಮೀಜಿ ಹೋರಾಟಕ್ಕೆ ಬೆಂಬಲ ನೀಡಿ ಮಾತನಾಡಿ, ಈ ಕಾಮಗಾರಿ ಪ್ರಾರಂಭವಾದ 18 ತಿಂಗಳಲ್ಲಿ ಮುಗಿಯ ಬೇಕಿತ್ತು. ಆದರೆ 8 ವರ್ಷಗಳಾದರೂ ಪೂರ್ಣಗೊಂಡಿಲ್ಲ. ಬಿ.ಆರ್.ಪಾಟೀಲ್ ಅವರ ದೂರದೃಷ್ಟಿಯ ಫಲದಿಂದ ಆಳಂದ ತಾಲೂಕಿಗೆ ಬರುತ್ತಿರುವ ನೀರಾವರಿ ಕಾಮಗಾರಿ ಧ್ವಂಸಗೊಳಿಸಿರುವುದು ಆತಕಾರಿಯಾಗಿದೆ ಎಂದರು.

ಶಾಸಕರಾದ ಬಿ.ಆರ್.ಪಾಟೀಲ್ ಮತ್ತು ಎಂ.ವೈ.ಪಾಟೀಲ್ ಅವರು ನೀರಾವರಿ ಯೋಜನೆಗಳಿಗಾಗಿ ಭಗೀರಥನಂತೆ ಕೆಲಸ ಮಾಡುತ್ತಿದ್ದಾರೆ. ಆರ್.ಕೆ.ಪಾಟೀಲ್ ಅವರು ಕಳೆದ 8 ದಿನಗಳಿಂದ ಅಡವಿಯಲ್ಲಿ ರೈತರಿಗಾಗಿ ಹಗಲು-ರಾತ್ರಿ ಧರಣಿ ಮಾಡುತ್ತಿದ್ದಾರೆ. ಪ್ರತಿಯೊಬ್ಬರೂ ಪ, ಜಾತಿ, ಧರ್ಮ ಮೀರಿ ಬೆಂಬಲಿಸಬೇಕು ಎಂದು ಕರೆ ನೀಡಿದರು. ಪರಮಾನಂದ ಸ್ವಾಮೀಜಿ, ಡಾ.ಅಪ್ಪಾರಾವ್ ದೇವಿ ಮುತ್ಯಾ, ಶಾಂತವೀರ ಶಿವಾಚಾರ್ಯ, ಶಾಸಕ ಬಿ.ಆರ್.ಪಾಟೀಲ್, ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ್, ಪ್ರಮುಖರಾದ ಸಿದ್ಧರಾಮ ಪ್ಯಾಟಿ, ಗುರುಶಾಂತ ಪಾಟೀಲ, ಅಶೋಕ ಸವಳೇಶ್ವರ, ಸಾತಲಿಂಗ ಪಾಟೀಲ್, ರಮೇಶ ಪೂಜಾರಿ, ಶಿವಾನಂದ ಗಾಡಿಸಾಹುಕಾರ, ತಯಬ್ ಅಲಿ, ಫಿರ್ದೋಸ್ ಅನ್ಸಾರಿ ಮುಂತಾದ ಮುಖಂಡರು ಪಾಲ್ಗೊಂಡಿದ್ದರು.

# ಶರಣ ಸಂಸ್ಥಾನದಲ್ಲಿ ಪೂಜ್ಯ ಅಪ್ಪ ಪ್ರಥಮ ಪುಣ್ಯಸ್ಮರಣೆ

## ಅನ್ನ, ಜ್ಞಾನದಾಸೋಹದ ವಿಶ್ವವಿದ್ಯಾಲಯ ಪೂಜ್ಯ ಅಪ್ಪ: ಡಾ.ಸಾರಂಗಧರ ಶ್ರೀ




ಕಲಬುರಗಿಯ ಶರಣಬಸವೇಶ್ವರ ಮಹಾದಾಸೋಹದ 8ನೇ ಪೀಠಾಧಿಪತಿ ಪೂಜ್ಯ ಶರಣಬಸವಪ್ಪ ಅಪ್ಪಾ ಅವರ ಪ್ರಥಮ ಪುಣ್ಯಸ್ಮರಣೋತ್ಸವವನ್ನು ಶ್ರೀಶೈಲ ಸಾರಂಗ ಮಠದ ಜಗದ್ಗುರು ಡಾ.ಸಾರಂಗಧರ ದೇಶಿಕೇಂದ್ರ ಮಹಾಸ್ವಾಮಿಗಳು ಉದ್ಘಾಟಿಸಿದರು. ಚಿ.ದೊಡ್ಡಪ್ಪ ಅಪ್ಪ, ಡಾ.ದಾಕ್ಷಾಯಣಿ ಅಪ್ಪ, ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಮುಂತಾದ ಪ್ರಮುಖರು ಪಾಲ್ಗೊಂಡಿದ್ದರು.

**ಕಲಬುರಗಿ, ಸೆ.4:** ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿಗಳಾಗಿದ್ದ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರ ಪ್ರಥಮ ಪುಣ್ಯಸ್ಮರಣೋತ್ಸವದ ಅಂಗವಾಗಿ ಭಾವಪೂರ್ಣ ನುಡಿನಮನ ಸಲ್ಲಿಲಾಯಿತು.

ನಗರದ ಶರಣಬಸವೇಶ್ವರ ದೇವಸ್ಥಾನ ಸಂಕೀರ್ಣದಲ್ಲಿರುವ ಡಾ. ಶರಣಬಸವಪ್ಪ ಅಪ್ಪ ಅನುಭವ ಮಂಟಪದಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಶಿಕ್ಷಣ, ಸಾಮಾಜಿಕ ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಜನರು ಸಮಾರಂಭದಲ್ಲಿ ಪಾಲ್ಗೊಂಡು ಪೂಜ್ಯ ಅಪ್ಪಾಜಿಯವರಿಗೆ ಗೌರವ ನಮನ ಸಲ್ಲಿಸಿದರು. ಶಿಕ್ಷಣ ಕ್ಷೇತ್ರ ಹಾಗೂ ಸಾಮಾಜಿಕ ಬದುಕಿಗೆ ಅವರು ನೀಡಿದ ಅಪೂರ್ವ ಕೊಡುಗೆಯನ್ನು ಗಣ್ಯರು ಸ್ಮರಿಸಿದರು.

ದಾವಣಗೆರೆ ಲೋಕಸಭಾ ಸದಸ್ಯೆ ಡಾ. ಪ್ರಭಾ ಮಲ್ಲಿಕಾರ್ಜುನ ಶಾಮನೂರು ಅವರು, ಡಾ. ನೀಲಾಂಬಿಕಾ ಪೊಲೀಸ್ ಪಾಟೀಲ ರಚಿಸಿರುವ 'ಮಹಾಮಾನವ' ಭಾಗ-1 ಕೃತಿ, ಡಾ.ಎಸ್.ಎಸ್. ಪಾಟೀಲ ಅವರು ರಚಿಸಿರುವ ಡಾ. ಅಪ್ಪಾಜಿಯವರ ಜೀವನ ಚರಿತ್ರೆ 'ದಾಸೋಹಮೂರ್ತಿ ವಿದ್ಯಾಭಂಡಾರಿ' ಕೃತಿ ಹಾಗೂ ಇಂಗ್ಲಿಷ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಪ್ರಕಾಶ ನೆಲ್ಲಗಿ ಅವರು ಸಿದ್ಧಪಡಿಸಿರುವ ಡಾ. ಅಪ್ಪಾಜಿಯವರು ಪ್ರತಿಪಾದಿಸಿದ 16 ದಾಸೋಹ ಸೂತ್ರಗಳನ್ನು ವಿವರಿಸುವ ವಿಡಿಯೋ ಕ್ಯಾಸೆಟ್‌ಗಳ ಸಮೂಹವನ್ನು ಬಿಡುಗಡೆ ಮಾಡಿ ಮಾತನಾಡಿದರು.

ಡಾ. ಶರಣಬಸವಪ್ಪ ಅಪ್ಪಾಜಿಯವರು ಶಿಕ್ಷಣ ಹಾಗೂ ಮಹಿಳಾ ಸಬಲೀಕರಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಐತಿಹಾಸಿಕ ಮತ್ತು ಅಪೂರ್ವವಾದದ್ದು, ಹಿಂದುಳಿದ ಪ್ರದೇಶದ ಶೈಕ್ಷಣಿಕ ಸಬಲೀಕರಣಕ್ಕಾಗಿ ತಮ್ಮ ಇಡೀ ಜೀವನವನ್ನೇ ಮುಡಿಪಾಗಿಟ್ಟಿದ್ದ ಅಪ್ಪಾಜಿಯವರು, ಈ ಭಾಗವನ್ನು ಪ್ರಮುಖ ಶೈಕ್ಷಣಿಕ ಕೇಂದ್ರವನ್ನಾಗಿ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ವಿಶೇಷವಾಗಿ ಗುಣಮಟ್ಟದ ಶಿಕ್ಷಣವನ್ನು ವಿಸ್ತರಿಸುವುದು ಹಾಗೂ ಮಹಿಳೆಯರಿಗೆ ಶೈಕ್ಷಣಿಕ ಅವಕಾಶಗಳನ್ನು ಕಲ್ಪಿಸುವಲ್ಲಿ ಅವರ ಕೊಡುಗೆಗೆ ಸರಿಸಾಟಿಯಿಲ್ಲ. ಉತ್ತರ ಕರ್ನಾಟಕದ ಪ್ರಥಮ ಖಾಸಗಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಿದ ಅಪ್ಪಾಜಿಯವರು, ಸಂಘದ ವತಿಯಿಂದ ನಡೆಸಲಾಗುತ್ತಿರುವ ಎಲ್ಲ ಶಿಕ್ಷಣ ಸಂಸ್ಥೆಗಳಲ್ಲಿ ಮೌಲ್ಯಾಧಾರಿತ ಶಿಕ್ಷಣಕ್ಕೆ ಆದ್ಯತೆ ನೀಡಿದರು. ಅಲ್ಲದೆ ಕೃತಕ ಬುದ್ಧಿಮತ್ತೆ ಡ್ರೋನ್ ತಂತ್ರಜ್ಞಾನ ಸೇರಿದಂತೆ ಉದಯೋನ್ಮುಖ ತಂತ್ರಜ್ಞಾನ ಕ್ಷೇತ್ರಗಳಲ್ಲಿಶ್ರೇಷ್ಠತಾ ಕೇಂದ್ರಗಳನ್ನು ಸ್ಥಾಪಿಸುವ ಮೂಲಕಶೈಕ್ಷಣಿಕಕ್ಷೇತ್ರವನ್ನು ಹೊಸಎತ್ತರಕ್ಕೆ ಕೊಂಡೊಯ್ದರು ಎಂದು ಡಾ. ಪ್ರಭಾ ಮಲ್ಲಿಕಾರ್ಜುನ ಶಾಮನೂರು ಹೇಳಿದರು.

ಕಾರ್ಯಕ್ರಮದಲ್ಲಿ ಆಂಧ್ರಪ್ರದೇಶದ ಶ್ರೀಶೈಲ ದಲ್ಲಿರುವ ಸಾರಂಗ ಮಠದ ಜಗದ್ಗುರು ಡಾ. ಸಾರಂಗಧರ ದೇಶಿಕೇಂದ್ರ ಮಹಾಸ್ವಾಮೀಜಿ ಅವರು ಸಹ ಮಾತನಾಡಿದರು.

ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ, ಕಲಬುರಗಿ ಲೋಕಸಭಾ ಸದಸ್ಯ ಡಾ. ರಾಧಾಕೃಷ್ಣ ದೊಡ್ಡಮನಿ, ಮುತ್ಯಾನ ಬಬಲಾದ ಮಠದ ಪೀಠಾಧಿಪತಿ ಡಾ. ಗುರುಪಾದಲಿಂಗ ಮಹಾಶಿವಯೋಗಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಡಾ. ಅಪ್ಪಾಜಿಯವರ ಪುತ್ರಿಯರಾದ ಭವಾನಿ, ಶಿವಾನಿ, ಮಹೇಶ್ವರಿ, ಡಾ. ಗಂಗಾಂಬಿಕಾ ನಿಷ್ಠಿ, ಉಮಾ ಕಾಡಾದಿ, ಡಾ. ಶಾಂತಲಾ ನಿಷ್ಠಿ, ಗೋದಾವರಿ ಭೀಮಳ್ಳಿ, ಮತ್ತು ಡಾ. ವೀರನಾಥ ಮಹಾರಾಜ, ಔಸಾ, ಶ್ರೀ ಆದಿನಾಥ ಮಹಾರಾಜ, ಡಾ. ಅಲ್ಲಮಪ್ರಭು ದೇಶಮುಖ, ವಿಜಯಲಕ್ಷ್ಮೀ ಮುದಗಲ್, ಚಂದ್ರಶೇಖರ ನರಕೆ ಸೇರಿದಂತೆ ಡಾ. ಅಪ್ಪಾಜಿಯವರ ಕುಟುಂಬದ ನಿಕಟ ಸದಸ್ಯರನ್ನು ಸಹ ಸನ್ಮಾನಿಸಲಾಯಿತು.

ಶಾಸಕರಾದ ಅಲ್ಲಮಪ್ರಭು ಪಾಟೀಲ, ಎಂ.ವೈ. ಪಾಟೀಲ, ಬಿ.ಆರ್. ಪಾಟೀಲ, ಬಸವರಾಜ ಮತ್ತಿಮೂಡ, ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ, ಬಿ.ಜಿ. ಪಾಟೀಲ, ಶಶೀಲ ನಮೋಶಿ, ಜಗದೇವ ಗುತ್ತೇದಾರ ಹಾಗೂ ಮಾಜಿ ಶಾಸಕರಾದ ಮಾಲಿಕಯ್ಯ ಗುತ್ತೇದಾರ, ಶ್ರೀ ದತ್ತಾತ್ರೇಯ ಪಾಟೀಲ ರೇವೂರ, ದೊಡ್ಡಪ್ಪಗೌಡ ನರಿಬೋಳ, ಮಾಜಿ ಸಂಸದ ಉಮೇಶ ಜಾಧವ್ ಸೇರಿದಂತೆ ಹಲವು ಚುನಾಯಿತ ಪ್ರತಿನಿಧಿಗಳನ್ನು ಸಹ ಸನ್ಮಾನಿಸಲಾಯಿತು.

ಇದಕ್ಕೂ ಮುನ್ನ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ, ಪೂಜ್ಯ ದೊಡ್ಡಪ್ಪ ಅಪ್ಪಾಜಿ ಹಾಗೂ ಕುಟುಂಬದ ಇತರ ಸದಸ್ಯರು ಲಿಂಗೈಕ್ಯ ಪೂಜ್ಯಡಾ. ಶರಣಬಸವಪ್ಪ ಅಪ್ಪಾಜಿಯವರ ಗದ್ದುಗೆಗೆ ಸಾಂಪ್ರದಾಯಿಕ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ, ಎರಡು ಗಂಟೆಗಳಿಗೂ ಹೆಚ್ಚು ಕಾಲ ವಿಶೇಷ ಪೂಜೆ ಸಲ್ಲಿಸಿದರು.

# ತರಗತಿ ನಡೆಯುತ್ತಿರುವಾಗಲೇ ಕುಸಿದ ಛಾವಣಿ, 8 ಮಕ್ಕಳಿಗೆ ಗಾಯ

### ಬಾಗಲಕೋಟೆ ತಾಲೂಕಿನ ಮುಗಳೊಳ್ಳಿ ತಾಂಡಾದ ಸರ್ಕಾರಿ ಶಾಲೆಯಲ್ಲಿ ಅವಘಡ



**ಬಾಗಲಕೋಟೆ, ಸೆ.4:** ತಾಲೂಕಿನ ಮುಗಳೊಳ್ಳಿ ತಾಂಡಾದ ಸರ್ಕಾರಿ ಶಾಲೆಯೊಂದರಲ್ಲಿ ಬುಧವಾರ ತರಗತಿ ನಡೆಯುತ್ತಿದ್ದಾಗಲೇ ಕೊಠಡಿಯ ಛಾವಣಿಯ ಒಂದು ಭಾಗ ಕುಸಿದು ಬಿದ್ದು ಮಕ್ಕಳು ಗಾಯಗೊಂಡಿರುವ ಕುರಿತಾದ ಮಾಧ್ಯಮ ವರದಿಯ ಆಧಾರದ ಮೇಲೆ, ಲೋಕಾಯುಕ್ತ ನ್ಯಾಯಮೂರ್ತಿ ಬಿಎಸ್ ಪಾಟೀಲ್ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತ, ಹೆಚ್ಚುವರಿ ಆಯುಕ್ತ, ಬಾಗಲಕೋಟೆ ಜಿಲ್ಲಾಧಿಕಾರಿ, ಬಾಗಲಕೋಟೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗೆ ನೋಟಿಸ್ ಜಾರಿ ಮಾಡಿದ್ದಾರೆ.ಈ ಘಟನೆಗೆ ಸಂಬಂಧಿಸಿದಂತೆ, ಅಕ್ಟೋಬರ್ 7 ರಂದು ಖುದ್ದಾಗಿ ಹಾಜರಾಗಿ ವರದಿ ಸಲ್ಲಿಸುವಂತೆ ಧಾರವಾಡದ ಹೆಚ್ಚುವರಿ ಆಯುಕ್ತರು, ಶಿಕ್ಷಣ ಇಲಾಖೆಯ ಅಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉಪ ನಿರ್ದೇಶಕರು ಹಾಗೂ ಬಿಇಒಗೆ ನಿರ್ದೇಶನ ನೀಡಿದ್ದಾರೆ.

ಈ ಘಟನೆಯ ಹಿನ್ನೆಲೆಯಲ್ಲಿ, ಬಾಗಲಕೋಟೆ ಜಿಲ್ಲೆಯ ಶಾಲೆಗಳಿಗೆ ಭೇಟಿ ನೀಡಿ, ಕಟ್ಟಡಗಳ ಸ್ಥಿತಿಗತಿ, ಸುರಕ್ಷತಾ ಮಾನದಂಡಗಳು ಮತ್ತು ಮೂಲಸೌಕರ್ಯಗಳನ್ನು ಸುರಕ್ಷತಾ ಪರಿಶೀಲನೆ ನಡೆಸಲು ಹಾಗೂ ವರದಿ ಸಲ್ಲಿಸಲು ಲೋಕಾಯುಕ್ತ ಪೊಲೀಸರಿಗೆ ಸೂಚಿಸಿದ್ದಾರೆ.ಈಮಧ್ಯೆ, ಬುಧವಾರ ನಡೆದ ಘಟನೆ ನಂತರ, ಬಾಗಲಕೋಟೆ ಜಿಲ್ಲಾಡಳಿತವು ದೀರ್ಘಕಾಲೀನ ಕ್ರಮಗಳೂ ಸೇರಿದಂತೆ ತ್ವರಿತ ಕ್ರಮಗಳನ್ನು ಕೈಗೊಂಡಿದೆ.

ಅಧಿಕೃತ ಹೇಳಿಕೆ ಪ್ರಕಾರ, ಜಿಲ್ಲಾ ಆಸ್ಪತ್ರೆಗೆ ದಾಖಲಾಗಿದ್ದ ಎಂಟು ಮಕ್ಕಳಿಗೆ ಚಿಕಿತ್ಸೆ ನೀಡಲಾಗಿದ್ದು, ಡಿಸ್ಚಾರ್ಜ್ ಮಾಡಲಾಗಿದೆ.ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಪಂಚಾಯತ್ ರಾಜ್ ಎಂಜಿನಿಯರಿಂಗ್ ಇಲಾಖೆಯ ಕಿರಿಯ ಎಂಜಿನಿಯರ್ ಅನ್ನು ಅಮಾನತುಗೊಳಿಸಲಾಗಿದೆ; ಹಾಗೆಯೇ, ಅದೇ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಅನ್ನು ಅಮಾನತುಗೊಳಿಸಲು ಸಂಬಂಧಪಟ್ಟ ಪ್ರಾಧಿಕಾರಕ್ಕೆ ಶಿಫಾರಸು ಮಾಡಲಾಗಿದೆ. ಜೊತೆಗೆ, ಡಿಡಿಪಿಐ, ಬಿಇಒ ಮತ್ತು ತಾಲ್ಲೂಕು ಪಂಚಾಯತ್ ಇಒಗೆ ಶೋಕಾಸ್ ನೋಟಿಸ್‌ಗಳನ್ನು ನೀಡಲಾಗಿದೆ. ತಕ್ಷಣದ ಸುರಕ್ಷತಾ ಕ್ರಮವಾಗಿ, 4 ರಿಂದ 6ನೇ ತರಗತಿಯ ವಿದ್ಯಾರ್ಥಿಗಳನ್ನು ಸಮೀಪದ (1.5 ಕಿ.ಮೀ. ದೂರದಲ್ಲಿರುವ) ಕೆಪಿಎಸ್ (ಕರ್ನಾಟಕ ಪಬ್ಲಿಕ್ ಶಾಲೆ) ಶಾಲೆಗೆ ಸ್ಥಳಾಂತರಿಸಲಾಗುತ್ತಿದೆ. ಸಾರಿಗೆ ವೆಚ್ಚವನ್ನು ಶಿಕ್ಷಣ ಇಲಾಖೆ ಭರಿಸಲಿದೆ.1 ರಿಂದ 3ನೇ ತರಗತಿಯ ವಿದ್ಯಾರ್ಥಿಗಳು ಮುಗಳೊಳ್ಳಿ ಎಲ್‌ಟಿ ಶಾಲೆಯ ಸುರಕ್ಷಿತ ತರಗತಿ ಕೊಠಡಿಗಳಲ್ಲೇ ತಮ್ಮ ಕಲಿಕೆಯನ್ನು ಮುಂದುವರಿಸಲಿದ್ದಾರೆ. ಒಟ್ಟು ನಾಲ್ಕು ಹೊಸ ತರಗತಿ ಕೊಠಡಿಗಳನ್ನು ನಿರ್ಮಿಸಲಾಗುವುದು. ಇವುಗಳಲ್ಲಿ ಎರಡು ಶಿಕ್ಷಣ ಇಲಾಖೆಯಿಂದ ಮತ್ತು ಉಳಿದ ಎರಡು ವಿಬಿಜಿ-ರಾಮ್‌ಜೀ ಯೋಜನೆಯಡಿ ನಿರ್ಮಾಣವಾಗಲಿವೆ.

ಜಿಲ್ಲೆಯಾದ್ಯಂತ ಶಾಲಾ ಆವರಣಗಳ ಮೇಲೆ ಹಾದುಹೋಗಿರುವ ಅಧಿಕ ಒತ್ತಡದ (ಹೈ-ಟೆನ್ಷನ್) ವಿದ್ಯುತ್ ತಂತಿಗಳನ್ನು ತಕ್ಷಣವೇ ಗುರುತಿಸಿ ತೆರವುಗೊಳಿಸುವಂತೆ ಹೆಸ್ಕಾಂ ಗೆ ಸೂಚನೆ ನೀಡಲಾಗಿದೆ. ಎಲ್ಲ ವಿದ್ಯಾರ್ಥಿಗಳ ಸಂಪೂರ್ಣ ಸುರಕ್ಷತೆ ಮತ್ತು ಕ್ಷೇಮವನ್ನು ಖಚಿತಪಡಿಸಿಕೊಳ್ಳಲು ಜಿಲ್ಲಾಡಳಿತ ಬದ್ಧವಾಗಿದೆ ಎಂದು ಅಧಿಕೃತ ಹೇಳಿಕೆಯೊಂದು ತಿಳಿಸಿದೆ.

# ಹೊರನಾಡು-ಗಡಿನಾಡು ಪದಗಳ ಗೊಂದಲ

## ಗಡಿ ಕನ್ನಡಿಗರು ಸರ್ಕಾರಿ ಸೌಲಭ್ಯಗಳಿಂದ ವಂಚಿತ ಕಗ್ಗಂಟು ಬಿಡಿಸಲು ಸಭೆ



ಬೆಂಗಳೂರು, ಸೆ.4: ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಶುಕ್ರವಾರ ಸಭೆಯನ್ನು ಸೋಮಣ್ಣ ಬೇವಿನಮರದ, ಮಾಜಿ ಶಾಸಕರು ಹಾಗೂ ಅಧ್ಯಕ್ಷರು, ಗಡಿ ಅಭಿವೃದ್ಧಿ ಪ್ರಾಧಿಕಾರರವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿತ್ತು. ಈ ಸಭೆಯಲ್ಲಿ ಡಾ. ಪುರುಷೋತ್ತಮ ಬಿಳಿಮಲೆರವರು, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಸಾರಾ ಗೋವಿಂದು, ಅಧ್ಯಕ್ಷರು, ಅಖಿಲ ಕರ್ನಾಟಕ ಡಾ॥ ರಾಜಕುಮಾರ್ ಅಭಿಮಾನಿಗಳ ಸಂಘ, ಬೆಂಗಳೂರು. ಪ್ರವೀಣ್ ಕುಮಾರ್ ಶೆಟ್ಟಿ ಕರವೇ ಅಧ್ಯಕ್ಷರು, ಪ್ರಕಾಶ್ ಮತ್ತೀಹಳ್ಳಿ, ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಈ ಸಭೆಯಲ್ಲಿ ಉಪಸ್ಥಿತರಿದ್ದರು.

ಪ್ರಮುಖವಾಗಿ ಹೊರನಾಡು ಮತ್ತು ಗಡಿನಾಡು ಶಬ್ದಗಳ ವ್ಯಾಖ್ಯಾನದ ಬಗ್ಗೆ ಸವಿಸ್ತಾರವಾಗಿ ಚರ್ಚಿಸಿದ್ದು, ಕನ್ನಡ ಹಿರಿಯ ಹೋರಾಟಗಾರರಾದ ವಾಟಾಳ್ ನಾಗರಾಜ್, ನಾಡೋಜ ಹಾಗೂ ಹಿರಿಯ ಸಾಹಿತಿ ಪ್ರೊ. ಬರಗೂರು ರಾಮಚಂದ್ರಪ್ಪ, ಮಾಜಿ ಸಚಿವರಾದ ಶ್ರೀ ಹೆಚ್.ಕೆ.ಪಾಟೀಲ್ ರವರ ವರದಿ, ಡಾ॥ ಸಿ. ಸೋಮಶೇಖರ್ ರವರ ವರದಿ ಹಾಗೂ ಪ್ರೊ. ಚಿನ್ನಸ್ವಾಮಿ ಸೋಸಲೆರವರ ವರದಿಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು. ಈ ವರದಿಗಳ ಆಶಯದಂತೆ ಹೊರರಾಜ್ಯಗಳ ಕನ್ನಡಿಗರ ಸಮಸ್ಯೆಗಳ ಪರಿಹಾರಕ್ಕೆ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಕೆಲವು ಆದೇಶಗಳು ಹೊರರಾಜ್ಯದ ಕನ್ನಡಿಗರಿಗೆ ತೊಂದರೆಯಾಗಿರುವ ಬಗ್ಗೆ ಗಮನಿಸಲಾಯಿತು. ಹೊರರಾಜ್ಯಗಳಲ್ಲಿನ ಕನ್ನಡಿಗರು ಉನ್ನತ ಶಿಕ್ಷಣ, ಉದ್ಯೋಗ ಇತ್ಯಾದಿಗಳಿಗೆ ಕರ್ನಾಟಕದ ಸಂಬಂಧಿಸಿದ ವಿಶ್ವವಿದ್ಯಾಲಯಗಳಿಗೆ, ನೇಮಕಾತಿ ಪ್ರಾಧಿಕಾರಿಗಳಲ್ಲಿ ಅರ್ಜಿಗಳನ್ನು ಸಲ್ಲಿಸಲು ಸರಿಯಾದ ನಿಯಮಗಳನ್ನು ರೂಪಿಸದೇ ಇರುವುದನ್ನು ಗಮನಿಸಿದರು.

ಗಡಿನಾಡು ಮತ್ತು ಹೊರನಾಡು ವ್ಯಾಖ್ಯಾನಕ್ಕೆ ಮೇಲ್ಕಂಡ ವರದಿಗಳಂತೆ, ಗಡಿನಾಡು ಎಂದರೆ ?ರಾಜ್ಯದಲ್ಲಿ ಗುರುತಿಸಿರುವ 63 ಗಡಿ ತಾಲ್ಲೂಕುಗಳು, ಹೊರನಾಡು ಎಂದರೆ - 6 ಹೊರರಾಜ್ಯದ ಕನ್ನಡ ಪ್ರದೇಶದ ತಾಲ್ಲೂಕುಗಳು ಮತ್ತು ದೇಶದ ವಿವಿಧ ಭಾಗಗಳಲ್ಲಿನ ಕನ್ನಡ ಸಂಘಟನೆಗಳು, ಸಂಸ್ಥೆಗಳು ಮತ್ತು ಕನ್ನಡ ಭಾಷಿಕರ ಪ್ರದೇಶಗಳು ಸೇರಿದಂತೆ ಹೊರದೇಶದಲ್ಲಿರುವ ಕನ್ನಡ ಪರ ಸಂಘಟನೆಗಳು ಇತ್ಯಾದಿ ಎಂಬುದನ್ನು ಸೇರಿಸಿ ಗಡಿ ಅಭಿವೃದ್ಧಿ ಪ್ರಾಧಿಕಾರದ ಆಡಳಿತ ವ್ಯಾಪ್ತಿಯನ್ನು ವಿಸ್ತರಿಸುವುದು ಸೂಕ್ತವಾಗಿದೆ ಎಂದು ಸಭೆಯಲ್ಲಿದ್ದ ಮೇಲ್ಕಂಡ ಪ್ರಮುಖರು ತಿಳಿಸಿದರು. ಪ್ರೊ. ಬರಗೂರು ರಾಮಚಂದ್ರಪ್ಪ ಮತ್ತು ಶ್ರೀ ವಾಟಾಳ್ ನಾಗರಾಜ್ ರವರ ಲಿಖಿತ ಮಾಹಿತಿಯನ್ನು ಸಭೆಯ ಗಮನಕ್ಕೆ ತರಲಾಯಿತು. ಕಾರಣ ಹೊರನಾಡಿನ ಕನ್ನಡಿಗರು ಮತ್ತು ಹೊರದೇಶದಲ್ಲಿ ನೆಲಸಿರುವ ಕನ್ನಡಿಗರ ಸಮಸ್ಯೆಗಳು ಒಂದೇ ತರನಾಗಿದ್ದು ಇವುಗಳನ್ನು ಪರಿಹರಿಸುವುದು ರಾಜ್ಯ ಸರ್ಕಾರದ ವಿವಿಧ ಇಲಾಖೆಯ ಜವಾಬ್ದಾರಿಯಾಗಿದೆ ಎಂಬುದಾಗಿರುತ್ತದೆ.

ರಾಜ್ಯದ ತೆಲುಗು, ತಮಿಳು, ಮಲಯಾಳಂ ಹಾಗೂ ಹಿಂದಿ ಭಾಷಿಕ ಶಾಲೆಗಳಿಗೆ ರಾಜ್ಯ ಸರ್ಕಾರವು ಆಯಾ ಭಾಷೆಯ ಶಿಕ್ಷಕರನ್ನೇ ನೇಮಿಸುತ್ತಿದ್ದು, ಈ ಪದ್ಧತಿಯನ್ನು ರಾಜ್ಯಕ್ಕೆ ಹೊಂದಿಕೊಂಡಿರುವ 6 ಹೊರರಾಜ್ಯಗಳು ಪಾಲಿಸದೇ ಇರುವುದು ಸಂವಿಧಾನದ ಭಾಷಾ ಅಲ್ಪಸಂಖ್ಯಾತ ಸೌಲಭ್ಯಗಳನ್ನು ನಿರಾಕರಿಸಿದಂತಾಗಿದೆ. ಆದ್ದರಿಂದ ಕನ್ನಡ ಶಾಲೆಗಳ ದುರಸ್ಥಿ, ಶಿಕ್ಷಕರ ನೇಮಕಾತಿ, ಬಡ್ತಿ ಇತ್ಯಾದಿಗಳಿಗೆ ರಾಜ್ಯ ಸರ್ಕಾರ ಹೆಚ್ಚಿನ ಮುತುವರ್ಜಿ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಗಳಿಗೆ ಹೆಚ್ಚಿನ ಅನುದಾನ ಒದಗಿಸಿ ಇವುಗಳನ್ನು ತುಂಬಾ ಮುಖ್ಯವಾದ ಇಲಾಖೆಗಳ ಪಟ್ಟಿಯಲ್ಲಿ ಸೇರಿಸಿ ಬಲವರ್ಧನೆಗೊಳಿಸುವುದು ಸೂಕ್ತವಾಗಿದೆ ಎಂದು ಸಭೆಯಲ್ಲಿ ಇದ್ದ ಎಲ್ಲಾ ಕನ್ನಡಪರ ಸಂಘಟನೆಗಳು ಒತ್ತಾಯ ಪೂರ್ವಕವಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಲು ತೀರ್ಮಾನಿಸಿದರು. ಈ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳನ್ನು, ಈ ಎರಡೂ ಪ್ರಾಧಿಕಾರದ ಮುಖ್ಯಸ್ಥರ ಜೊತೆ ಎಲ್ಲಾ ಕನ್ನಡ ಪರ ಸಂಘಟನೆಗಳು ನಿಯೋಗದ ಮೂಲಕ ಹೋಗಿ ಪ್ರಸ್ತಾವಣೆ ಸಲ್ಲಿಸುವುದು ಸೂಕ್ತವೆಂದು ನಿರ್ಣಯಿಸಿದರು..

ಪಾಲನೇತ್ರ, ಅಧ್ಯಕ್ಷರು ಕರ್ನಾಟಕ ವಿಚಾರ ವೇದಿಕೆ, ಬಿ.ಎನ್.ಜಗದೀಶ್, ಅಧ್ಯಕ್ಷರು ಜಯ ಕರ್ನಾಟಕ, ರಾಜಘಟ್ಟ ರವಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕರವೇ. ಎ.ಆರ್.ಸುಬ್ಬಯ್ಯ ಕಟ್ಟೆ ಸದಸ್ಯರು ಗಡಿ ಪ್ರಾಧಿಕಾರ, ಶಿವರೆಡ್ಡಿ ನವಲಿ ಸದಸ್ಯರು, ಗಡಿ ಪ್ರಾಧಿಕಾರ ಡಾ॥ ಎಚ್.ಶಶಿಕಲಾ, ಮುಖ್ಯಸ್ಥರು/ಅಧ್ಯಕ್ಷರು, ಕನ್ನಡ ಭಾಷಾ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ. ಡಾ॥ ಎಂ ಎಸ್ ಆಶಾದೇವಿ, ಹಿರಿಯ ಸಾಹಿತಿ ಹಾಗೂ ಪ್ರಾಧ್ಯಾಪಕರು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು, ಧರ್ಮೇಂದ್ರ ಪೂಜಾರಿ, ಅಧ್ಯಕ್ಷರು, ಕನ್ನಡಿಗರ ಕಲ್ಯಾಣ ಸಂಘ, ತೆಲಂಗಾಣ, ಬಸವರಾಜಗೌಡ, ಕರವೇ ರಾಜ್ಯಾಧ್ಯಕ್ಷ ಗೋವಾ, ಶಿವಾನಂದ ಮ ಬಿಂಗಿ ಅಧ್ಯಕ್ಷರು ಕನ್ನಡ ಸಂಘ ಗೋವಾ. ಗಿರಿಜಾಪತಿ ಮಠ, ಹಿರಿಯ ಕನ್ನಡ ಹೋರಾಟಗಾರರು, ಹಾಗೂ ಕನ್ನಡ ಶಿಕ್ಷಕರು ಆಂಧ್ರಪ್ರದೇಶ, ರಾಮಲಿಂಗಪ್ಪರವರು, ನಿವೃತ್ತ ಶಿಕ್ಷಕರು, ಹಿರಿಯ ಕನ್ನಡ ಹೋರಾಟಗಾರರು, ತೆಲಂಗಾಣ, ಶ್ರೀ ಗಂಜಿ ತಿಪ್ಪೇಸ್ವಾಮಿ ಕನ್ನಡ ಶಿಕ್ಷಕರ ಸಂಘ ಆಂಧ್ರಪ್ರದೇಶ ಹಾಗೂ ಇತರೆ ಕನ್ನಡ ಪರ ಸಂಘಟನೆಗಳ ಮುಖ್ಯಸ್ಥರು ಮಾತನಾಡಿ ಮುಖ್ಯವಾಗಿ ಹೊರನಾಡಿನ ಸಮಸ್ಯೆಗಳಂತೆ ಬೆಂಗಳೂರಿನಲ್ಲಿರುವ ಕನ್ನಡಿಗರು ಸಹ ಪ್ರತಿದಿನ ಭಾಷೆಗೆ ಸಂಬಂಧಿಸಿದಂತೆ ಹಲವಾರು ಗಲಾಟೆ-ಗೊಂದಲಗಳನ್ನು ಎದುರಿಸುತ್ತಿದ್ದು, ಕನ್ನಡ ಭಾಷೆ ಬಾರದ ಟ್ಯಾಕ್ಸಿ ಹಾಗೂ ಆಟೋಚಾಲಕರುಗಳು ಪ್ರಯಾಣಿಕರೊಂದಿಗೆ ಭಾಷೆಗೆ ಸಂಬಂಧಿಸಿದ ಜಗಳಗಳಿಂದ ಹಲವಾರು ದೂರುಗಳು ಪೊಲೀಸ್ ಠಾಣೆಗಳಲ್ಲಿ ದಾಖಲಾಗುತ್ತಿವೆ. ಇಂತಹ ಚಾಲಕರಿಗೆ ಕನ್ನಡ ಭಾಷೆ ಕಲಿತಿರುವ ಬಗ್ಗೆ ಪ್ರಮಾಣ ಪತ್ರವನ್ನು ಕಡ್ಡಾಯಗೊಳಿಸಿ ಚಾಲನೆ ಪರವಾನಿಗೆ ನೀಡಲು ಸಾರಿಗೆ ಇಲಾಖೆ ಕ್ರಮಕೈಗೊಳ್ಳಬೇಕಾಗಿದೆ. ಮುಂದುವರೆದು ಬೆಂಗಳೂರು ನಗರದಲ್ಲಿರುವ ಬೃಹತ್ ಅಪಾರ್ಟ್‌ಮೆಂಟ್ಸ್‌ನ ಕನ್ನಡೇತರ ನಿವಾಸಿಗಳು ಭಾಷೆಗೆ ಸಂಬಂಧಿಸಿದಂತೆ ದಿನನಿತ್ಯ ಜಗಳ ಇತ್ಯಾದಿಗಳನ್ನು ಮಾಡುವುದರ ಜೊತೆಗೆ ಬೆಂಗಳೂರಿನ ಸಂಸ್ಕೃತಿಗೆ ದಕ್ಕೆ ತರುವಂತಹ ನಡುವಳಿಕೆಗಳನ್ನು ತಪ್ಪಿಸುವುದು ಪೊಲೀಸ್ ಇಲಾಖೆಯ ಜವಾಬ್ದಾರಿ ಎಂದು ತಿಳಿಸಿ, ಈ ಬಗ್ಗೆ ಪ್ರಾಧಿಕಾರಗಳು ಸೂಕ್ತ ಆದೇಶ ಮಾಡಬೇಕೆಂದು ಮನವಿ ಮಾಡಿದರು. ಪ್ರಕಾಶ್ ಮತ್ತೀಹಳ್ಳಿ, ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಇವರು ಸಭೆಯಲ್ಲಿ ಉಪಸ್ಥಿತಿದ್ದ ಎಲ್ಲಾ ಸದಸ್ಯರುಗಳಿಗೆ ವಂದನಾರ್ಪಣೆ ಸಲ್ಲಿಸಿದರು.

# ಕರಾವಳಿಯ ಗಂಡುಕಲೆ ಕಂಡು ಮಂತ್ರಮುಗ್ಧರಾದ ಕಲಬುರಗಿ ಜನ



**ಕಲಬುರಗಿ, ಸೆ.4:** ಕರಾವಳಿಯ ಕಡಲ ಅಲೆಗಳ ಸದ್ದು, ಚೆಂಡೆ-ಮದ್ದಳೆಯ ಗಂಭೀರ ನಾದ ಹಾಗೂ ಗೆಜ್ಜೆಗಳ ಝೇಂಕಾರ ಬಯಲು ಸೀಮೆಯ ನೆಲದಲ್ಲಿ ಅನುರಣಿಸಿತು. ಬಣ್ಣಬಣ್ಣದ ವೇಷಭೂಷಣ, ಭವ್ಯ ಕಿರೀಟ, ಮುಖವರ್ಣಿಕೆ ಮತ್ತು ಭಾಗವತರ ಕಂಠದಿಂದ ಹೊಮ್ಮಿದ ಪದ್ಯಗಳ ಸೊಗಡಿಗೆ ಕಲಬುರಗಿ ಜನ ಮಂತ್ರಮುಗ್ಧರಾದರು.

ಲಿಂ. ಶ್ರೀ ಡಾ. ಶರಣಬಸವಪ್ಪ ಅಪ್ಪಾಜಿ ಅವರ ಪ್ರಥಮ ಪುಣ್ಯ ಸ್ಮರಣೋತ್ಸವದ ಅಂಗವಾಗಿ ನಡೆದ 'ಕಾಂತಾರ ಮಣಿ' ಯಕ್ಷಗಾನ ಪ್ರದರ್ಶನ ಕರಾವಳಿ-ಕಲ್ಯಾಣ ಕರ್ನಾಟಕದ ಸಾಂಸ್ಕೃತಿಕ ಸೇತುವೆಯಾಗಿ ಗಮನ ಸೆಳೆಯಿತು.

ದಕ್ಷಿಣ ಕನ್ನಡ ಸಂಘ, ಹೋಟೆಲ್, ಬೇಕರಿ ಹಾಗೂ ವಸತಿಗೃಹ ಮಾಲೀಕರ ಸಂಘದ ಸಹಯೋಗಲ್ಲಿ ಶ್ರೀ ಶರಣಬಸವೇಶ್ವರ ಸಂಸ್ಥಾನದ ಶಿವಾನುಭವ ಮಂಟಪದಲ್ಲಿ ಯಕ್ಷಗಾನ ಆಯೋಜಿಸಲಾಗಿತ್ತು. ಮೂರು ಗಂಟೆಗಳ ಕಾಲ ನಡೆದ ಪ್ರದರ್ಶನದಲ್ಲಿ ಕರಾವಳಿಯ ಗಂಡುಕಲೆಯ ವೈಭವವನ್ನು ಕಲಬುರಗಿ ಜನ ಕಣ್ತುಂಬಿಕೊಂಡರು.

**ದೈವ-ಮಾನವ ನಂಬಿಕೆಯ ಕಥನ:** ಪ್ರಸಿದ್ಧ ಕೃತಿಕಾರ ಕೊಕ್ಕರ್ಣೆ ಸದಾಶಿವ ಅಮೀನ್ ರಚಿಸಿರುವ 'ಕಾಂತಾರ ಮಣಿ' ಪ್ರಸಂಗವು ದೈವ-ಮಾನವ ಸಂಬಂಧದ ಸುತ್ತ ಹೆಣೆದಿರುವ ಕಥನ. ಕಾಡು, ನೆಲ, ನೀರು ಮತ್ತು ಅಲ್ಲಿನ ಜನಜೀವನದೊಂದಿಗೆ ಬೆಸೆದುಕೊಂಡಿರುವ ದೈವ ನಂಬಿಕೆ, ಸಂಪ್ರದಾಯ ಹಾಗೂ ಆಧುನಿಕತೆಯ ಸಂಘರ್ಷ ಕಥೆಯ ಪ್ರಮುಖ ಎಳೆಗಳಾಗಿವೆ.

ಮಾನವನ ಅಹಂಕಾರ ಮತ್ತು ದೈವಿಕ ಶಕ್ತಿಯ ನಡುವಿನ ಸಂಘರ್ಷ, ನಂಬಿಕೆಯ ಪರೀಕ್ಷೆ, ಭಕ್ತಿ, ತ್ಯಾಗ ಮತ್ತು ಅಂತಿಮವಾಗಿ ಸತ್ಯದ ಗೆಲುವನ್ನು ಯಕ್ಷಗಾನದ ವಿಶಿಷ್ಟ ಶೈಲಿಯಲ್ಲಿ ಕಟ್ಟಿಕೊಡಲಾಗಿದೆ. ಕರಾವಳಿಯ ಜನಜೀವನದಲ್ಲಿ ದೈವಕ್ಕೆ ಇರುವ ಸ್ಥಾನ, ಆರಾಧನೆಯ ಹಿಂದಿರುವ ನಂಬಿಕೆ ಮತ್ತು ಸಂಸ್ಕೃತಿಯ ಮಹತ್ವವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಆಶಯವೂ ಪ್ರಸಂಗ ದಲ್ಲಿದೆ.

**ಚಂಡೆ ನಾದಕ್ಕೆ ಹೆಜ್ಜೆ ಹಾಕಿದ ಕಲಬುರಗಿ:** ಶ್ರೀ ಮಹಾಗಣಪತಿ ಯಕ್ಷಗಾನ ಮಂಡಳಿ (ರಿ.), ನಡೂರು ತಂಡದ ಕಲಾವಿದರು ರಂಗದಲ್ಲಿ ತಮ್ಮ ಪ್ರತಿಭೆ ಮೆರೆದರು. ಗಣೇಶ್ ಆಚಾರ್ಯ ಬಿಲ್ಲಾಡಿ, ಸತೀಶ್ ಹಟ್ಟಿಯಂಗಡಿ ಸೇರಿದಂತೆ ಪ್ರಸಿದ್ಧ ಬಡಗುತಿಟ್ಟು ಕಲಾವಿದರ ಅಭಿನಯ, ಗಾಯನ, ಸಂಭಾಷಣೆ ಹಾಗೂ ವೇಷಭೂಷಣ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

ಭಾಗವತರ ಪದ್ಯಕ್ಕೆ ಮದ್ದಳೆಯ ಮಿಡಿತ, ಚೆಂಡೆಯ ಅಬ್ಬರಕ್ಕೆ ಪಾತ್ರಧಾರಿಗಳ ಗಂಭೀರ ಹೆಜ್ಜೆ ಹಾಗೂ ಸಂಭಾಷಣೆಯ ಏರಿಳಿತ-ಇವೆಲ್ಲವೂ ಶಿವಾನುಭವ ಮಂಟಪವನ್ನು ಕೆಲಕಾಲ ಕರಾವಳಿ ಯ ಯಕ್ಷಗಾನ ರಂಗಸ್ಥಳವನ್ನೇ ಆಗಿಸಿತು.

ಸಾಮಾಜಿಕ ಜಾಲತಾಣಗಳಲ್ಲಿ ಜನಪ್ರಿಯವಾಗಿರುವ ಪ್ರಸಂಗದ ಪದ್ಯ ಮತ್ತು ಸಂಭಾಷಣೆಗಳಿಗೂ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

# ಇತಿಹಾಸ ಸಾರುವ ಉಡುಪಿ ಕೃಷ್ಣಜನ್ಮಾಷ್ಟಮಿ ಉತ್ಸವ

**ಉಡುಪಿ, ಸೆ.4:** ಜನ್ಮಾಷ್ಟಮಿ ಉಡುಪಿ ಜನತೆಯ ಪಾಲಿಗೆ ಕೇವಲ ಒಂದು ಹಬ್ಬವಲ್ಲ. ನಂದಗೋಕುಲದ ವೈಭವವನ್ನು ಕಣ್ತುಂಬಿಕೊಳ್ಳುವ ಸಂಭ್ರಮವಾಗಿದೆ. ಪ್ರತಿ ಮನೆ ಮನೆಯಲ್ಲೂ ಕೃಷ್ಣನ ಜನ್ಮ ದಿನವನ್ನು ಅತ್ಯಂತ ವೈಭವದಿಂದ ಆಚರಿಸಿ ಎಲ್ಲೆಲ್ಲೂ ಕೃಷ್ಣನಿದ್ದಾನೆ ಎಂದು ಜಗತ್ತಿಗೆ ಸಾರುವುದು ಇದರ ವಿಶೇಷತೆಯಾಗಿದೆ. ಶ್ರೀ ಕೃಷ್ಣಜನ್ಮಾಷ್ಟಮಿ ಸಂದರ್ಭದಲ್ಲಿ ಉಡುಪಿ ಕೃಷ್ಣ ಮಠ ಹಾಗೂ ದೇವಾಲಯದ ಸುತ್ತಮುತ್ತ ನಡೆಯುವ ವಿವಿಧ ಧಾರ್ಮಿಕ ವಿಧಿವಿಧಾನಗಳು, ಆಚರಣೆಗಳನ್ನು ಕಣ್ತುಂಬಿಕೊಳ್ಳಲು ದೂರದೂರುಗಳಿಂದ ಜನರು ನಗರಕ್ಕೆ ಆಗಮಿಸುತ್ತಾರೆ. ಇದಕ್ಕೆ ಕಾರಣ ಇಲ್ಲಿನ ಜನ್ಮಾಷ್ಟಮಿಗೆ ಸಾವಿರಾರು ವರ್ಷಗಳ ಇತಿಹಾಸವಿದೆ ಮತ್ತು ಇದು ದ್ವಾರಕೆಯೊಂದಿಗೆ ನೇರ ಸಂಬಂಧವನ್ನು ಹೊಂದಿರುವುದಾಗಿದೆ.

ದಕ್ಷಿಣದ ಮಥುರಾ ಎಂದೇ ಕರೆಯಲಾಗುವ ಉಡುಪಿಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಶತಮಾನಗಳ ಭವ್ಯ ಇತಿಹಾಸ ಮತ್ತು ವಿಶಿಷ್ಟ ಸಾಂಸ್ಕೃತಿಕ ಪರಂಪರೆಯನ್ನು ಸಾರುವ ಪ್ರಸಿದ್ಧ ಉತ್ಸವವಾಗಿದೆ. ಲಕ್ಷಾಂತರ ಜನರು ಸೇರುವ ಇಲ್ಲಿನ ಅಷ್ಟಮಿ ಆಚರಣೆಗೆ ಸಾವಿರ ವರ್ಷಗಳ ಇತಿಹಾಸವೇ ಇದೆ.

ಉಡುಪಿ ಶ್ರೀಕೃಷ್ಣ ಮಠದ ಆಕರ್ಷಣೆ ಎಂದರೆ ಕಡೆಗೋಲು ಹಿಡಿದ ಕೃಷ್ಣನ ಬಾಲ ವಿಗ್ರಹ. ವಿಶೇಷ ಸಂದರ್ಭಗಳಲ್ಲಿ ಅತ್ಯಂತ ಸುಂದರವಾಗಿ ಮುಖ್ಯವಾಗಿ ಮುತ್ತು, ರತ್ನ, ಚಿನ್ನ, ಬೆಳ್ಳಿಯ ಆಭರಣಗಳಿಂದ ಈ ವಿಗ್ರಹವನ್ನು ಅಲಂಕರಿಸಲಾಗುತ್ತದೆ. ಇದನ್ನು 13ನೇ ಶತಮಾನದಲ್ಲಿ ವೈಷ್ಣವ ಜಗತ್ ಗುರು ಮತ್ತು ವೇದಾಂತ ದ್ವೈತ ಶಾಲೆಯ ಸಂಸ್ಥಾಪಕ ಶ್ರೀಮಧ್ವಾಚಾರ್ಯರು ಪ್ರತಿಷ್ಠಾಪಿಸಿದರು.

ದಂತಕಥೆಯ ಪ್ರಕಾರ ಈ ವಿಗ್ರಹವನ್ನು ದ್ವಾಪರ ಯುಗದಲ್ಲಿ ವಾಸ್ತುಶಿಲ್ಪಿ ವಿಶ್ವಕರ್ಮ ರಚಿಸಿದ್ದು, ಕೃಷ್ಣನ ಮಡದಿ ರುಕ್ಮಿಣಿ ಇದನ್ನು ಪೂಜಿಸಿದ್ದಳು ಎನ್ನಲಾಗುತ್ತದೆ. ಮಧ್ವಾಚಾರ್ಯರು ಒಂದು ದಿನ ವಡಭಾಂಡೇಶ್ವರ ಸಮುದ್ರ ತೀರದಲ್ಲಿ ಪ್ರಾರ್ಥನೆ ಮಾಡುತ್ತಿದ್ದಾಗ ಅಪಾಯದಲ್ಲಿದ್ದ ಹಡಗೊಂದನ್ನು ತಮ್ಮ ದೈವಿಕ ಶಕ್ತಿಯಿಂದ ರಕ್ಷಿಸಿದರು. ಆ ಹಡಗಿನಲ್ಲಿದ್ದ ಗೋಪೀಚಂದನದ ಮಣ್ಣಿನ ಮುದ್ದೆಯೊಳಗೆ ಮುಚ್ಚಿದ್ದ ಕೃಷ್ಣನ ವಿಗ್ರಹವನ್ನು ತಂದು ಅವರು ಉಡುಪಿಯಲ್ಲಿ ಶಾಸ್ತ್ರೋಕ್ತವಾಗಿ ಪ್ರತಿಷ್ಠಾಪನೆ ಮಾಡಿದರು. ಇಲ್ಲಿನ ವಿಗ್ರಹ ಪಶ್ಚಿಮ ದಿಕ್ಕಿಗೆ ತಿರುಗಿರುವುದರ ಹಿಂದೆಯೂ ಒಂದು ಕಥೆ ಇದೆ. 16ನೇ ಶತಮಾನದಲ್ಲಿ ಕೃಷ್ಣ ಭಕ್ತರಾಗಿದ್ದ ಕನಕದಾಸರು ಇಲ್ಲಿಗೆ ಬಂದಾಗ ಅವರಿಗೆ ದೇವಾಲಯದೊಳಗೆ ಪ್ರವೇಶವನ್ನು ನಿರಾಕರಿಸಲಾಗಿತ್ತು. ಅವರು ಭಕ್ತಿಯಿಂದ ದೇವರನ್ನು ಪ್ರಾರ್ಥಿಸಿದಾಗ ಗೋಡೆ ಬಿರುಕು ಬಿಟ್ಟು ಪೂರ್ವಕ್ಕೆ ಪ್ರತಿಷ್ಠಾಪಿಸಲಾಗಿದ್ದ ಕೃಷ್ಣನ ವಿಗ್ರಹ ಪಶ್ಚಿಮಕ್ಕೆ ತಿರುಗಿತ್ತು. ಈ ಮೂಲಕ ಅವರಿಗೆ ದೇವರ ದರ್ಶನವಾಯಿತು. ಬಳಿಕ ಇಲ್ಲಿ ರಚಿಸಲಾದ ಕಿಂಡಿಗೆ ಕನಕನ ಕಿಂಡಿ ಎಂದೇ ಕರೆಯಲಾಯಿತು. ಇವತ್ತಿಗೂ ಇಲ್ಲಿಗೆ ಬರುವ ಭಕ್ತರು ಇದರ ಮೂಲಕವೇ ದೇವರನ್ನು ಕಾಣುತ್ತಾರೆ.



### ವಿಟ್ಲ ಪಿಂಡಿ ಉತ್ಸವ

ಭಾದ್ರಪದ ಕೃಷ್ಣ ಪಕ್ಷದ ಅಷ್ಟಮಿ ತಿಥಿ ಮತ್ತು ರೋಹಿಣಿ ನಕ್ಷತ್ರದ ಮಧ್ಯರಾತ್ರಿಯಲ್ಲಿ ಶ್ರೀಕೃಷ್ಣ ಅವತರಿಸಿದ್ದು, ಉಡುಪಿಯಲ್ಲಿ ಸೌರಮಾನ ಪದ್ಧತಿಗೆ ಅನುಗಣವಾಗಿ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಆಚರಿಸಲಾಗುತ್ತದೆ. ಈ ಬಾರಿ ಸೆಪ್ಟೆಂಬರ್ 4ರಂದು ಜನ್ಮಾಷ್ಟಮಿ ಮತ್ತು 5 ರಂದು ವಿಟ್ಲ ಪಿಂಡಿ ಉತ್ಸವ ನಡೆಯಲಿದೆ. ಸೆ. 4ರಂದು ಬೆಳಗ್ಗೆಯಿಂದಲೇ ಕೃಷ್ಣನಿಗೆ ವಿವಿಧ ಪೂಜೆ, ರಾತ್ರಿ ಅರ್ಘ್ಯ ಪ್ರಧಾನ ನಡೆದು ಬಳಿಕ ಮರುದಿನ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ.

ಜನ್ಮಾಷ್ಟಮಿ ಪ್ರಯುಕ್ತ ಶ್ರೀಕೃಷ್ಣ ಮಠದ ರಥಬೀದಿ ಸಹಿತ ನಗರದಲ್ಲಿ ಹೂ, ವಿದ್ಯುದ್ದೀಪಾಲಂಕಾರ ಮಾಡಲಾಗಿದೆ. ಈ ಬಾರಿ ಪರ್ಯಾಯ ಮಠಾಧೀಶರಾದ ಶ್ರೀ ವೇದವರ್ಧನ ತೀರ್ಥರಿಂದ ಎಲ್ಲಾ ಧಾರ್ಮಿಕ ವಿಧಿವಿಧಾನಗಳು ನಡೆಯಲಿದೆ. ಏಕಾದಶಿಯಂತೆ ನಿರ್ಜಲ ವ್ರತ ಮಾಡಿ ಅವರು ಕೃಷ್ಣನನ್ನು ಪೂಜಿಸುವರು. ರಾತ್ರಿ ಅರ್ಚನೆ, ಮಹಾ ಪೂಜೆ ನಡೆಸಿ ಲಡ್ಡುಗಳನ್ನು ಅರ್ಪಿಸುವರು. ವಿಟ್ಲ ಪಿಂಡಿಯಂದು ಲೀಲೋತ್ಸವದಲ್ಲಿ ಮೃಣ್ಮಯ ಮೂರ್ತಿಯ ಮೆರವಣಿಗೆಯನ್ನು ನೋಡುವುದೇ ಕಣ್ಣಿಗೆ ಹಬ್ಬ. ಈ ಬಾರಿ ಸಾಂಪ್ರದಾಯಿಕ ವಿಟ್ಲಪಿಂಡಿ ಉತ್ಸವದಲ್ಲಿ ಮಲ್ಲಯುದ್ಧ ವಿಶೇಷ ಆಕರ್ಷಣೆಯಾಗಿದೆ. ಚಿನ್ನದ ರಥದಲ್ಲಿ ಶ್ರೀಕೃಷ್ಣನ ಮೃಣ್ಮಯ ವಿಗ್ರಹದ ಮೆರವಣಿಗೆ ನಡೆಯಲಿದ್ದು, ಈ ಸಂದರ್ಭದಲ್ಲಿ ಮಲ್ಲಯುದ್ಧ ಪ್ರದರ್ಶನಗೊಳ್ಳಲಿದೆ.

ದೂರದೂರುಗಳಿಂದ ಬರುವ ಭಕ್ತರಿಗೆ ಅನ್ನಸಂತರ್ಪಣೆ ನಡೆಯಲಿದ್ದು, ಇದರೊಂದಿಗೆ ವಿಶೇಷ ಖಾದ್ಯಗಳ ಪ್ರಸಾದ ವಿತರಣೆ ಮಾಡಲಾಗುತ್ತದೆ. ಸುಮಾರು ಒಂದೂವರೆ ಲಕ್ಷ ಚಕ್ಕುಲಿ, ತಲಾ 30 ಸಾವಿರದಷ್ಟು ಐದು ಬಗೆಯ ವಿವಿಧ ಉಂಡೆಗಳನ್ನು ಭಕ್ತರಿಗೆ ವಿತರಿಸಲಾಗುತ್ತದೆ.ರಾಜಾಂಗಣದಲ್ಲಿ ಕೃಷ್ಣ ವೇಷ ಸ್ಪರ್ಧೆ, ಹುಲಿ ವೇಷ ಕುಣಿತ ಸೇರಿದಂತೆ ವಿವಿಧ ಸ್ಪರ್ಧೆ, ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ. ಸೆ. 6ರಂದು ದೇವರಿಗೆ ಕೋಟಿ ತುಳಸಿ ಅರ್ಚನೆ, ಶ್ರೀಕೃಷ್ಣ ಜನ್ಮಾಷ್ಟಮಿ ಸಂಭ್ರಮದ ಸಮಾರೋಪ ಸಮಾರಂಭದಲ್ಲಿ ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಣೆ ನಡೆಯಲಿದೆ.

# ಕಾಡುಪ್ರಾಣಿಗಳಿಂದ ಬೆಳೆ ರಕ್ಷಿಸಿ

## ಕಬ್ಬಿಗೆ ದರ ನಿಗದಿಪಡಿಸಿ, ರೈತರ ಹೊಲಗಳಿಗೆ ತಂತಿಬೇಲಿ ಅಳವಡಿಸಿ: ಮನವಿ

**ಬೀದರ್, ಸೆ. 4:** ಜಿಲ್ಲೆಯ ಕಬ್ಬು ಬೆಳೆಗಾರರಿಗೆ ಟನ್ ಕಬ್ಬಿಗೆ 4,000 ರೂ.ರಿಂದ 4,500 ರೂ. ದರ ನಿಗದಿಪಡಿಸಬೇಕು ಹಾಗೂ ಅರಣ್ಯ ಪ್ರದೇಶಗಳಿಂದ ಬರುವ ಕಾಡುಪ್ರಾಣಿಗಳ ಹಾವಳಿಯಿಂದ ಬೆಳೆಗಳನ್ನು ರಕ್ಷಿಸಲು ರೈತರ ಹೊಲಗಳಿಗೆ ತಂತಿಬೇಲಿ ಅಳವಡಿಸಬೇಕು ಎಂದು ಇಂದು ನಗರದ ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿವರೆಗೆ ಪ್ರತಿಭಟನೆ ನಡೆಸಿ ಆಮ್ ಆದ್ಮಿ ಪಕ್ಷದ ಮುಖಂಡರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಕಬ್ಬು ಬೆಳೆಗಾರರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಉತ್ಪಾದನಾ ವೆಚ್ಚ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಸೂಕ್ತ ಬೆಲೆ ನಿಗದಿಪಡಿಸುವುದು ಅಗತ್ಯವಾಗಿದೆ ಎಂದು ತಿಳಿಸಿದರು. ಪಂಜಾಬ್‌ನಲ್ಲಿ ಪ್ರತಿ ಟನ್‌ಗೆ 4,160 ರೂ. ದರ ನೀಡಲಾಗುತ್ತಿದೆ. ಅದೇ ರೀತಿ ಕರ್ನಾಟಕದಲ್ಲಿಯೂ ರೈತರಿಗೆ ನ್ಯಾಯಯುತ ದರ ನೀಡಬೇಕು ಎಂದು ಒತ್ತಾಯಿಸಿದರು.

ಬೀದರ್ ಜಿಲ್ಲೆಯ ಸುತ್ತಮುತ್ತ ಅರಣ್ಯ ಪ್ರದೇಶಗಳಿರುವುದರಿಂದ ಕಾಡುಪ್ರಾಣಿಗಳು ರೈತರ ಹೊಲಗಳಿಗೆ ನುಗ್ಗಿ ಬೆಳೆಗಳನ್ನು ನಾಶಪಡಿಸುತ್ತಿವೆ. ಇದರಿಂದ ರೈತರು ಆರ್ಥಿಕ ನಷ್ಟ ಅನುಭವಿಸುತ್ತಿದ್ದು, ಸರ್ಕಾರ ತಕ್ಷಣವೇ ರೈತರ ಹೊಲಗಳಿಗೆ ತಂತಿಬೇಲಿ ಅಳವಡಿಸಲು ವಿಶೇಷ ಯೋಜನೆ ರೂಪಿಸಬೇಕು ಎಂದು ಆಗ್ರಹಿಸಿದರು.

ಪಕ್ಷದ ಜಿಲ್ಲಾಧ್ಯಕ್ಷ ಸಿದ್ದು ಫೂಲಾರಿ, ಪ್ರಧಾನ ಕಾರ್ಯದರ್ಶಿ ಎಂಡಿ ಜಾವಿದ್, ನಗರ ಅಧ್ಯಕ್ಷ ರಾಜಶೇಖರ ಜಿ, ಜಿಲ್ಲಾ ಉಪಾಧ್ಯಕ್ಷ ರಾಜಕುಮಾರ ಎನ್. ಪಾಟೀಲ್, ನಂದಿ ಬಸವ ಪಾಟೀಲ್, ವೆಂಕಟೇಶ್ ಪಾಟೀಲ್, ಸೈಯದ್ ಜಮ್ಮಿಲ್, ಎಂಡಿ ಶರೀಫ್, ರಾಮು, ಓಂಕಾರ್, ವಿಠಲ್ ರಾವ್, ಮೋಹನ್ ಕುಮಾರ್, ಶಿವಕುಮಾರ್, ಕಂಠ್ಯಪ್ಪ ಗುಪ್ತ ಹಾಗೂ ಬಸವರಾಜ್ ಸ್ವಾಮಿ ಸೇರಿದಂತೆ ಇನ್ನಿತರರು ಇದ್ದರು.



ಬೀದರನ ಆಮ್ ಆದ್ಮಿ ಪಕ್ಷದ ಕಾರ್ಯಕರ್ತರ ನಿಯೋಗ ಜಿಲ್ಲಾಧಿಕಾರಿಗಳಿಗೆ ಭೇಟಿಯಾಗಿ ಕಬ್ಬಿಗೆ ದರ ನಿಗದಿಪಡಿಸುವುದು ಹಾಗೂ ಕಾಡು ಪ್ರಾಣಿಗಳಿಂದ ರೈತರ ಬೆಳೆ ರಕ್ಷಣೆಗೆ ಬೇಲಿ ಹಾಕುವಂತೆ ಮನವಿ ಸಲ್ಲಿಸಿದರು.

# ಬಳ್ಳಾರಿಯಲ್ಲಿ ಮೇರಿಮಾತೆಯ ಹುಟ್ಟುಹಬ್ಬ: ಗಣಿನಾಡಿನಲ್ಲಿ 8 ದಿನಗಳ ಸಂಭ್ರಮಾಚರಣೆ



**ಬಳ್ಳಾರಿ ಸೆ.04:** ಸ್ಥಳೀಯ ವಿದ್ಯಾನಗರದಲ್ಲಿರುವ ಮೇರಿ ಮಾತೆ ಚರ್ಚ್ ಆವರಣದಲ್ಲಿ ಇದೇ ಸೆಪ್ಟೆಂಬರ್ 3.ರಂದು ಮೇರಿ ಮಾತೆಯ ಹುಟ್ಟುಹಬ್ಬದ ಅಂಗವಾಗಿ ದಸರಾ ಹಬ್ಬದ ನವರಾತ್ರಿಯ ಮಾದರಿಯಲ್ಲಿ ಎಂಟು ದಿನಗಳ ಕಾಲ ವಿಶೇಷ ನವರಾತ್ರಿ ಜಾತ್ರೆಯ ಆಚರಣೆಯನ್ನು ಸಂಭ್ರಮದಿಂದ ಹಮ್ಮಿಕೊಳ್ಳಲಾಯಿತು.

ಈ ವಿಶೇಷ ನವರಾತ್ರಿ ಆಚರಣೆಯಲ್ಲಿ ನಾಲ್ಕನೇ ದಿನದ ಅಂಗವಾಗಿ ಬಳ್ಳಾರಿ ಮಹಾನಗರ ಪಾಲಿಕೆಯ ಮಾಜಿ ಮೇಯರ್, ಹಾಲಿ ಸದಸ್ಯೆ ಹಾಗೂ ಸಮಾಜ ಸೇವಕಿ ರಾಜೇಶ್ವರಿ ಸುಬ್ಬಾರಾಯುಡು ಅವರ ನೇತೃತ್ವದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ 10ನೇ ವರ್ಷದ ಅನ್ನದಾನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಭಕ್ತರು ಹಾಗು ಸಾರ್ವಜನಿಕರಿಗೆ ಅನ್ನಸಂತರ್ಪಣೆ ನೆರವೇರಿಸಲಾಯಿತು. ಮೇರಿ ಮಾತೆಯ ಹುಟ್ಟುಹಬ್ಬದ ಪ್ರಯುಕ್ತ ನಡೆಯುತ್ತಿರುವ ಈ ವಿಶೇಷ ನವರಾತ್ರಿ ಜಾತ್ರೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ವಿವಿಧ ಸಮಾಜಮುಖಿ ಕಾರ್ಯಕ್ರಮಗಳು ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಮೇಯರ್ ಹಾಲಿ ಸದಸ್ಯೆ ರಾಜೇಶ್ವರಿ ಸುಬ್ಬಾರಾಯುಡು ಅವರು, ಪ್ರತಿ ವರ್ಷ ಮೇರಿ ಮಾತೆಯ ಸೇವೆಯ ರೂಪದಲ್ಲಿ ಇಂತಹ ಅನ್ನದಾನ ಹಾಗೂ ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸಲು ಅವಕಾಶ ಸಿಗುತ್ತಿರುವುದು ನನ್ನ ಪೂರ್ವಜನ್ಮದ ಪುಣ್ಯ ಎಂದರು. ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮೇರಿ ಮಾತೆಯ ಆಶೀರ್ವಾದಕ್ಕೆ ಪಾತ್ರರಾಗಬೇಕು" ಎಂದು ಹೇಳಿದರು.

ಮೇರಿ ಮಾತೆಯ ನವರಾತ್ರಿ ಜಾತ್ರೆಯ ಆಚರಣೆಯ ಅಂಗವಾಗಿ ನಡೆಯುತ್ತಿರುವ ವಿವಿಧ ಕಾರ್ಯಕ್ರಮಗಳಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಅನ್ನದಾನ ಕಾರ್ಯಕ್ರಮ ಯಶಸ್ವಿಯಾಗಿಸಿದರು.

# ಪಿಡಿಓ. ಎಂ.ಕೆ. ಮಂಜುಳ ಶುಲ್ಕ ವಸೂಲಾತಿಯಲ್ಲಿ ತೋರಿದ ನಿರ್ಲಕ್ಷದ ಮೇಲೆ ಅಮಾನತುಗೊಳಿಸಿದ ಜಿಪಂ ಸಿಇಓ

**ಬಳ್ಳಾರಿ ಸೆ 04.** ತಾಲೂಕಿನ ಕಪ್ಪಗಲ್ಲು ಗ್ರಾಮ ಪಂಚಾಯ್ತಿ ಪಿಡಿಓ. ಎಂ.ಕೆ. ಮಂಜುಳ ಅವರು ಶುಲ್ಕ ವಸೂಲಾತಿಯಲ್ಲಿ ತೋರಿದ ನಿರ್ಲಕ್ಷದ ಮೇಲೆ ಜಿಪಂ ಸಿಇಓ ಅವರು ಅಮಾನತು ಮಾಡಿದ್ದಾರೆ.



ಸಾಮಾಜಿಕ ಹೋರಾಟಗಾರ ಬಿ. ಹನುಮಂತ ಅವರು ನೀಡಿದದೂರಿನ ಮೇಲೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಆ31 ರಂದು ಮಂಜುಳ ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.ಮಂಜುಳ ಅವರು ಸಂಗನಕಲ್ಲು ಗ್ರಾಮ ಪಂಚಾಯಿತಿ ಪಿಡಿಓ ಆಗಿದ್ದಾಗ ಆರ್ಥಿಕ ನಷ್ಟ ಉಂಟು ಮಾಡಿದ ಕರ್ತವಲೋಪ ಹಿನ್ನೆಲೆಯಲ್ಲಿ ಈ ಆದೇಶ ವಾಗಿದೆ.

ಪ್ರಕರಣ: ಮಂಜುಳ ಅವರು ಸಂಗನಕಲ್ಲಿನ ಸರ್ವೇ ನಂಬರ್ 177/2/321 ರಲ್ಲಿನ ,1.19 ಎಕರೆ ಸೇರಿದಂತೆ

ಒಟ್ಟಾರೆ 4.05 ಎಕರೆ ಜಮೀನಿನಲ್ಲಿ ಏಕ ವಸತಿ ನಿವೇಶನದಲ್ಲಿ ಹಲವು ವಿಲ್ಲಾಗಳಿಗೆ ಅನುಮತಿ ನೀಡಿದ್ದಾರೆ. ಇದಕ್ಕೆ ಕಾನೂನಿನ ಪ್ರಕಾರ 18 ಲಕ್ಷದ 44 ಸಾವಿರದ 67 ರೂಗಳನ್ನು ಪಾವ ತಿಸಿಕೊಳ್ಳದೆ. 15 ಲಕ್ಷದ 80 ಸಾವಿರ ರೂ ಮಾತ್ರ ಪಾವತಿಸಿಕೊಂಡು ಅನು ಮತಿ ನೀಡಿದ್ದಾರೆ.

ಇದರಿಂದಾಗಿ ಗ್ರಾಮ ಪಂಚಾಯ್ತಿಗೆ 2ಲಕ್ಷದ 64 ಸಾವಿರದ 67 ರೂ ನಷ್ಟ ಮಾಡಿದ್ದಾರೆ. ಅಷ್ಟೇ ಅಲ್ಲದೆ ಪ್ರಸ್ತಾಪಿತ ಕಟ್ಟಡಕ್ಕೆ ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೇ ಇದ್ದರೂ ಅನುಮತಿ ನೀಡಲಾಗಿದೆ ಎಂಬ ಆರೋಪ ಮಾಡಲಾಗಿತ್ತು. ಈ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು ಸಿಇಓ ಅವರ ಕಾರ್ಯಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

# ನಾರಾಯಣಗುರು ಆದರ್ಶಗಳು ಸಮಾಜಕ್ಕೆ ದಾರಿದೀಪ: ತಹಶೀಲ್ದಾರ್ ಸುರೇಶ ವರ್ಮಾ



ರಾಯಚೂರು, ಸೆ.4: ಜಾತಿ–ಭೇದ, ಅಸ್ಪೃಶ್ಯತೆ ಹಾಗೂ ಸಾಮಾಜಿಕ ಅಸಮಾನತೆ ವಿರುದ್ಧ ಹೋರಾಡಿ ಸಮಾನತೆ ಮತ್ತು ಸಾಮರಸ್ಯದ ಸಂದೇಶ ಸಾರಿದ ಬ್ರಹ್ಮಶ್ರೀ ನಾರಾಯಣಗುರುಗಳ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ತಹಶೀಲ್ದಾರ್ ಸುರೇಶ ವರ್ಮಾ ಅಭಿಪ್ರಾಯಪಟ್ಟರು.

ಇಲ್ಲಿನ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯರೆಲ್ಲರೂ ಒಂದೇ, ಎಲ್ಲರಿಗೂ ಒಬ್ಬರೇ ದೇವರು ಎಂಬ ನಾರಾಯಣಗುರುಗಳ ಚಿಂತನೆ ಸಮಾನತೆ, ಸಹಬಾಳ್ವೆ ಮತ್ತು ಮಾನವೀಯತೆಯ ಮಹತ್ವವನ್ನು ಸಾರುತ್ತದೆ. ಸಮಾಜದಲ್ಲಿ ಜಾತಿ ಆಧಾರಿತ ತಾರತಮ್ಯ ಹಾಗೂ ಅಸ್ಪೃಶ್ಯತೆ ತಾಂಡವವಾಡುತ್ತಿದ್ದ ಸಂದರ್ಭದಲ್ಲಿ ಶೋಷಿತ ಸಮುದಾಯಗಳಿಗೆ ಆತ್ಮವಿಶ್ವಾಸ ತುಂಬಿ, ಸಾಮಾಜಿಕ ಪರಿವರ್ತನೆಗೆ ನಾಂದಿ ಹಾಡಿದರು ಎಂದು ತಿಳಿಸಿದರು.

ದೇವಾಲಯಗಳ ಸ್ಥಾಪನೆಯ ಜೊತೆಗೆ ಶಿಕ್ಷಣ ಸಂಸ್ಥೆಗಳನ್ನು ಆರಂಭಿಸುವ ಮೂಲಕ ಶಿಕ್ಷಣವೇ ಸಮಾಜದ ಅಭಿವೃದ್ಧಿಗೆ ಪ್ರಮುಖ ಸಾಧನ ಎಂಬ ಸಂದೇಶ ನೀಡಿದರು. ಮಹಿಳೆಯರು ಸೇರಿದಂತೆ ಎಲ್ಲ ವರ್ಗದ ಜನರಿಗೆ ಸಮಾನ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ನಾರಾಯಣಗುರುಗಳು ಮಹತ್ವದ ಚಿಂತನೆಗಳನ್ನು ಸಮಾಜಕ್ಕೆ ನೀಡಿದ್ದರು. ಅವರ ಆದರ್ಶ, ತತ್ವ ಹಾಗೂ ಸಿದ್ಧಾಂತ ಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಮಕ್ಕಳಲ್ಲಿಯೂ ಈ ವಿಚಾರಗಳನ್ನು ಬೆಳೆಸುವ ಕೆಲಸ ಆಗಬೇಕು ಎಂದರು.

ವಕೀಲ ನಾಗರಾಜ ಎಸ್. ಮಾತನಾಡಿ, ಪ್ರತಿಯೊಬ್ಬರೂ ಶಿಕ್ಷಣವಂತರಾಗಬೇಕೆಂದು ಕನಸು ಕಂಡಿದ್ದ ನಾರಾಯಣ ಗುರುಗಳ ಆದರ್ಶ, ವಿಚಾರ ತತ್ವಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಮಹಾನಗರ ಪಾಲಿಕೆ ಉಪ ಆಯುಕ್ತ ಮುರಳೀಧರ ರಾವ್, ರಾಜು, ಹಿಂದುಳಿದ ಒಕ್ಕೂಟದ ಅಧ್ಯಕ್ಷ ಕೆ. ಶಾಂತಪ್ಪ, ಮುಖಂಡರಾದ ಚನ್ನಣ್ಣಗೌಡ, ಜಿ. ಶಿವಮೂರ್ತಿ, ತಿಮ್ಮಪ್ಪಗೌಡ, ಮಂಜುನಾಥ, ಎಂ. ನರಸಣ್ಣ ಗೌಡ, ನಾರಾಯಣ ರಾವ್, ರಾಮಕೃಷ್ಣ, ರಾಚಣ್ಣ ಗೌಡ, ಅಶೋಕ, ಪರಶುರಾಮ ಗೌಡ, ರಂಗನಾಥ, ಶ್ರೀನಿವಾಸಗೌಡ, ತಾಯಣ್ಣ, ಮಂಜುನಾಥ ಉಪಸ್ಥಿತರಿದ್ದರು.

ಇದಕ್ಕೂ ಮೊದಲು ನಗರದ ಮಹಿಳಾ ಸಮಾಜದ ಮುಂಭಾಗದ ಆರ್ಯ ಈಡಿಗ ಸಮಾಜದ ಕಾರ್ಯಾಲಯದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಭಾವಚಿತ್ರಕ್ಕೆ ವಿವಿಧ ಗಣ್ಯರಿಂದ ಪೂಜೆ ಸಲ್ಲಿಸಿ, ಮೆರವಣಿಗೆ ಚಾಲನೆ ನೀಡಲಾಯಿತು.

ಮೆರವಣಿಗೆಯು ಮಹಾನಗರ ಪಾಲಿಕೆ, ಅಂಬೇಡ್ಕರ್ ವೃತ್ತದ ಮಾರ್ಗವಾಗಿ ರಂಗಮಂದಿರಕ್ಕೆ ಬಂದು ಸೇರಿತು.

ಮುಖಂಡರಾದ ಕೆ.ಶಾಂತಪ್ಪ, ಜಿಂದಪ್ಪ, ನರಸಿಂಹಲು ಮಾಡಗಿರಿ, ರವಿ ಪಾಟೀಲ ಸೇರಿದಂತೆ ಸಮಾಜ ಮುಖಂಡರು ಹಾಗೂ ವಿವಿಧ ಮಠದ ಸ್ವಾಮೀಜಿಗಳು ಭಾಗವಹಿಸಿದ್ದರು.

# ಬರ ಪರಿಸ್ಥಿತಿ: ರೈತರು, ಕೃಷಿ ಕಾರ್ಮಿಕರು ತೀವ್ರ ಸಂಕಷ್ಟದಲ್ಲಿ ಬರ ಪರಿಹಾರಕ್ಕೆ AIKKMS ಆಗ್ರಹ

ಬಳ್ಳಾರಿ, ಸೆ.4: ಬಳ್ಳಾರಿ ಜಿಲ್ಲೆಯಲ್ಲಿ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯಿಂದ ರೈತರು ಮತ್ತು ಗ್ರಾಮೀಣ ಕೃಷಿ ಕಾರ್ಮಿಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಸರ್ಕಾರ ಕೂಡಲೇ ಬರ ಪರಿಹಾರ ಕಾಮಗಾರಿಗಳನ್ನು ಪ್ರಾರಂಭಿಸಬೇಕು ಎಂದು ಅಖಿಲ ಭಾರತ ರೈತ ಕೃಷಿ ಕಾರ್ಮಿಕರ ಸಂಘಟನೆ ಬಳ್ಳಾರಿ ಜಿಲ್ಲಾ ಸಮಿತಿ ಆಗ್ರಹಿಸಿದೆ. ಈ ಕುರಿತು ಶುಕ್ರವಾರ ಮನವಿ ಸಲ್ಲಿಸಿರುವ AIKKMS, ಕೃಷಿ ಚಟುವಟಿಕೆಗಳು ಕುಂಠಿತಗೊಂಡಿರುವುದರಿಂದ ಗ್ರಾಮೀಣ ಜನರಿಗೆ ಉದ್ಯೋಗದ ಅವಕಾಶಗಳು ಕಡಿಮೆಯಾಗಿವೆ. ಇದರಿಂದ ಕುಟುಂಬಗಳ ಜೀವನ ನಿರ್ವಹಣೆ ಕಷ್ಟಕರವಾಗಿದ್ದು, ಉದ್ಯೋಗಕ್ಕಾಗಿ ಗ್ರಾಮೀಣ ಜನರು ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದೆ.

ಬಳ್ಳಾರಿ ಜಿಲ್ಲೆಯ ಬರಪೀಡಿತ ಪ್ರದೇಶಗಳಲ್ಲಿ ಬರ ಪರಿಹಾರ ಕಾಮಗಾರಿಗಳನ್ನು ತಕ್ಷಣ ಪ್ರಾರಂಭಿಸಿ, ಕೆಲಸದ ದಿನಗಳನ್ನು ಹೆಚ್ಚಿಸಬೇಕು. ಗ್ರಾಮೀಣ ಕುಟುಂಬಗಳಿಗೆ ನಿರಂತರ ಉದ್ಯೋಗ ಒದಗಿಸಬೇಕು ಹಾಗೂ ಕೂಲಿ ಹಣವನ್ನು ಯಾವುದೇ ವಿಳಂಬವಿಲ್ಲದೆ ಪಾವತಿಸಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಅಲ್ಲದೆ, ಎಲ್ಲ ರೈತರ ಎಲ್ಲಾ ಬ್ಯಾಂಕ್ ಸಾಲಗಳನ್ನು ಮನ್ನಾ ಮಾಡಬೇಕು, ಸಿರುಗುಪ್ಪ ತಾಲೂಕನ್ನು ಕೂಡಲೇ ಬರಪೀಡಿತ ತಾಲೂಕು ಎಂದು ಘೋಷಿಸಬೇಕು ಹಾಗೂ ಬರದಿಂದ ಹಾನಿಗೊಳಗಾದ ರೈತರಿಗೆ ಬೆಳೆ ನಷ್ಟ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದೆ.




ಕುಡಿಯುವ ನೀರಿನ ಸಮಸ್ಯೆ ನಿವಾರಣೆ, ಜಾನುವಾರುಗಳಿಗೆ ಸಮರ್ಪಕ ಮೇವು ಪೂರೈಕೆ ಸೇರಿದಂತೆ ಅಗತ್ಯ ಪರಿಹಾರ ಕ್ರಮಗಳನ್ನು ತುರ್ತಾಗಿ ಕೈಗೊಳ್ಳಬೇಕು. ಗ್ರಾಮೀಣ ಜನರ ವಲಸೆ ತಡೆಯಲು ಸ್ಥಳೀಯವಾಗಿಯೇ ನಿರಂತರ ಉದ್ಯೋಗ ಕಲ್ಪಿಸಬೇಕು ಎಂದು AIKKMS ಮನವಿಯಲ್ಲಿ ತಿಳಿಸಿದೆ.

ಸರ್ಕಾರ ಈ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ ಯಾವುದೇ ವಿಳಂಬವಿಲ್ಲದೆ ಬರ ಪರಿಹಾರ ಕಾಮಗಾರಿಗಳನ್ನು ಆರಂಭಿಸಿ, ರೈತರು ಹಾಗೂ ಗ್ರಾಮೀಣ ಕೃಷಿ ಕಾರ್ಮಿಕರಿಗೆ ಅಗತ್ಯ ನೆರವು ಒದಗಿಸಬೇಕು ಎಂದು **AIKKMS** ಬಳ್ಳಾರಿ ಜಿಲ್ಲಾ ಸಮಿತಿ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಅಧ್ಯಕ್ಷ ಗೋವಿಂದ್, ಜಿಲ್ಲಾ ಕಾರ್ಯದರ್ಶಿ ಗೊರಳ್ಳಿ ರಾಜ ಜಿಲ್ಲಾ ಸಮಿತಿ ಸದಸ್ಯರಾದ ಹೊನ್ನೂರಪ್ಪ ಧನರಾಜ್ ಮತ್ತು ಸದಸ್ಯರಾದ ಶೇಖರ್ ಸಿದ್ದಲಿಂಗ ಚಂದ್ರು ದಸ್ತಗಿರಿ ರೈತರಾದ ಮಲ್ಲಿಕಾರ್ಜುನ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸತ್ಯಕ್ಕೆ ದೊರೆತ ಜಯ, ನಾಲ್ಕು ವರ್ಷಗಳ ಸುದೀರ್ಘ ವಿಚಾರಣೆ, ನ್ಯಾಯಾಲಯದಿಂದ ಮಹತ್ವದ ತೀರ್ಪು

**ಬಳ್ಳಾರಿ ಸೆ.4:** ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಬಳ್ಳಾರಿ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಗೋಪಾಲ ಕೃಷ್ಣ ಅಧೀಕ್ಷಕರು ವಿರುದ್ಧದ, 3.ಕೋಟಿಗೂ ಹೆಚ್ಚು ಭ್ರಷ್ಟಾಚಾರದ ಆರೋಪಗಳು ಕುರಿತು ದೂರು ಕೊಡಲಾಗಿತ್ತು.

ಇದಕ್ಕೆ ಗೋಪಾಲಕೃಷ್ಣ ಸುಳ್ಳು ಪ್ರಕರಣ ದಾಖಲಿಸಲಾಗಿದ್ದ ಸುಳ್ಳು ಪ್ರಕರಣವನ್ನು ನ್ಯಾಯಾಲಯ ನಾಲ್ಕು ವರ್ಷಗಳ ಕಾಲ ಸುಧೀರ್ಘ ವಿಚಾರಣೆ ನಡೆಸಲಾಗಿತ್ತು.


ಕೊನೆಗೆ ಕುಲಾಸ್ ಆಗಿದೆ, ಸತ್ಯಕ್ಕೆ ದೊರೆತ ಜಯವಾಗಿದೆ. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬಳ್ಳಾರಿ ವಿಭಾಗದಲ್ಲಿ ಅಧೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಗೋಪಾಲ ಕೃಷ್ಣ ಅವರ ವಿರುದ್ಧ ಭ್ರಷ್ಟಾಚಾರ ಹಾಗೂ ಕರ್ತವ್ಯ ದುರುಪಯೋಗಕ್ಕೆ ಸಂಬಂಧಿಸಿದಂತೆ ಈಶ್ವರಯ್ಯ,

ಮತ್ತು ಬಳ್ಳಾರಿ ನಿವಾಸಿ ಕೆ.ಬಜಾರಪ್ಪ ಹಿರಿಯ ಪತ್ರಕರ್ತರು ಅವರು ಸಂಬಂಧಪಟ್ಟ ಪ್ರಾಧಿಕಾರಗಳಿಗೆ ದೂರುಗಳನ್ನು ಸಲ್ಲಿಸಿದ್ದರು.

ಈ ದೂರುಗಳ ಹಿನ್ನೆಲೆಯಲ್ಲಿ ಈಶ್ವರಯ್ಯ,ಬಜಾರಪ್ಪನವರ ಮೇಲೆ ಒತ್ತಡ ಹೇರುವ ಹಾಗೂ ಭಯಭೀತರನ್ನಾಗಿಸುವ ಉದ್ದೇಶದಿಂದ ಗೋಪಾಲ ಕೃಷ್ಣ ಅವರು, ಒಬ್ಬರಿಗೆ ಒಬ್ಬರು ಸಂಬಂದ ಇಲ್ಲದಿದ್ದರೂ ನಾವು ಅವರನ್ನು ಹೆದರಿಸಿ ಹಣಕ್ಕಾಗಿ, ಪ್ರಯತ್ನಿಸಿದ್ದೇವು ಎಂದು ಆರೋಪಿಸಿ, ಗೋಪಾಲಕೃಷ್ಣ 12/12/2023 ರಂದು ಕೌಲ್ ಬಜಾರ್ ಪೊಲೀಸ್ ಠಾಣೆ ದೂರು ದಾಖಲಿಸಿದ್ದರು.

ಭ್ರಷ್ಟಾಚಾರವನ್ನು ಬೆಳಕಿಗೆ ತರುವ ನಿಟ್ಟಿನಲ್ಲಿ ಸರ್ಕಾರಕ್ಕೆ ನಷ್ಟ ಆಗದಂತೆ ನೇರ ನಿರಂತರವಾಗಿ ಪತ್ರಿಕಾ ಮಾಧ್ಯಮದಲ್ಲಿ 17 ವರ್ಷದಿಂದ ಸೇವೆ ಸಲ್ಲಿಸುತ್ತಿರುವ ಕೆ ಬಜಾರಪ್ಪ ಸುವರ್ಣ ಟೈಮ್ಸ್ ಆಫ್ ಕರ್ನಾಟಕ, ಗಡಿ ಕನ್ನಡಿಗ, ವರದಿಗಾರರಾಗಿದ್ದು ಜಿಲ್ಲಾ ಪತ್ರಕರ್ತರ ಸಂಘದಲ್ಲಿ ಉಪಾಧ್ಯಕ್ಷರಾಗಿದ್ದು, ಇಂಥವರ ಮೇಲೆ ಸುಳ್ಳು ಪ್ರಕರಣ ದಾಖಲು ಮಾಡಿ ಹೆದರಿಸಿ ಭ್ರಷ್ಟಾಚಾರ ಮಾಡಲು ಅನುಕೂಲ ಮಾಡಿಕೊಳ್ಳುವ ಗೋಪಾಲಕೃಷ್ಣಗೆ ನ್ಯಾಯಾಲಯದಲ್ಲಿ ಹಿನ್ನಡೆಯಾಗಿದೆ.




ಗೋಪಾಲಕೃಷ್ಣ ಅವರು ಸರ್ಕಾರಿ ನೌಕರನಾಗಿದ್ದು "ತನ್ನ ಹೆಂಡತಿ ಹೆಸರಿನಲ್ಲಿ ಮತ್ತು ತಮ್ಮ ಸಂಬಂಧಿಗಳ ಹೆಸರಿನಲ್ಲಿ ಗುತ್ತಿಗೆ ಕಾಮಗಾರಿಗಳನ್ನು ಪಡೆದು" ಸರ್ಕಾರಕ್ಕೆ ವಂಚನೆ ಮಾಡುತ್ತಿರುವ ಅಧಿಕಾರಿ ಅನ್ನುವ ಆರೋಪ ಆಗಿದೆ.

ಈ ಪ್ರಕರಣವು ಮಾನ್ಯ 2ನೇ ಹೆಚ್ಚುವರಿ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ CC No.567/2025 ಆಗಿ ವಿಚಾರಣೆಗೆ ಬಂದಿದ್ದು ಈಶ್ವರಯ್ಯ ಮತ್ತು ಬಜಾರಪ್ಪ ಅವರ ಪರವಾಗಿ, ಆರ್. ಮಲ್ಲಿಕಾರ್ಜುನ ಗೌಡ ವಾದವನ್ನು ಮಂಡಿಸಿದ್ದರು.

ಸುಧೀರ್ಘ ವಿಚಾರಣೆಯ ನಂತರ 01/09/2026ರಂದು ಮಾನ್ಯ ನ್ಯಾಯಾಲಯವು ಸದರಿ ದೂರಿಗೆ ಸಂಬಂಧಿಸಿದ ಅರ್ಜಿಯನ್ನು "ವಜಾಗೊಳಿಸಿ" ಆದೇಶ ಮಾಡಲಾಯಿತು. ನ್ಯಾಯಾಂಗದ ಮೇಲೆ ಸಾರ್ವಜನಿಕರಿಗೆ ವಿಶ್ವಾಸವನ್ನು ಹೆಚ್ಚಿಸಿದೆ.

ಈ ಹಿಂದೆ ಸಹ ಸದರಿಯವರು ಜಾತಿ ನಿಂದನೆ ದೂರನ್ನು ಈಶ್ವರಯ್ಯ ಮತ್ತು ಇತರರ ಮೇಲೆ ದೂರನ್ನು ನೀಡಲು ಪ್ರಯತ್ನಿಸಿದ್ದರು, ಆದರೆ ಗ್ರಾಮೀಣ ಠಾಣೆ ಅಧಿಕಾರಿಗಳು ವಿಚಾರಣೆ ನಡಿಸಿ ಸುಳ್ಳು ದೂರು ಎಂದು ಹಿಂಬರಹ ನೀಡಿದ್ದರು.

ಭ್ರಷ್ಟಾಚಾರ ಹಾಗೂ ಕರ್ತವ್ಯ ದುರುಪಯೋಗ ಮಾಡುವರು ಮೊದಲು ಮಾಡುವದು ಸುಳ್ಳು ದೂರು ನೀಡುವದು ಆಗಿದೆ.

ಈ ಬೆಳವಣಿಗೆಯಿಂದ ನಮ್ಮ ವಿರುದ್ಧ ಮಾಡಲಾಗಿದ್ದ ಆರೋಪಗಳ ಕುರಿತು ನ್ಯಾಯಾಂಗ ಪ್ರಕ್ರಿಯೆಯಲ್ಲಿ ಮಹತ್ವದ ಬೆಳವಣಿಗೆ ಸಂಭವಿಸಿದೆ.

ಇದರ ಜೊತೆಗೆ ಗೋಪಾಲ ಕೃಷ್ಣ ಅವರ ವಿರುದ್ಧ ಮಂಡಳಿಯಲ್ಲಿನ ಖರೀದಿ ಮತ್ತು ಪೂರೈಕೆ ಪ್ರಕ್ರಿಯೆಗಳಲ್ಲಿ ಅಕ್ರಮ ಹಾಗೂ ಸರ್ಕಾರದ ಹಣದ ದುರುಪಯೋಗ ನಡೆದಿದೆ ಎಂಬ ಆರೋಪಗಳ ಕುರಿತು ಕೆ. ಬಜಾರಪ್ಪ ಅವರು 2023ರಲ್ಲಿ ನಾವು 2024ರಲ್ಲಿ ಮಾನ್ಯ ಲೋಕಾಯುಕ್ತ ಸಂಸ್ಥೆಗೆ ಪ್ರತ್ಯೇಕ ದೂರುಗಳನ್ನು ಸಲ್ಲಿಸಿದ್ದೇವೆ.

ಈ ದೂರುಗಳಲ್ಲಿ, ಗೋಪಾಲ ಕೃಷ್ಣ ಅವರು ತಮ್ಮ ಸಂಬಂಧಿಕರ ಹೆಸರಿನಲ್ಲಿ ಹಾಗೂ ನಂತರ ತಮ್ಮ ಪತ್ನಿಯ ಹೆಸರಿನಲ್ಲಿ ಸಂಬಂಧಿತ ಸಂಸ್ಥೆಗಳ ಮೂಲಕ ಮಂಡಳಿಗೆ ಕಖಅ ಪೌಡರ್, ಬ್ಲೀಚಿಂಗ್ ಪೌಡರ್, ಕ್ಲೋರಿನ್ ಸೇರಿದಂತೆ ವಿವಿಧ ರಾಸಾಯನಿಕಗಳ ಪೂರೈಕೆ ಆದೇಶಗಳನ್ನು ನೀಡಿಸಿ, ಸುಮಾರು 3 ಕೋಟಿಗೂ ಅಧಿಕ ಮೊತ್ತದ ವಹಿವಾಟು/ಸರ್ಕಾರಿ ಹಣದ ದುರುಪಯೋಗ ನಡೆದಿದೆ ಎಂಬ ಗಂಭೀರ ಆರೋಪಗಳನ್ನು ಮಾಡಲಾಗಿದೆ.

ಅದೇ ರೀತಿ, ಸರ್ಕಾರಿ ಸೇವಾ ನಿಯಮಗಳ ಪ್ರಕಾರ ಸುಮಾರು 10 ಲಕ್ಷ ವೆಚ್ಚದಲ್ಲಿ ಮನೆ ನಿರ್ಮಾಣಕ್ಕೆ ಅನುಮತಿ ಪಡೆದಿದ್ದರೂ, ಸುಮಾರು 1.5 ಕೋಟಿ ಮೌಲ್ಯದ ಮನೆ ನಿರ್ಮಿಸಲಾಗಿದೆ ಹಾಗೂ ಪ್ರತಿ ತಿಂಗಳು ಸುಮಾರು 50,000 ಮೊತ್ತದ ಕೋಟಾ/ಬಿಲ್ಲುಗಳಿಗೆ ಸಂಬಂಧಿಸಿದಂತೆ ಅಕ್ರಮವಾಗಿ ಹಣ ಪಡೆಯಲಾಗಿದೆ,ಎಂಬ ಆರೋಪಗಳನ್ನೂ ಲೋಕಾಯುಕ್ತರಿಗೆ ಸಲ್ಲಿಸಿರುವ ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಠಾಣೆಗಳು ಕೂಡ ಸುಳ್ಳು ಪ್ರಕರಣಗಳು ದಾಖಲೆ ಮಾಡಿದರೆ ನ್ಯಾಯಾಲಯದ ತೀರ್ಪುಗಳು, ಜನರಿಗೆ ನಂಬಿಕೆ, ಶಕ್ತಿ ತುಂಬಿಸಿದೆ. ಈ ಮೇಲಿನ ಎಲ್ಲಾ ಆರೋಪಗಳು ತನಿಖೆಗೆ ಒಳಪಡಬೇಕಾದ ಗಂಭೀರ ಆರೋಪಗಳಾಗಿದ್ದು, ಅವುಗಳ ಸತ್ಯತೆ ಸಂಬಂಧಪಟ್ಟ ತನಿಖಾ ಸಂಸ್ಥೆಯಿಂದ ಸಮಗ್ರವಾಗಿ ಪರಿಶೀಲನೆಗೊಳಪಡಬೇಕಾಗಿದೆ. ನಾವು ಈ ಅಕ್ರಮಗಳ ಕುರಿತು ಸಂಬಂಧಪಟ್ಟ ಪ್ರಾಧಿಕಾರಗಳಿಗೆ ದೂರು ನೀಡಿದ ನಂತರವೇ ನಮ್ಮ ವಿರುದ್ಧ ಪೊಲೀಸ್ ಪ್ರಕರಣ ದಾಖಲಿಸಿರುವುದರಿಂದ ದೂರುದಾರರ ಮೇಲಿನ ಒತ್ತಡ, ಅಧಿಕಾರದ ಪ್ರಭಾವ ಮತ್ತು ಭಯಭೀತಗೊಳಿಸುವ ಪ್ರಯತ್ನ ನಡೆದಿದೆಯೇ ಎಂಬುದನ್ನೂ ಸಂಬಂಧಪಟ್ಟ ತನಿಖಾ ಸಂಸ್ಥೆಗಳು ಪರಿಶೀಲಿಸಬೇಕು ಎಂಬುದು ನಮ್ಮ ಪ್ರಮುಖ ಮನವಿಯಾಗಿದೆ.

ಪ್ರಸ್ತುತ ಗೋಪಾಲ ಕೃಷ್ಣ ಅವರನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರು ಅವರನ್ನು ಕಾರವಾರಗೆ ವರ್ಗಾವಣೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಆದರೇ ಗಂಭೀರ ಭ್ರಷ್ಟಾಚಾರದ ಆರೋಪಗಳಿರುವ ಸಂದರ್ಭದಲ್ಲಿ ಕೇವಲ ವರ್ಗಾವಣೆ ಕ್ರಮ ಕೈಗೊಳ್ಳುವುದೇ ಸಾಕಾಗುವುದೇ? ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ.

ಸಾರ್ವಜನಿಕ ಹಣಕ್ಕೆ ಸಂಬಂಧಿಸಿದ ಆರೋಪಗಳಾಗಿರುವುದರಿಂದ, ಈ ಪ್ರಕರಣದಲ್ಲಿ ಸ್ವತಂತ್ರ, ನಿಷ್ಪಕ್ಷಪಾತ ಹಾಗೂ ಕಾಲಮಿತಿಯ ತನಿಖೆ ನಡೆಯಬೇಕಾಗಿದೆ.

ವಿಶೇಷವಾಗಿ, ನಮ್ಮ ವಿರುದ್ಧ ದಾಖಲಿಸಲಾಗಿದ್ದ ಪ್ರಕರಣದ ನ್ಯಾಯಾಲಯದ ಬೆಳವಣಿಗೆಯ ಹಿನ್ನೆಲೆಯಲ್ಲಿ, ನಾವು ಸಲ್ಲಿಸಿರುವ ಲೋಕಾಯುಕ್ತ ದೂರುಗಳನ್ನೂ ತ್ವರಿತವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸುತ್ತೇವೆ.

ಆದ್ದರಿಂದ, ಮಾನ್ಯ ಲೋಕಾಯುಕ್ತ ಸಂಸ್ಥೆಯು ಮೇಲ್ಕಂಡ ಎರಡೂ ದೂರುಗಳನ್ನು ಗರಿಷ್ಠ ಮೂರು ತಿಂಗಳೊಳಗೆ ಸಮಗ್ರವಾಗಿ ಪರಿಶೀಲಿಸಿ/ತನಿಖೆ ಪೂರ್ಣಗೊಳಿಸಿ, ಸತ್ಯತೆಯನ್ನು ಬಹಿರಂಗಪಡಿಸುವ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕು.

ತನಿಖೆಯಲ್ಲಿ ಆರೋಪಗಳು ಸಾಬೀತಾದಲ್ಲಿ ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಕರ್ನಾಟಕ ನಾಗರಿಕ ಸೇವಾ ನಿಯಮಗಳು ಹಾಗೂ ಅನ್ವಯವಾಗುವ ಕಾನೂನುಗಳ ಪ್ರಕಾರ ಕಠಿಣ ಶಿಸ್ತು ಕ್ರಮ, ಅಗತ್ಯವಿದ್ದಲ್ಲಿ ವಜಾ ಸೇರಿದಂತೆ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕೆಂದು ರಾಜ್ಯ ಸರ್ಕಾರವನ್ನು ಪತ್ರಿಕೆ ಮತ್ತು ಮಾಧ್ಯಮಗಳ ಮೂಲಕ ಒತ್ತಾಯಿಸುತ್ತೇನೆ.

ನಮ್ಮ ಉದ್ದೇಶ ಯಾವುದೇ ವ್ಯಕ್ತಿಯನ್ನು ವೈಯಕ್ತಿಕವಾಗಿ ಗುರಿಯಾಗಿಸುವುದಲ್ಲ. ಸಾರ್ವಜನಿಕ ಹಣದ ರಕ್ಷಣೆ, ಸರ್ಕಾರಿ ಸಂಸ್ಥೆಗಳಲ್ಲಿ ಪಾರದರ್ಶಕತೆ ಮತ್ತು ಭ್ರಷ್ಟಾಚಾರಕ್ಕೆ ಕಡಿವಾಣ ಹಾಕುವುದು ನಮ್ಮ ಉದ್ದೇಶವಾಗಿದೆ.

'ಸತ್ಯಕ್ಕೆ ಜಯ – ಭ್ರಷ್ಟಾಚಾರಕ್ಕೆ ಅಂತ್ಯ' ಎಂಬ ನಂಬಿಕೆಯಿಂದ, ಈ ಪ್ರಕರಣದಲ್ಲಿ ನಿಷ್ಪಕ್ಷಪಾತ ತನಿಖೆ ನಡೆಯಬೇಕು ಮತ್ತು ಸತ್ಯ ಹೊರಬರಬೇಕು ಎಂದು ಸರ್ಕಾರ ಹಾಗೂ ಲೋಕಾಯುಕ್ತ ಸಂಸ್ಥೆಯನ್ನು ವಿನಂತಿಸುತ್ತೇನೆ ಎಂದು ಜೆ. ಈಶ್ವರಯ್ಯ, 9448094195. ಪತ್ರಿಕಾ ಹೇಳಿಕೆ ನೀಡಿದ್ದಾರೆ.

# ಹಿಮಾಚಲದ 9 ಸರೋವರಗಳು ಅತ್ಯಂತ ಅಪಾಯಕಾರಿ

**ಶಿಮ್ಲಾ,ಸೆ.4:** ಹವಮಾನ ಬದಲಾವಣೆ ಹಾಗೂ ತಾಪಮಾನ ಏರಿಕೆಯಿಂದ ಹಿಮನದಿಗಳು ವೇಗವಾಗಿ ಕರಗುತ್ತಿರುವ ಪರಿಣಾಮ ಹಿಮಾಚಲ ಪ್ರದೇಶದಲ್ಲಿ ಹಿಮನದಿ ಸರೋವರಗಳ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದೆ. ಕಳೆದ ಹತ್ತು ವರ್ಷಗಳಲ್ಲಿ ರಾಜ್ಯದಲ್ಲಿ 710 ಹೊಸ ಹಿಮನದಿ ಸರೋವರಗಳು ನಿರ್ಮಾಣವಾಗಿದ್ದು, ಅವುಗಳಲ್ಲಿ 9 ಸರೋವರಗಳನ್ನು ಅತ್ಯಂತ ಅಪಾಯಕಾರಿ ಎಂದು ಗುರುತಿಸಲಾಗಿದೆ. ಐಐಟಿ ಮಂಡಿ ನಡೆಸಿದ ಅಧ್ಯಯನದ ಪ್ರಕಾರ, 2025ರ ವೇಳೆಗೆ ಸಮುದ್ರಮಟ್ಟದಿಂದ 3,500 ಮೀಟರ್ಗಿಂತ ಹೆಚ್ಚು ಎತ್ತರದ ಪ್ರದೇಶಗಳಲ್ಲಿ ಒಟ್ಟು 2,076 ಹಿಮನದಿ ಸರೋವರಗಳನ್ನು ಗುರುತಿಸಲಾಗಿದೆ. 2015ಕ್ಕೆ ಹೋಲಿಸಿದರೆ ಸರೋವರಗಳ ಸಂಖ್ಯೆ ಸುಮಾರು 52 ಪ್ರತಿಶತ ಹೆಚ್ಚಾಗಿದೆ. ಇದೇ ಅವಧಿಯಲ್ಲಿ ಅವುಗಳ ಒಟ್ಟು ವಿಸ್ತೀರ್ಣವೂ 28.45 ಪ್ರತಿಶತ ಏರಿಕೆಯಾಗಿದೆ.



ಹಿಮನದಿ ಸರೋವರಗಳಲ್ಲಿ ನೀರಿನ ಪ್ರಮಾಣ ಹೆಚ್ಚಾಗಿ, ಅವುಗಳ ನೈಸರ್ಗಿಕ ತಡೆಗೋಡೆ ಒಡೆದರೆ ಏಕಾಏಕಿ ಭಾರಿ ಪ್ರಮಾಣದ ಪ್ರವಾಹ ಉಂಟಾಗುವ ಸಾಧ್ಯತೆಯಿದೆ. ಇದನ್ನು ಗ್ಲೇಶಿಯಲ್ ಲೇಕ್ ಔಟ್‌ಬರ್ಸ್ಟ್ ಫ್ಲಡ್ ಎಂದು ಕರೆಯಲಾಗುತ್ತದೆ.

ಅಧ್ಯಯನದಲ್ಲಿ 9 ಸರೋವರಗಳನ್ನು ಅತ್ಯಂತ ಅಪಾಯಕಾರಿ ವರ್ಗದಲ್ಲಿ ಗುರುತಿಸಲಾಗಿದ್ದು, 435 ಸರೋವರಗಳು ಹೆಚ್ಚಿನ ಅಪಾಯದ ಸಾಧ್ಯತೆ ಹೊಂದಿರುವ ಸೂಕ್ಷ್ಮ ಸರೋವರಗಳು ಎಂದು ಗುರುತಿಸಲಾಗಿದೆ. ಕಾಶಂಗ್, ಗೆಪಾಂಗ್ ಗಾಥ್, ಕಾಲಿಕುಂಡ್ ಮತ್ತು ಸಮುದ್ರತಾಪು ಸೇರಿದಂತೆ ಕೆಲವು ಸರೋವರಗಳು ವಿಶೇಷವಾಗಿ ಸೂಕ್ಷ್ಮವಾಗಿವೆ ಎಂದು ಸಂಶೋಧಕರು ಹೇಳಿದ್ದಾರೆ.

ಹಿಮನದಿಗಳ ಬದಲಾವಣೆಗೆ ನೈಸರ್ಗಿಕ ಕಾರಣಗಳ ಜತೆಗೆ ಮಾನವ ಚಟುವಟಿಕೆಗಳೂ ಕಾರಣವಾಗುತ್ತಿವೆ ಎಂದು ಐಐಟಿ ಮಂಡಿಯ ಸಂಶೋಧಕರು ಹೇಳಿದ್ದಾರೆ. ಪರ್ವತ ಪ್ರದೇಶಗಳಿಗೆ ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿರುವುದರಿಂದ ಹಿಮನದಿಗಳ ಮೇಲೆ ಧೂಳಿನ ಪ್ರಮಾಣವೂ ಹೆಚ್ಚುತ್ತಿದೆ. ಈ ಧೂಳು ಸೂರ್ಯನ ಶಾಖವನ್ನು ಹೆಚ್ಚು ಹೀರಿಕೊಳ್ಳುವುದರಿಂದ ಹಿಮ ಕರಗುವಿಕೆ ವೇಗಗೊಳ್ಳುತ್ತದೆ ಎಂದು ಐಐಟಿ ಮಂಡಿಯ ಪ್ರಾಧ್ಯಾಪಕ ಡೆರಿಕ್ಸ್ ಪ್ರೇಜ್ ಶುಕ್ಲಾ ತಿಳಿಸಿದ್ದಾರೆ.

**ಮುನ್ನೆಚ್ಚರಿಕೆಗೆ ಕೇಂದ್ರ ಸೂಚನೆ**

ಹಿಮನದಿ ಸರೋವರಗಳು ಒಡೆದು ಉಂಟಾಗಬಹುದಾದ ಪ್ರವಾಹ ಹಾಗೂ ಹಿಮಪಾತದ ಅಪಾಯವನ್ನು ಗಮನದಲ್ಲಿಟ್ಟುಕೊಂಡು ಹಿಮಾಲಯದ ರಾಜ್ಯಗಳು ಕಟ್ಟೆಚ್ಚರ ವಹಿಸುವಂತೆ ಕೇಂದ್ರ ಸರ್ಕಾರ ಸೂಚಿಸಿದೆ. ಕೇಂದ್ರ ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್ ಅಧ್ಯಕ್ಷತೆಯಲ್ಲಿ ನಡೆದ ಉನ್ನತಮಟ್ಟದ ಸಭೆಯಲ್ಲಿ ಹಿಮಾಚಲ ಪ್ರದೇಶ, ಉತ್ತರಾಖಂಡ, ಸಿಕ್ಕಿಂ, ಅರುಣಾಚಲ ಪ್ರದೇಶ ಹಾಗೂ ಜಮ್ಮು-ಕಾಶ್ಮೀರದ ಸಿದ್ಧತೆಗಳನ್ನು ಪರಿಶೀಲಿಸಲಾಯಿತು. ಅಪಾಯಕಾರಿ ಹಿಮನದಿ ಸರೋವರಗಳ ನಿರಂತರ ನಿಗಾ, ಮುನ್ನೆಚ್ಚರಿಕೆ ವ್ಯವಸ್ಥೆ ಬಲಪಡಿಸುವುದು ಹಾಗೂ ಯಾವುದೇ ಅಪಾಯ ಎದುರಾದಾಗ ಎಚ್ಚರಿಕೆ ಸಂದೇಶಗಳು ತ್ವರಿತವಾಗಿ ಜನರನ್ನು ತಲುಪುವಂತೆ ಕ್ರಮ ಕೈಗೊಳ್ಳಲು ರಾಜ್ಯಗಳಿಗೆ ಸೂಚಿಸಲಾಗಿದೆ. ಸಂಭವನೀಯ ಪ್ರವಾಹ ಪೀಡಿತ ಗ್ರಾಮಗಳನ್ನು ಮುಂಚಿತವಾಗಿ ಗುರುತಿಸಿ, ಸುರಕ್ಷಿತ ಸ್ಥಳ ಹಾಗೂ ತುರ್ತು ಸ್ಥಳಾಂತರ ವ್ಯವಸ್ಥೆ ಸಿದ್ಧಪಡಿಸುವಂತೆಯೂ ಕೇಂದ್ರ ಸೂಚಿಸಿದೆ. 2024ರಲ್ಲಿ ಅನುಮೋದಿಸಲಾದ GLOF ಅಪಾಯ ತಗ್ಗಿಸುವ ಯೋಜನೆಗೆ ವೇಗ ನೀಡುವಂತೆ ಕೇಂದ್ರ ಸರ್ಕಾರ ಸೂಚಿಸಿದ್ದು, ರಾಜ್ಯ ಸರ್ಕಾರಗಳು ಹಾಗೂ ವೈಜ್ಞಾನಿಕ ಸಂಸ್ಥೆಗಳ ನಡುವೆ ನಿರಂತರ ಸಮನ್ವಯಕ್ಕೆ ಒತ್ತು ನೀಡಿದೆ.

# ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನಕ್ಕೆ ಬಾಂಬ್ ಬೆದರಿಕೆ: ಸಿಬ್ಬಂದಿ, ಪ್ರಯಾಣಿಕ ವಿಚಾರಣೆ

**ನವದೆಹಲಿ, ಸೆ.4:** ದಮ್ಮಾಮ್‌ನಿಂದ ದೆಹಲಿಗೆ ತೆರಳುತ್ತಿದ್ದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನದಲ್ಲಿ ಬಾಂಬ್ ಬೆದರಿಕೆ ಬರೆದಿದ್ದ ಚೀಟಿ ಪತ್ತೆಯಾದ ಪ್ರಕರಣದ ತನಿಖೆ ತೀವ್ರಗೊಂಡಿದೆ. ಬೆದರಿಕೆ ಚೀಟಿಯಲ್ಲಿನ ಕೈಬರಹವು ವಿಮಾನದ ಒಬ್ಬ ಸಿಬ್ಬಂದಿಯ ಕೈಬರಹಕ್ಕೆ ಶೇ.60ರಿಂದ 70ರಷ್ಟು ಹೋಲಿಕೆಯಾಗಿರುವುದು ಪ್ರಾಥಮಿಕ ಪರೀಕ್ಷೆಯಲ್ಲಿ ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ಆ ಸಿಬ್ಬಂದಿಯನ್ನು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಇದೇ ವೇಳೆ, ವಿಮಾನದ ಶೌಚಾಲಯಕ್ಕೆ ಹಲವು ಬಾರಿ ತೆರಳಿದ್ದ ಎನ್ನಲಾದ ಓರ್ವ ಪ್ರಯಾಣಿಕನನ್ನೂ ವಿಚಾರಣೆಗೊಳಪಡಿಸಲಾಗಿದೆ.

ದಮ್ಮಾಮ್‌ನಿಂದ ದೆಹಲಿಗೆ ಹೊರಟಿದ್ದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನದಲ್ಲಿ ಒಟ್ಟು 32 ಪ್ರಯಾಣಿಕರು ಹಾಗೂ ಎಂಟು ಸಿಬ್ಬಂದಿ ಇದ್ದರು. ವಿಮಾನದ ಶೌಚಾಲಯದಲ್ಲಿ ಟಿಶ್ಯೂ ಪೇಪರ್ ಮೇಲೆ Bomb ಎಂದು ಬರೆಯಲಾಗಿದ್ದ ಬೆದರಿಕೆ ಸಂದೇಶವೊಂದು ಸಿಬ್ಬಂದಿಯ ಗಮನಕ್ಕೆ ಬಂದಿತ್ತು. ತಕ್ಷಣ ಮುನ್ನೆಚ್ಚರಿಕಾ ಕ್ರಮವಾಗಿ ವಿಮಾನವನ್ನು ಅಹಮದಾಬಾದ್‌ಗೆ ತಿರುಗಿಸಲಾಯಿತು. ಅಹಮದಾಬಾದ್ ವಿಮಾನ ನಿಲ್ದಾಣದಲ್ಲಿ ವಿಮಾನ ಇಳಿದ ಬಳಿಕ ಎಲ್ಲ 32 ಪ್ರಯಾಣಿಕರನ್ನು ಸುರಕ್ಷಿತವಾಗಿ ಕೆಳಗಿಳಿಸಲಾಯಿತು. ಭದ್ರತಾ ಪಡೆಗಳು ವಿಮಾನವನ್ನು ಸಂಪೂರ್ಣವಾಗಿ ಪರಿಶೀಲಿಸಿದರೂ ಯಾವುದೇ ಸ್ಫೋಟಕ ವಸ್ತು ಅಥವಾ ಅನುಮಾನಾಸ್ಪದ ವಸ್ತು ಪತ್ತೆಯಾಗಲಿಲ್ಲ. ಬೆದರಿಕೆ ಚೀಟಿ ಬರೆದವರು ಯಾರು ಎಂಬುದನ್ನು ಪತ್ತೆಹಚ್ಚಲು ವಿಮಾನದಲ್ಲಿದ್ದ ಪ್ರಯಾಣಿಕರು ಹಾಗೂ ಸಿಬ್ಬಂದಿಯ




ಕೈಬರಹದ ಮಾದರಿಗಳನ್ನು ಸಂಗ್ರಹಿಸಿ ಪರಿಶೀಲಿಸಲಾಗಿದೆ. ಈ ವೇಳೆ ಒಬ್ಬ ಸಿಬ್ಬಂದಿಯ ಕೈಬರಹದೊಂದಿಗೆ ಬೆದರಿಕೆ ಚೀಟಿಯ ಬರಹ ಶೇ.60-70ರಷ್ಟು ಹೋಲಿಕೆಯಾಗಿರುವುದು ತನಿಖಾಧಿಕಾರಿಗಳ ಗಮನಕ್ಕೆ ಬಂದಿದೆ. ಉಳಿದ ಏಳು ಸಿಬ್ಬಂದಿಗೆ ಅಹಮದಾಬಾದ್‌ನಿಂದ ತೆರಳಲು ಅವಕಾಶ ನೀಡಲಾಗಿದ್ದು, ಸಂಬಂಧಿತ ಸಿಬ್ಬಂದಿಯನ್ನು ಹೆಚ್ಚಿನ ವಿಚಾರಣೆಗಾಗಿ ತಡೆಹಿಡಿಯಲಾಗಿದೆ.

ಆದರೆ ಕೈಬರಹದ ಪ್ರಾಥಮಿಕ ಹೋಲಿಕೆಯಷ್ಟೇ ಆ ಸಿಬ್ಬಂದಿ ಬೆದರಿಕೆ ಚೀಟಿ ಬರೆದಿದ್ದಾರೆ ಎಂಬುದನ್ನು ಸಾಬೀತುಪಡಿಸುವುದಿಲ್ಲ ಎಂದು ತನಿಖಾ ಮೂಲಗಳು ತಿಳಿಸಿವೆ. ಪೊಲೀಸರು ಇತರ ಸಾಕ್ಷ್ಯಗಳು ಹಾಗೂ ವಿಮಾನದೊಳಗಿನ ಚಲನವಲನಗಳನ್ನೂ ಪರಿಶೀಲಿಸುತ್ತಿದ್ದಾರೆ.

ವಿಮಾನ ಪ್ರಯಾಣದ ವೇಳೆ ಹಲವು ಬಾರಿ ಶೌಚಾಲಯಕ್ಕೆ ತೆರಳಿದ್ದ ಎನ್ನಲಾದ ಓರ್ವ ಪ್ರಯಾಣಿಕನನ್ನೂ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಬೆದರಿಕೆ ಚೀಟಿಯನ್ನು ಶೌಚಾಲಯದಲ್ಲಿ ಯಾರು, ಯಾವ ಸಂದರ್ಭದಲ್ಲಿ ಇಟ್ಟರು ಎಂಬುದನ್ನು ಪತ್ತೆಹಚ್ಚಲು ಇಬ್ಬರ ಚಲನವಲನಗಳ ಬಗ್ಗೆ ತನಿಖೆ ನಡೆಸಲಾಗುತ್ತಿದೆ.

# ಸೈಬರ್ ಅಪರಾಧ ನಿಯಂತ್ರಣಕ್ಕೆ ಸಿಬಿಐನಿಂದ ಕಾರ್ಯಾಚರಣೆ

**ನವದೆಹಲಿ, ಸೆ.4:** ದೇಶಾದ್ಯಂತ ಕಳವಳ ಸೃಷ್ಟಿಸಿರುವ ಡಿಜಿಟಲ್ ಅರೆಸ್ಟ್ ರೂಪದ ಸೈಬರ್ ಅಪರಾಧಗಳನ್ನು ನಿಯಂತ್ರಿಸಲು ಕೇಂದ್ರ ತನಿಖಾ ಸಂಸ್ಥೆ ಬೃಹತ್ ಕಾರ್ಯಾಚರಣೆ ಆರಂಭಿಸಿದೆ.

ಆಪರೇಷನ್ ಚಕ್ರ-VI ಅಡಿಯಲ್ಲಿ ಆನ್‌ಲೈನ್ ವಂಚಕರ ಬೃಹತ್ ಜಾಲದ ಮೇಲೆ ದಾಳಿ ನಡೆಸಿರುವ ಅಧಿಕಾರಿಗಳು, ಕೋಟ್ಯಂತರ ರೂಪಾಯಿ ಅಕ್ರಮ ಹಣದ ವಹಿವಾಟನ್ನು ಪತ್ತೆ ಹಚ್ಚಿದ್ದಾರೆ. ಈ ಸೈಬರ್ ಬೆದರಿಕೆಗಳ ಗಂಭೀರತೆಯನ್ನು ಪರಿಗಣಿಸಿ ಸೈಬರ್ ಜಾಲದ ಮೂಲವನ್ನು ಭೇದಿಸುವಂತೆ ಸುಪ್ರೀಂ ಕೋರ್ಟ್ ನೀಡಿದ್ದ ನಿರ್ದೇಶನದ ಬೆನ್ನಲ್ಲೇ ಸಿಬಿಐ ಈ ಕಠಿಣ ಕ್ರಮ ಕೈಗೊಂಡಿದೆ.

ಸಂಘಟಿತ ಸೈಬರ್ ವಂಚನೆಗಳನ್ನು ತಡೆಯುವ ನಿಟ್ಟಿನಲ್ಲಿ ವಿವಿಧ ರಾಜ್ಯಗಳಲ್ಲಿ ದಾಖಲಾಗಿದ್ದ ಹಲವು ಪ್ರಮುಖ ಡಿಜಿಟಲ್ ಅರೆಸ್ಟ್ ಪ್ರಕರಣಗಳನ್ನು ಸಿಬಿಐ ತನ್ನ ತೆಕ್ಕೆಗೆ ತೆಗೆದುಕೊಂಡಿದೆ. ತನಿಖಾಧಿಕಾರಿಗಳು ಅಥವಾ ಪೊಲೀಸರ ಸೋಗಿನಲ್ಲಿ ಕರೆ ಮಾಡುತ್ತಿದ್ದ ವಂಚಕರು, ಸಾರ್ವಜನಿಕರಿಗೆ ಬೆದರಿಕೆಯೊಡ್ಡಿ ಆನ್‌ಲೈನ್ ಮೂಲಕ ಬಂಧನದಲ್ಲಿದ್ದರೆಂದು ನಂಬಿಸಿ ಕೋಟ್ಯಂತರ ರೂಪಾಯಿಗಳನ್ನು ದೋಚುತ್ತಿದ್ದರು. ಈ ಜಾಲದಲ್ಲಿದ್ದ ಬ್ಯಾಂಕ್ ಖಾತೆಗಳು ಹಾಗೂ ತಾಂತ್ರಿಕ ಸಾಕ್ಷ್ಯಗಳನ್ನು ಸುದೀರ್ಘವಾಗಿ



ವಿಶ್ಲೇಷಿಸಿದ ನಂತರ ಸಿಬಿಐ ಈ ಕಾರ್ಯಾಚರಣೆ ರೂಪಿಸಿತ್ತು.ಈ ಪೈಕಿ ಮೂರು ಬೃಹತ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಿಬಿಐ ದೇಶದ 20 ರಾಜ್ಯಗಳ 89 ಪ್ರದೇಶಗಳಲ್ಲಿ ಏಕಕಾಲಕ್ಕೆ ಶೋಧ ಕಾರ್ಯ ನಡೆಸಿದೆ. ಹಣದ ವಹಿವಾಟಿನ ಹಾದಿಯನ್ನು ಪತ್ತೆಹಚ್ಚುವುದು, ಅಕ್ರಮದ ಲಾಭ ಪಡೆದವರನ್ನು ಗುರುತಿಸುವುದು ಹಾಗೂ ಸಾಕ್ಷ್ಯಗಳು ನಾಶವಾಗದಂತೆ ತಡೆಯುವುದು ಈ ಮಿಂಚಿನ ದಾಳಿಯ ಮುಖ್ಯ ಉದ್ದೇಶವಾಗಿತ್ತು.

ದಾಳಿಗೊಳಗಾದ ಮೂರು ಪ್ರಕರಣಗಳಲ್ಲಿ ನಂಬಲಸಾಧ್ಯವಾದ ವಂಚನೆ ಪ್ರಕರಣಗಳು ಬೆಳಕಿಗೆ ಬಂದಿವೆ. ಪ್ರಸಿದ್ಧ ಬಿಟ್ಸ್ ಪಿಲಾನಿ ಸಂಸ್ಥೆಗೆ ಸೇರಿದ ವ್ಯಕ್ತಿಯೊಬ್ಬರನ್ನು ಸತತ ಮೂರು ತಿಂಗಳು ಡಿಜಿಟಲ್ ಅರೆಸ್ಟ್‌ನಲ್ಲಿಟ್ಟು ಬರೋಬ್ಬರಿ 7.67 ಕೋಟಿ ದೋಚಲಾಗಿತ್ತು. ಅಂತೆಯೇ ಗುಜರಾತ್‌ನಲ್ಲಿ ಪೊಲೀಸರ ಸೋಗಿನಲ್ಲಿ ವ್ಯಕ್ತಿಯೊಬ್ಬರನ್ನು ಮೂರು ತಿಂಗಳು ಬೆದರಿಸಿ 19.24 ಕೋಟಿ ದೋಚಲಿದ್ದರೆ, ಕರ್ನಾಟಕದಲ್ಲಿ ವ್ಯಕ್ತಿಯೊಬ್ಬರನ್ನು ಒಂದು ತಿಂಗಳು ಕಾಲ ಆನ್‌ಲೈನ್ ಬಂಧನದಲ್ಲಿರಿಸಿ 15.45 ಕೋಟಿ ವಂಚಿಸಲಾಗಿತ್ತು. ಶೋಧ ಕಾರ್ಯಾಚರಣೆ ವೇಳೆ ಅಪಾರ ಪ್ರಮಾಣದ ಬ್ಯಾಂಕಿಂಗ್ ದಾಖಲೆಗಳು, ಡಿಜಿಟಲ್ ಉಪಕರಣಗಳು ಹಾಗೂ ಮಹತ್ವದ ಸಾಕ್ಷ್ಯಗಳನ್ನು ಅಧಿಕಾರಿಗಳು ಜಪ್ತಿ ಮಾಡಿದ್ದು, ಇವುಗಳನ್ನು ತಾಂತ್ರಿಕ ವಿಧಿವಿಜ್ಞಾನ ಪರೀಕ್ಷೆಗೆ ಒಳಪಡಿಸಲಾಗುತ್ತಿದೆ. ಇದೇ ವೇಳೆ ಅಕ್ರಮ ಹಣ ವರ್ಗಾವಣೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದ ಮೂವರು ಆರೋಪಿಗಳನ್ನು ಸಿಬಿಐ ಬಂಧಿಸಿದೆ. ಹರಿಯಾಣದ ಆಕಾಶ್ ಎಂಬಾತ ತನ್ನ ಖಾತೆಗೆ ಬಂದ 1.95 ಕೋಟಿ ಹಣವನ್ನು ತಕ್ಷಣವೇ ಇತರೆ ಖಾತೆಗಳಿಗೆ ರವಾನಿಸಿದ್ದ. ಕೋಲ್ಕತ್ತಾದ ರಾಜಾ ಕರ್ಮಾಕರ್ ಎಂಬಾತ ತನ್ನ ಕಂಪನಿಯ ಖಾತೆಗೆ 1.5 ಕೋಟಿ ಪಡೆದಿದ್ದ ಹಾಗೂ ಜ್ಯೋತಿ ರಾಣಿ ಎಂಬಾಕೆ ವಂಚನೆಯ ಹಣವನ್ನು ನಗದು ರೂಪದಲ್ಲಿ ಹಿಂಪಡೆದು ಸಾಕ್ಷ್ಯ ನಾಶಕ್ಕೆ ಯತ್ನಿಸಿದ್ದಳು. ಈ ಬೃಹತ್ ಜಾಲದ ಹಿಂದೆ ಕೆಲಸ ಮಾಡುತ್ತಿರುವ ಇತರ ಪ್ರಮುಖ ಸೂತ್ರಧಾರರ ಬಂಧನಕ್ಕೆ ಸಿಬಿಐ ಶೋಧ ಕಾರ್ಯವನ್ನು ಇನ್ನಷ್ಟು ಚುರುಕುಗೊಳಿಸಿದೆ.

# ಕೆಓಎ ಕಚೇರಿ, ಕಂಠೀರವ ಸ್ಟೇಡಿಯಂಗೆ ಭೇಟಿಕೊಟ್ಟ ಜಪಾನ್ ಮುಖ್ಯ ರಾಜತಾಂತ್ರಿಕ ನವಾತ ಹಿರೋಶಿ



**ಬೆಂಗಳೂರು, ಸೆ.4:** ಬೆಂಗಳೂರಿನಲ್ಲಿರುವ ಜಪಾನಿನ ಕಾನ್ಸುಲ್ ಜನರಲ್ ನವಾತ ಹಿರೋಶಿ ಅವರು ಕರ್ನಾಟಕ ಒಲಿಂಪಿಕ್ ಭವನದಲ್ಲಿ ಕೆಓಎ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯ ಡಾ.ಕೆ.ಗೋವಿಂದರಾಜು ಅವರನ್ನು ಶುಕ್ರವಾರ ಭೇಟಿಯಾಗಿ ಮಾತುಕತೆ ನಡೆಸಿದರು.

ಕೆಓಎ ಭವನದಲ್ಲಿರುವ ಹಾಲ್ ಆಫ್ ಫೇಮ್ ಆವರಣದಲ್ಲಿ ಅಳವಡಿಸಲಾಗಿರುವ ಒಲಿಂಪಿಯನ್ಸ್ ಹಾಗೂ ಅರ್ಜುನ ಪ್ರಶಸ್ತಿ ಪುರಸ್ಕೃತರ ಚಿತ್ರಗಳನ್ನು ವೀಕ್ಷಿಸಿದ ನವಾತ ಹಿರೋಶಿ ಅವರಿಗೆ ಡಾ. ಕೆ.ಗೋವಿಂದರಾಜು ಅವರು ಮಾಹಿತಿ ನೀಡಿದರು. ಇದೇ ವೇಳೆ ಕೆಓಎ ಕಾರ್ಯವೈಖರಿ ಬಗ್ಗೆ ನವಾತ ಹಿರೋಶಿ ಮೆಚ್ಚುಗೆ ವ್ಯಕ್ತಪಡಿಸಿದರು. ಕರ್ನಾಟಕದ ಕ್ರೀಡಾ ಅಭಿವೃದ್ಧಿಗೆ ಸದಾ ಕೈಜೋಡಿಸುವುದಾಗಿ ತಿಳಿಸಿದರು. ಜೊತೆಗೆ ಕಂಠೀರವ ಒಳಾಂಗಣ ಹಾಗೂ ಹೊರಾಂಗಣ ಸ್ಟೇಡಿಯಂಗಳಿಗೆ ನವಾತ ಹಿರೋಶಿ ಭೇಟಿ ನೀಡಿದರು. ಬಳಿಕ ಹಿರೋಶಿ ಅವರಿಗೆ ಮೈಸೂರು ಪೇಟ ಹಾಕಿ ಡಾ.ಕೆ.ಗೋವಿಂದರಾಜು ಅವರು ಸನ್ಮಾನಿಸಿದರು. ಈ ವೇಳೆ ಕೆಓಎ ಪದಾಧಿಕಾರಿಗಳು ಹಾಜರಿದ್ದರು.







# ಫುಕೆಟ್-ದೆಹಲಿ ಏರ್ ಇಂಡಿಯಾ ವಿಮಾನದಲ್ಲಿ ತಾಂತ್ರಿಕ ದೋಷ ಪ್ರಕರಣ: ಪೈಲಟ್ ಡ್ರಗ್ ಪರೀಕ್ಷೆ ಸಾಬೀತು

**ನವದೆಹಲಿ,ಸೆ.4: ಫುಕೆಟ್‌**ನಿಂದ ದೆಹಲಿಗೆ ಬರುತ್ತಿದ್ದ ಏರ್ ಇಂಡಿಯಾ ವಿಮಾನದಲ್ಲಿ ತಾಂತ್ರಿಕ ದೋಷ ಕಂಡು ಬಂದ ಘಟನೆಗೆ ಸಂಬಂಧಿಸಿದ ತನಿಖೆಯಲ್ಲಿ ಆತಂಕಕಾರಿ ಮಾಹಿತಿ ಹೊರಬಿದ್ದಿದೆ. ವಿಮಾನದ ಪೈಲಟ್ ದೇಹದಲ್ಲಿ ಸೈಕೋಆಕ್ಟಿವ್ (ಮನಸ್ಸಿನ ಮೇಲೆ ಪರಿಣಾಮ ಬೀರುವ) ವಸ್ತುವಿನ ಅಂಶ ಪತ್ತೆಯಾಗಿದೆ ಎಂದು ವಿಮಾನ ಅಪಘಾತ ತನಿಖಾ ಬ್ಯೂರೋ ಪ್ರಾಥಮಿಕ ವರದಿಯಲ್ಲಿ ತಿಳಿಸಿದೆ.

ಆಗಸ್ಟ್ 4ರಂದು ಫುಕೆಟ್‌ನಿಂದ ದೆಹಲಿಗೆ ಬರುತ್ತಿದ್ದ ಏರ್ ಇಂಡಿಯಾ AI2379 ವಿಮಾನದಲ್ಲಿ ಈ ಘಟನೆ ನಡೆದಿತ್ತು. ಸುಮಾರು 36 ಸಾವಿರ ಅಡಿ ಎತ್ತರದಲ್ಲಿ ಹಾರಾಟ ನಡೆಸುತ್ತಿದ್ದಾಗ ವಿಮಾನದ ಮೂರು ಹೈಡ್ರಾಲಿಕ್ ವ್ಯವಸ್ಥೆಗಳಲ್ಲಿ ಏಕಾಏಕಿ ಒತ್ತಡ ಕಡಿಮೆಯಾಯಿತು. ಇದರಿಂದ ವಿಮಾನದ ಆಟೋಪೈಲಟ್ ಸ್ಥಗಿತಗೊಂಡು, ವಿಮಾನದ ಎತ್ತರದಲ್ಲೂ ಏರುಪೇರು ಉಂಟಾಯಿತು. ವಿಮಾನ ಕೆಲವೇ ಕ್ಷಣಗಳಲ್ಲಿ ಸುಮಾರು



300 ಅಡಿ ಕೆಳಕ್ಕೆ ಇಳಿದಿತ್ತು. ವಿಮಾನದಲ್ಲಿ 137 ಪ್ರಯಾಣಿಕರು ಹಾಗೂ 8 ಸಿಬ್ಬಂದಿ ಇದ್ದರು. ಘಟನೆ ಬಳಿಕ 20 ಪ್ರಯಾಣಿಕರು ಮತ್ತು ನಾಲ್ವರು ಸಿಬ್ಬಂದಿ ಸೇರಿದಂತೆ ಒಟ್ಟು 24 ಮಂದಿಗೆ ಗಾಯಗಳಾಗಿದ್ದವು. ವಿಮಾನ ದೆಹಲಿಯಲ್ಲಿ ಸುರಕ್ಷಿತವಾಗಿ ಇಳಿದಿತ್ತು. ವಿಮಾನ ದೆಹಲಿ ತಲುಪಿದ ಬಳಿಕ ನಿಯಮದಂತೆ ಇಬ್ಬರು ಪೈಲಟ್‌ಗಳಿಗೂ ಮಾದಕವಸ್ತು ಪರೀಕ್ಷೆ ನಡೆಸಲಾಯಿತು. ಪೈಲಟ್-ಇನ್-ಕಮಾಂಡ್ ಅವರ ಮೊದಲ ಪರೀಕ್ಷೆಯಲ್ಲಿ ಅನುಮಾನಾಸ್ಪದ ಫಲಿತಾಂಶ ಬಂದ ಹಿನ್ನೆಲೆಯಲ್ಲಿ ರಕ್ತದ ಮಾದರಿಯನ್ನು ಹೆಚ್ಚಿನ ಪರೀಕ್ಷೆಗೆ ಕಳುಹಿಸಲಾಗಿತ್ತು. ಆ ದೃಢೀಕರಣ ಪರೀಕ್ಷೆಯಲ್ಲೂ ಸೈಕೋಆಕ್ಟಿವ್ ವಸ್ತುವಿನ ಅಂಶ ಪತ್ತೆಯಾಗಿದೆ. ಮತ್ತೊಬ್ಬ ಪೈಲಟ್ನ ಪರೀಕ್ಷೆ ನೆಗೆಟಿವ್ ಬಂದಿದೆ.

ಈ ಬೆಳವಣಿಗೆಯನ್ನು ಗಂಭೀರವಾಗಿ ಪರಿಗಣಿಸಿರುವ AAIB, ಪೈಲಟ್ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯಕ್ಕೆ ಶಿಫಾರಸು ಮಾಡಿದೆ. ಪ್ರಕರಣದ ತಾಂತ್ರಿಕ ಹಾಗೂ ಇತರ ಅಂಶಗಳ ಕುರಿತು ತನಿಖೆ ಇನ್ನೂ ಮುಂದುವರಿದಿದ್ದು, ಅಂತಿಮ ವರದಿ ಬಳಿಕ ಹೆಚ್ಚಿನ ವಿವರಗಳು ಹೊರಬರಲಿವೆ.

ಆದರೆ, ಪೈಲಟ್ ದೇಹದಲ್ಲಿ ಸೈಕೋಆಕ್ಟಿವ್ ವಸ್ತು ಪತ್ತೆಯಾಗಿರುವುದು ಮತ್ತು ವಿಮಾನದ ಹೈಡ್ರಾಲಿಕ್ ಸಮಸ್ಯೆಗೆ ನೇರ ಸಂಬಂಧವಿದೆ ಎಂದು ತನಿಖಾ ಸಂಸ್ಥೆ ಈ ಹಂತದಲ್ಲಿ ಹೇಳಿಲ್ಲ. ತಾಂತ್ರಿಕ ವೈಫಲ್ಯ ಮತ್ತು ಇತರ ಕಾರಣಗಳ ಬಗ್ಗೆ ತನಿಖೆ ಮುಂದುವರಿದಿದೆ.







# ಪೆಂಗ್ವಿನ್ ಬದಲು ಹಾರ್ಪರ್ ಕಾಲಿನ್ಸ್‌ಗೆ ಸೋನಿಯಾ ಗಾಂಧಿ ಆತ್ಮಕಥೆ; ನ.10ಕ್ಕೆ ಬಿಲಾಂಗಿಂಗ್ ಬಿಡುಗಡೆ

**ನವದೆಹಲಿ:** ಕಾಂಗ್ರೆಸ್ ನಾಯಕಿ ಹಾಗೂ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಅವರ ಬಹುನಿರೀಕ್ಷಿತ ಆತ್ಮಕಥೆ Belonging: A Journey of Love ಇದೀಗ ಭಾರತದಲ್ಲಿ ಹಾರ್ಪರ್ ಕಾಲಿನ್ಸ್ ಮೂಲಕ ಪ್ರಕಟವಾಗಲಿದೆ.

ಈ ಹಿಂದೆ ಪುಸ್ತಕದ ಭಾರತೀಯ ಪ್ರಕಟಣೆಯ ವಿಚಾರದಲ್ಲಿ ಪೆಂಗ್ವಿನ್ ರ್‍ಯಾಂಡಮ್ ಹೌಸ್ ಇಂಡಿಯಾ ಹೆಸರು ಕೇಳಿಬಂದಿದ್ದರೂ, ಇದೀಗ ಹಾರ್ಪರ್ ಕಾಲಿನ್ಸ್ ಇಂಡಿಯಾ ಪುಸ್ತಕವನ್ನು ಪ್ರಕಟಿಸುವುದಾಗಿ ಘೋಷಿಸಿದೆ. ಪುಸ್ತಕವು ವಿಶ್ವಾದ್ಯಂತ ನ.10 ರಂದು ಬಿಡುಗಡೆಯಾಗಲಿದೆ.

ಪುಸ್ತಕದ ಪ್ರಕಟಣೆಗೆ ಸಂಬಂಧಿಸಿದಂತೆ ಪೆಂಗ್ವಿನ್ ರ್‍ಯಾಂಡಮ್ ಹೌಸ್ ಇಂಡಿಯಾ ಹಿಂದೆ ಸ್ಪಷ್ಟನೆ ನೀಡಿತ್ತು. ಸೋನಿಯಾ ಗಾಂಧಿ ಅವರು ಸಂಪಾದಕೀಯ ಬದಲಾವಣೆಗಳನ್ನು ಒಪ್ಪದ ಕಾರಣ ಪೆಂಗ್ವಿನ್ ಪುಸ್ತಕದಿಂದ ಹಿಂದೆಸರಿಯಿತು ಎಂಬ ವರದಿಗಳನ್ನು ಸಂಸ್ಥೆ ತಳ್ಳಿಹಾಕಿತ್ತು.

ಪುಸ್ತಕ ಪ್ರಕಟಿಸಲು ತಾವು ಸಿದ್ಧರಾಗಿದ್ದೆವು ಮತ್ತು ಆಸಕ್ತಿ ಹೊಂದಿದ್ದೆವು ಎಂದು ಸಂಸ್ಥೆ




ಹೇಳಿತ್ತು. ಲೇಖಕರ ಕೃತಿಯಲ್ಲಿರುವ ಮಾಹಿತಿಯನ್ನು ಪರಿಶೀಲಿಸುವುದು ಹಾಗೂ ಸಂಪಾದಕೀಯ ಸಲಹೆ ನೀಡುವುದು ಪ್ರಕಟಕರ ಸಾಮಾನ್ಯ ಜವಾಬ್ದಾರಿ ಎಂದು ಅದು ತಿಳಿಸಿತ್ತು.

ಈ ಬೆಳವಣಿಗೆಯ ಬೆನ್ನಲ್ಲೇ ಭಾರತದಲ್ಲಿ ಬಿಲಾಂಗಿಂಗ್ ಪುಸ್ತಕದ ಪ್ರಕಟಣೆಯ ಹೊಣೆ ಹಾರ್ಪರ್ ಕಾಲಿನ್ಸ್‌ಗೆ ಸಿಕ್ಕಿದೆ. ಸೋನಿಯಾ ಗಾಂಧಿ ಅವರ ಆತ್ಮಕಥೆ ವೈಯಕ್ತಿಕ ಹಾಗೂ ರಾಜಕೀಯ ಜೀವನದ ಹಲವು ಪ್ರಮುಖ ಘಟನೆಗಳನ್ನು ಒಳಗೊಂಡಿರುವ ನಿರೀಕ್ಷೆಯಿದೆ.

**ಆತ್ಮಕಥೆಯಲ್ಲಿ ಏನಿರಲಿದೆ?**

79 ವರ್ಷದ ಸೋನಿಯಾ ಗಾಂಧಿ ತಮ್ಮ ಜೀವನದ ಹಲವು ಅಪರೂಪದ ವೈಯಕ್ತಿಕ ಅನುಭವಗಳನ್ನು ಈ ಕೃತಿಯಲ್ಲಿ ಹಂಚಿಕೊಳ್ಳಲಿದ್ದಾರೆ. ಇಟಲಿಯಲ್ಲಿನ ಬಾಲ್ಯ, ಕೇಂಬ್ರಿಜ್‌ನಲ್ಲಿ ರಾಜೀವ್ ಗಾಂಧಿ ಅವರನ್ನು ಭೇಟಿಯಾದದ್ದು, ವಿವಾಹ, ಭಾರತದ ಪ್ರಮುಖ ರಾಜಕೀಯ ಕುಟುಂಬದ ಭಾಗವಾದದ್ದು ಸೇರಿದಂತೆ ಹಲವು ವಿಚಾರಗಳು ಪುಸ್ತಕದಲ್ಲಿರಲಿವೆ.

ಅತ್ತೆ ಹಾಗೂ ದಿವಂಗತ ಪ್ರಧಾನಿ ಇಂದಿರಾ ಗಾಂಧಿ ಹತ್ಯೆ, ಪತಿ ರಾಜೀವ್ ಗಾಂಧಿ ಹತ್ಯೆ, ಆ ಬಳಿಕ ಸೋನಿಯಾ ಗಾಂಧಿ ಸಾರ್ವಜನಿಕ ಜೀವನ ಮತ್ತು ರಾಜಕೀಯಕ್ಕೆ ಪ್ರವೇಶಿಸಿದ ಸಂದರ್ಭಗಳೂ ಆತ್ಮಕಥೆಯಲ್ಲಿ ಪ್ರಮುಖ ಸ್ಥಾನ ಪಡೆಯುವ ನಿರೀಕ್ಷೆಯಿದೆ. 2004ರಲ್ಲಿ ಪ್ರಧಾನಮಂತ್ರಿ ಹುದ್ದೆಯನ್ನು ಸ್ವೀಕರಿಸದ ನಿರ್ಧಾರ ಸೇರಿದಂತೆ ಅವರ ರಾಜಕೀಯ ಪಯಣದ ಪ್ರಮುಖ ಘಟ್ಟಗಳ ಬಗ್ಗೆಯೂ ವಿವರಗಳು ಇರಲಿವೆ.